ಸಂಪುಟ: 14 Volume | ಸಂಚಿಕೆ: 30 Issue | ಪುಟಗಳು 08 Pages | ಮಂಗಳವಾರ 05 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ದೈವ ಸಹಾಯವಿಲ್ಲದೆ ಜಯವಿಲ್ಲ. ಸ್ವಪ್ರಯತ್ನವಿಲ್ಲದೆ ದೈವ ಸಹಾಯವೂ ಇಲ್ಲ.
–ಡಿ.ವಿ.ಜಿ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ



ಎ ಐ ಸಿಸಿ ಪ್ರಧಾನ ಕಾರ್ಯದರ್ಶಿ ಕೆ. ಸಿ. ವೇಣುಗೋಪಾಲ್ ಸೂಚನೆ ಮೇರೆಗೆ ಕೇರಳದ ಕ್ಯಾಲಿ ಕಟ್ ಗೆ ಆಗಮಿಸಿದ ಸಚಿವ ಜಮೀರ್ ಅಹಮದ್ ಖಾನ್, ವಿಮಾನ ನಿಲ್ದಾಣದಲ್ಲಿ ಪಕ್ಷದ ಮುಖಂಡರಿಂದ ಸ್ವಾಗತ.



ವಿಜಾಪುರದಲ್ಲಿ ಸಚಿವ ಎಂಬಿ ಪಾಟೀಲರು ಪ್ರತಿಷ್ಠಿತ ದೈನಿಕ ಮಲ್ಲಮ್ಮ ನುಡಿಯನ್ನು ಅವಲೋಕಿಸುತ್ತಿರುವುದು.



ಹುಣಸೂರು ಉಪ ವಿಭಾಗಧಿಕಾರಿ ಕಾವ್ಯರಾಣಿ ರವರ ವಿವಾಹ ಮಹೋತ್ಸವವು ವಿಜಯನಗರ ಜಿಲ್ಲೆಯ ಹರಪ್ಪನಹಳ್ಳಿಯ ಸಮತಾ ಕಲ್ಯಾಣ ಮಂಟಪದಲ್ಲಿ ನೇರವೇರಿದ್ದು, ವಿವಾಹ ಮಹೋತ್ಸವದಲ್ಲಿ ಹುಣಸೂರಿನ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಭಾಗವಹಿಸಿ ನೂತನ ವಧು–ವರರಿಗೆ ಶುಭ ಕೋರಿದರು. ಈ ವೇಳೆ ಮಾಜಿಶಾಸಕರಾದ ಎಚ್ ಪಿ ಮಂಜುನಾಥ್‌ರವರನ್ನು ಸನ್ಮಾನಿಸಿ ಗೌರವಿಸಿದರು.



ಕೊಪ್ಪಳ ಜಿಲ್ಲಾ ಕೊಪ್ಪಳ ತಾಲೂಕು ಮೈನಹಳ್ಳಿಯ ಶ್ರೀ ಶಿವಶರಣೆ ಬುಡ್ಡಮ್ಮದೇವಿಯ ರಥೋತ್ಸವ ಅದ್ದೂರಿಯಾಗಿ ಜರುಗಿತು. ಶ್ರೀದೇವಿಯ ರಥೋತ್ಸವದ ಬಾವುಟವನ್ನು ಶ್ರೀಯುತ ಹೊನ್ನಕೆರಪ್ಪ ಮುದಕಪ್ಪ ಮುಸ್ಟೆಕೊಪ್ಪ ಸಾಕಿನ ಮುಸ್ಟೆಕೊಪ್ಪ 405101–00 ಗಳಿಗೆ ತೆಗೆದು ಕೊಂಡರು.

## ಆಕಸ್ಮಿಕ ಬೆಂಕಿ ಅವಘಡ, ಅಪಾರ ನಷ್ಟ

• ಮಲ್ಲಮ್ಮ ನುಡಿ ವಾರ್ತೆ ಯಲಬುರ್ಗಾ

ಪಟ್ಟಣದ ಶ್ರೀ ದುರ್ಗಾದೇವಿ ದೇವಸ್ಥಾನದ ಹಿಂಬಾಗದಲ್ಲಿರುವ ಹೊಂಬಳ ಅವರ ನೆಲಮಹಡಿಯ ಅಂಗಡಿಯೊಂದರಲ್ಲಿ ಆಕಸ್ಮಿಕ ಬೆಂಕಿ ಅವಘಡದಿಂದ ಅಂದಾಜು 10 ಲಕ್ಷಕ್ಕೂ ಅಧಿಕ ಸಲಕರಣೆಗಳು ಸುಟ್ಟು ಭಸ್ಮವಾಗಿವೆ.

ಹಾರ್ಡ್‌ವೇರ ಅಂಗಡಿಯಲ್ಲಿರು ಪೈಪ ,ವಿದ್ಯುತ್ ಸಾಮಾಗ್ರಿಗಳು ಹಾಗು ಪೆಂಟ್ಸ ಸೇರಿದಂತೆ ನೂರಾರು ತರಹದ ಸಾಮಾಗ್ರಿಗಳನ್ನು ಸಂಗ್ರಹ ಮಾಡಲಾಗಿತ್ತು, ಅಂದಾಜು 10 ಲಕ್ಷಕ್ಕೂ ಅಧಿಕ ಸಲಕರಣೆಗಳು ಸುಟ್ಟು ಭಸ್ಮವಾಗಿವೆ ಎಂದು ಅಂಗಡಿಯ ಮಾಲೀಕ ಚಿದಾನಂದ ಬಡಿಗೇರ ಅವರು ವೇದನೆಯಿಂದ ಪತ್ರಿಕೆಗೆ ತಿಳಿಸಿದ್ದಾರೆ. ಅಗ್ನಿಶಾಮಕ ದಳದವರು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿ ಮುಂದೆ ಆಗುವ ಅನಾಹುತಗಳನ್ನು ತಪ್ಪಿಸಿದ್ದಾರೆ, ಸರ್ಕಾರ ಆರ್ಥಿಕ ಸಹಾಯ ನಿಡಬೇಕು ಎಂದು ಅವರು ಮನವಿ ಮಾಡಿದ್ದಾರೆ.



## ಬಿಜೆಪಿಗೆ ಶಕ್ತಿ ತುಂಬಿದ ಶೃಂಗೇರಿ ಗೆಲುವು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪಂಚ ರಾಜ್ಯಗಳ ಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿ ಅಭೂತಪೂರ್ವ ಗೆಲವು ಸಾಧಿಸುತ್ತಿದೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್ ಅಶೋಕ್ ಹೇಳಿದ್ದಾರೆ. ಜೀವರಾಜ್ ಗೆಲುವಿನಿಂದ ಕಾಂಗ್ರೆಸ್ ವಿರುದ್ಧ ಹೋರಾಟ ಮಾಡಲು ನಮಗೆ ಇನ್ನಷ್ಟು ಶಕ್ತಿ ಬಂದಿದೆ ಎಂದು ವಿಶ್ಲೇಷಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಂಚರಾಜ್ಯದಲ್ಲಿ ನಮ್ಮ ಪಕ್ಷ ಗೆಲುವಿನ ಜಯಭೇರಿ ಸಾಧಿಸುತ್ತಿದೆ. ಇದು ಅತ್ಯಂತ ಸಂತಸದ ವಿಷಯ ಎಂದಿದ್ದಾರೆ.

ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲೂ ಬಿಜೆಪಿ ಅಭ್ಯರ್ಥಿ ಡಿ.ಎನ್.ಜೀವರಾಜ್ ಅವರು ಗೆಲುವು ಸಾಧಿಸಿದ್ದಾರೆ. ಅವರಿಗೆ ಅಭಿನಂದನೆಗಳು ಎಂದು ಹೇಳಿದರು. ಶೃಂಗೇರಿಯಲ್ಲಿ ಕಾಂಗ್ರೆಸ್ ಪಕ್ಷ ಓಟ್ ಚೋರಿ ಮಾಡಿತ್ತು. ಕಾಂಗ್ರೆಸ್ ಅಭ್ಯರ್ಥಿ ಗೆಲ್ಲುವ ರೀತಿ ಒತ್ತಡ ಹಾಕಿದ್ದರು. ಆದರೆ ಅದಕ್ಕೆ ತಡೆ ಬಿದ್ದಿದೆ. ಮರು ಮತ ಎಣಿಕೆಯಲ್ಲಿ ಅಂತಿಮವಾಗಿ ಜೀವರಾಜ್ ಅವರು ಗೆಲುವು ಸಾಧಿಸಿದ್ದಾರೆ ಎಂದು ವಿವರಿಸಿದ್ದಾರೆ.



# ಪಿಎಂ ಮೋದಿ ಮತ್ತೆ ಮ್ಯಾಜಿಕ್

## ದೀದಿಗೆ ಕೈ ತಪ್ಪಿದ ಪಶ್ಚಿಮ ಬಂಗಾಳ | ಬಿಜೆಪಿ ವಿಜಯ ಭೇರಿ | ರಾಜ್ಯದ ಎರಡೂ ಕ್ಷೇತ್ರ ಕಾಂಗ್ರೆಸ್ ವಶ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪಶ್ಚಿಮ ಬಂಗಾಳ ವಿಧಾನಸಭೆಯ ಫಲಿತಾಂಶ ಪ್ರಕಟವಾಗಿದೆ. ಆಡಳಿತವು ದೀದಿಯ ಕೈಪ್ಪಿದೆ. ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಬಿಜೆಪಿ ಮೊತ್ತ ಮೊದಲ ಬಾರಿಗೆ ಸ್ಪಷ್ಟ ಬಹುಮತದೊಂದಿಗೆ ಸರ್ಕಾರ ರಚಿಸಲು ಸಿದ್ಧತೆ ನಡೆಸಿದೆ. ಜೊತೆಗೆ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ(ಎನ್ಡಿಎ) ಆಡಳಿತ ನಡೆಸುವ ರಾಜ್ಯಗಳ ಸಂಖ್ಯೆ 21ಕ್ಕೆ ಏರಿಕೆಯಾಗಿದೆ.ಕೇಂದ್ರದಲ್ಲಿ ಪ್ರತಿಪಕ್ಷವಾದ ಇಂಡಿಯಾ ಬಣ, ತಮಿಳುನಾಡನ್ನೂ ಕಳೆದುಕೊಂಡಿದೆ. ಆದರೆ ಕೇರಳವನ್ನು ಗೆದ್ದ ಬಳಿಕ ದೇಶಾದ್ಯಂತ ಆರು ರಾಜ್ಯಗಳಲ್ಲಿ ತನ್ನ ನಾಯಕತ್ವವನ್ನು ಉಳಿಸಿಕೊಂಡಿದೆ.

**ರಾಜ್ಯಗಳ ಸಂಖ್ಯೆ 21ಕ್ಕೆ:** ಪಶ್ಚಿಮ ಬಂಗಾಳ ಗೆಲುವಿನ ನಂತರ ಬಿಜೆಪಿ 15 ರಾಜ್ಯಗಳಲ್ಲಿ ಸ್ವತಂತ್ರವಾಗಿ ಆಡಳಿತ ನಡೆಸಲಿದ್ದು, ಬಿಹಾರ(ಜೆಡಿ (ಯು) ಜೊತೆ), ಆಂಧ್ರಪ್ರದೇಶ (ಟಿಡಿಪಿ), ನಾಗಾಲ್ಯಾಂಡ್ (ನಾಗಾ ಪೀಪಲ್ಸ್ ಫ್ರಂಟ್), ಮೇಘಾಲಯ (ನ್ಯಾಷನಲ್ ಪೀಪಲ್ಸ್ ಪಾರ್ಟಿ) ಮೈತ್ರಿಕೂಟ ಆಡಳಿತವಿರುವ ರಾಜ್ಯಗಳ ಸಂಖ್ಯೆ 21ಕ್ಕೆ ಏರಿದೆ.

**ಯುಡಿಎಫ್ ಸರ್ಕಾರ:** ತಮಿಳುನಾಡಿನಿಂದ ಡಿಎಂಕೆ–ಕಾಂಗ್ರೆಸ್ ಮೈತ್ರಿಕೂಟವನ್ನು ಹೊರದಬ್ಬಲಾಗಿದ್ದು, ಹೊಸ 'ಜನ ನಾಯಗನ್' ವಿಜಯ್ ಅವರಿಂದ ಅಧಿಕಾರ ಕಳೆದುಕೊಳ್ಳಲಾಗಿದೆ. ಆದರೆ ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್(ಯುಡಿಎಫ್) ಕೇರಳದಲ್ಲಿ ಸರ್ಕಾರ ರಚಿಸಲು ಸಜ್ಜಾಗಿದೆ.







### ಮೂರು ರಾಜ್ಯಗಳಲ್ಲಿ ಮಾತ್ರ ಕೈ ಆಡಳಿತ

ಕಾಂಗ್ರೆಸ್ ಮೂರು ರಾಜ್ಯಗಳಲ್ಲಿ, ಕರ್ನಾಟಕ, ತೆಲಂಗಾಣ ಮತ್ತು ಹಿಮಾಚಲ ಪ್ರದೇಶದಲ್ಲಿ ಮಾತ್ರ ಸ್ವತಂತ್ರವಾಗಿ ಸರ್ಕಾರ ಹೊಂದಿದೆ. ಜಾರ್ಖಂಡ್‌ನಲ್ಲಿ ಹೇಮಂತ್ ಸೋರೆನ್ ನೇತೃತ್ವದ ಜೆಎಂಎಂ ಜೊತೆ ಕಾಂಗ್ರೆಸ್ ಮೈತ್ರಿ ಮಾಡಿಕೊಂಡಿದೆ. ಪಂಜಾಬ್‌ನಲ್ಲಿ ಭಗವಂತ್ ಮಾನ್ ನೇತೃತ್ವದ ಆಮ್ ಆದ್ಮಿ ಪಕ್ಷ(ಎಎಪಿ) ಭಾರತ ಬಣದ ಭಾಗವಾಗಿಲ್ಲ, ಆದರೆ ಕೇಂದ್ರದಲ್ಲಿ ಬಿಜೆಪಿಯನ್ನು ವಿರೋಧಿಸುತ್ತಿದೆ.

### ಸಮರ್ಥ್ ಶಾಮನೂರ್‌ಗೆ ಪ್ರಯಾಸದ ಗೆಲುವು

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ, ಸಮರ್ಥ್ ಶಾಮನೂರು ಕೊನೆಗೂ ಪ್ರಯಾಸದ ಗೆಲುವು ದಾಖಲಿಸಿದ್ದಾರೆ. ಕುತೂಹಲ ಕೆರಳಿಸಿದ್ದ ದಕ್ಷಿಣದಲ್ಲಿ ಸಮರ್ಥ್ ಶಾಮನೂರು ಅವರು ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ವಿರುದ್ಧ 4967 ಮತಗಳ ಅಂತರದಿಂದ ಗೆದ್ದಿದ್ದು, 20ನೇ ಸುತ್ತಿನ ಎಣಿಕೆ ಬಳಿಕ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಬೆಂಬಲಿಗರು ವಿಜಯೋತ್ಸವ ಆಚರಿಸಿದ್ದರೆ.

### ತಮಿಳುನಾಡು ನಾಯಕ ನಟ ಟಿವಿಕೆಗೆ ವಿಜಯ

ಬಹು ಭಾಷಾ ನಟಿ ತ್ರಿಶಾ ಕೃಷ್ಣನ್ ಅವರ ಹುಟ್ಟು ಹಬ್ಬದಂದೇ ತಮಿಳುನಾಡು ವಿಧಾನಸಭೆಯ ಚುನಾವಣೆಯ ಫಲಿತಾಂಶ ಪ್ರಕಟವಾಗಿದ್ದು, ಅಚ್ಚ–ರಿಯ ರೀತಿಯಲ್ಲಿ ದಳಪತಿ ವಿಜಯ್ ಅವರ ಟಿವಿಕೆ ಪಕ್ಷ 109ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆದು ಭರ್ಜರಿಯಾಗಿ ಮುನ್ನುಗುತ್ತಿದೆ. ನಟ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ(ಟಿವಿಕೆ) ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದು, ತಮಿಳುನಾಡಿನಲ್ಲಿ ಸರ್ಕಾರ ರಚಿಸುವುದು ಬಹುತೇಕ ಖಚಿತವಾಗಿದೆ.

### ಉಮೇಶ್ ಮೇಟಿ ಭರ್ಜರಿ ಗೆಲುವು

ಕರ್ನಾಟಕ ಉಪ ಚುನಾವಣೆ ಪೈಕಿ ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಭರ್ಜರಿ ಗೆಲುವು ಸಾಧಿಸಿದ್ದಾರೆ. ಈ ಗೆಲುವು ಕೇವಲ ಒಬ್ಬ ಅಭ್ಯರ್ಥಿಯ ಗೆಲುವಲ್ಲ, ಆಡಳಿತ ಪಕ್ಷದ ವರ್ಚಸ್ಸು, ವ್ಯವಸ್ಥಿತ ರಾಜಕೀಯ ತಂತ್ರಗಾರಿಕೆ, ಗ್ಯಾರಂಟಿ ಯೋಜನೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ತನ್ನ ಆಪ್ತನ ಮಗನಿಗಾಗಿ ಪಣತೊಟ್ಟಿದ್ದು ವಿಜಯಕ್ಕೆ ಪ್ರಮುಖ ಕಾರಣವಾಗಿದೆ.

## ಸಿಎಂ ಕುರ್ಚಿ ಸದಾ ಭದ್ರ: ಆರ್ಥಿಕ ಸಲಹೆಗಾರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಹಿರಿಯ ಕಾಂಗ್ರೆಸ್ ಶಾಸಕ ಹಾಗೂ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯ–ರೆಡ್ಡಿ ಅವರು ಸಿದ್ದರಾಮಯ್ಯ ಅವರ ಪರವಾಗಿ ಬ್ಯಾಟ್ ಬೀಸಿದ್ದಾರೆ.



ಕೊಪ್ಪಳ ತಾಲೂಕಿನ ಕೊಳೂರು–ಕಾತ್ರಳ್ಳಿ ಗ್ರಾಮದಲ್ಲಿ ಗವಿಮಠ ಮಹಿಳಾ ಪಿಯು ಕಾಲೇಜು ಮತ್ತು ವಸತಿ ನಿಲಯ ಉದ್ಘಾಟನಾ ಕಾರ್ಯಕ್ರಮದ ಬಳಿಕ ರಾಯರೆಡ್ಡಿ ಅವರು ಸುದ್ದಿಗಾರರ ಜೊತೆ ಮಾತನಾಡಿ, ಈ ಕ್ಷಣದಲ್ಲಿಯೇ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸುವ ಪ್ರಶ್ನೆಯೇ ಇಲ್ಲ. ಅವರು ಉಳಿದಿರುವ ಅವಧಿಗೂ ಸಿಎಂ ಆಗಿ ಮುಂದುವರೆಯುತ್ತಾರೆ ಎಂದು ಹೇಳಿದ್ದಾರೆ. ನಾಯಕತ್ವ ಬದಲಾವಣೆ ಕುರಿತು ಹೈಕಮಾಂಡ್ ನಿರ್ಧಾರ ಕೈಗೊಂಡರೆ, ಶಾಸಕರ ಅಭಿಪ್ರಾಯ ಪಡೆಯಬೇಕು. ಹಾಗೆ ಆಗಿದ್ದೇ ಆದರೆ ಮಲ್ಲಿಕಾರ್ಜುನ ಖರ್ಗೆ ಅವರನ್ನು ಮುಖ್ಯಮಂತ್ರಿ ಮಾಡುವುದನ್ನು ಶಾಸಕರು ಪರಿಗಣಿಸಬಹುದು ಎಂದು ಅಭಿಪ್ರಾಯಪಟ್ಟರು.

## ಸದ್ಯದಲ್ಲೇ ಸಂಪುಟ ವಿಸ್ತರಣೆ..?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಕಾಂಗ್ರೆಸ್ಸಿನಲ್ಲಿ ಮೂರು ವಿಚಾರಕ್ಕೆ ಸಂಬಂಧಿಸಿದಂತೆ, ಭಾರೀ ರಾಜಕೀಯ ಚಟುವಟಿಕೆಗಳು ನಡೆಯುತ್ತಿದೆ. ಯಾಕೆಂದರೆ, ಕಾಂಗ್ರೆಸ್ ನಾಯಕರೇ ಈಗಿನ ಗೊಂದಲಕ್ಕೆ ಹೈಕಮಾಂಡ್ ಸ್ಪಷ್ಟನೆಯನ್ನು ನೀಡಬೇಕೆಂದು ಬಹಿರಂಗವಾಗಿ ಹೇಳುತ್ತಿದ್ದಾರೆ.

ಮೇ ತಿಂಗಳಲ್ಲಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಮೂರು ವರ್ಷ ತುಂಬಲಿದೆ. ಹಿಂದೆ ನಡೆದಿದೆ ಎನ್ನಲಾಗುತ್ತಿರುವ ಅಧಿಕಾರ ಹಂಚಿಕೆಯ ಸುದ್ದಿ ಮತ್ತೆ ಗರಿಗೆದರಿದೆ. ಮೇ ಹದಿನೈದರೊಳಗೆ ಮುಖ್ಯಮಂತ್ರಿ ಬದಲಾವಣೆಯಾಗಲಿದ್ದಾರೆ ಎನ್ನುವ ಸುದ್ದಿ ಒಂದು ಕಡೆ, ಇನ್ನೊಂದು ಕಡೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಎನ್ನುವುದು ಇನ್ನೊಂದು ಕಡೆ. ಮತ್ತೊಂದು ಕಡೆ, ಸಚಿವ ಸಂಪುಟ ವಿಸ್ತರಣೆಯೋ ಅಥವಾ ಪುನರ್ ರಚನೆ ಆಗಲಿದೆ ಎನ್ನುವ ಸುದ್ದಿ. ದ್ಯ ಖಾಲಿ ಇರುವ ಎರಡು ಸ್ಥಾನಗಳು ಯಾವುದು? ಸಕ್ಕರೆ, ಜವಳಿ ಮತ್ತು ಎಪಿಎಂಸಿ ಇಲಾಖೆಯ ಸಚಿವ ಶಿವಾನಂದ ಪಾಟೀಲ್, ಬಹಿರಂಗವಾಗಿಯೇ ಸಚಿವ ಸ್ಥಾನ ತೊರೆಯಲು ಸಿದ್ದ ಎಂದು ಹೇಳಿದ್ದಾರೆ.

## ಸಂತ್ರಸ್ತ ಸದಸ್ಯರಿಗೆ ಪರಿಹಾರದ ಚೆಕ್

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಅಪಘಾತದಲ್ಲಿ ಮೃತಪಟ್ಟ ಕೆ.ಕೆ.ಆರ್.ಟಿ.ಸಿಯ ಕರ್ತವ್ಯನಿರತ ಹಾಗೂ ವೈಯಕ್ತಿಕ ಅಪಘಾತದಲ್ಲಿ ಮೃತಪಟ್ಟ ನೌಕರರ ಇಬ್ಬರು ಅವಲಂಬಿತರಿಗೆ ತಲಾ 1 ಕೋಟಿ ಪರಿಹಾರ ಚೆಕ್‌ಗಳನ್ನು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಅಧ್ಯಕ್ಷ ಅರುಣಕುಮಾರ ಎಂ.ವೈ. ಪಾಟೀಲ್ ವಿತರಿಸಿದ್ದಾರೆ.

ಇಲ್ಲಿನ ಕೆಕೆಆರ್‌ಟಿಸಿ ನಿಗಮದ ಕೇಂದ್ರ ಕಚೇರಿಯಲ್ಲಿ ಸಭಾಂಗಣದಲ್ಲಿ ಸಂಸ್ಥೆಯು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಜೊತೆಗಿನ ಒಪ್ಪಂದನ್ವಯ ಅಪಘಾದಲ್ಲಿ ನಿಧನಗೊಂಡ ನಿಗಮದ ಕೊಪ್ಪಳ ವಿಭಾಗದ ಕುಕನೂರನಲ್ಲಿ ನಿರ್ವಾಹಕನಾಗಿ ಕಾರ್ಯನಿರ್ವಹಿಸುತ್ತಿದ್ದ ನೌಕರ ಉಮೇಶ ಮತ್ತು ಯಾದಗಿರಿ ವಿಭಾಗದ ಯಾದಗಿರಿಯಲ್ಲಿ ಚಾಲಕನಾಗಿ ಕಾರ್ಯನಿರ್ವಹಿಸುತ್ತಿದ್ದ ರವಿ ಅವರ ಕುಟುಂಬಸ್ಥರಾದ ಕ್ರಮವಾಗಿ ವಿಜಯಲಕ್ಷ್ಮಿ ಮತ್ತು ಪಾರ್ವತಿ ಅವರಿಗೆ ತಲಾ 1 ಕೋಟಿ ರೂ.ಗಳ ಪರಿಹಾರ ಮೊತ್ತ ವಿತರಣೆ ಮಾಡಿದ್ದಾರೆ.

ಸಂಸ್ಥೆಯ ಆಂತರಿಕ ಗುಂಪು ವಿಮಾ ಯೋಜನೆ ಅಡಿಯಲ್ಲಿ ಮೃತಪಟ್ಟ 7 ಜನ ನೌಕರರ ಅವಲಂಭಿತರಿಗೂ ತಲಾ 10 ರಿಂದ 12.50 ಲಕ್ಷ ರೂ. ವರೆಗೆ ಪರಿಹಾರ ಮೊತ್ತ ವಿತರಿಸಿದ್ದಾರೆ.



> ಮೃತಪಟ್ಟವರ ಜೀವ ಅಮೂಲ್ಯವಾದದ್ದು. ಅದನ್ನು ಮರಳಿ ತರಲಾಗುವುದಿಲ್ಲ. ಆದರೆ, ಅವರ ಕುಟುಂಬದ ಆರ್ಥಿಕ ಸ್ವಾವಲಂಬನೆ ಹಾಗೂ ಮಕ್ಕಳ ವಿದ್ಯಾಭ್ಯಾಸಕಾಗಿ ನಿಗಮವು ರೂಪಿಸಿರುವ 1 ಕೋಟಿ ರೂ. ವಿಮೆ ಯೋಜನೆ ದೂರದೃಷ್ಟಿಯನ್ನು ಹೊಂದಿದೆ. ಅಪಘಾತದಲ್ಲಿ ಮೃತಪಟ್ಟ 2 ಕುಟುಂಬಕ್ಕೆ ಈ ವಿಮೆ ನೀಡಲಾಗಿದೆ.
> –ಅರುಣಕುಮಾರ ಎಂ.ವೈ. ಪಾಟೀಲ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಅಧ್ಯಕ್ಷ

**ಕಷ್ಟಪಟ್ಟು ಕೆಲಸ ಮಾಡುವ ಸಿಬ್ಬಂದಿಗೆ ಎಲ್ಲ ಸೌಲಭ್ಯ:** ಕೆ.ಕೆ.ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ ಅವರು ಮಾತನಾಡಿ, ಅಪಘಾತದಲ್ಲಿ ಮೃತ ನೌಕರರ ಕುಟುಂಬಗಳಿಗೆ ಬ್ಯಾಂಕಿನೊಂದಿಗೆ ಮಾಡಿಕೊಂಡ ಒಪ್ಪಂದದಂತೆ ಇಂದಿಲ್ಲಿ ಆರ್ಥಿಕ ನೆರವನ್ನು ಒದಗಿಸಲಾಗಿದೆ. ನಿಗಮದಲ್ಲಿ ಸಿಬ್ಬಂದಿ ಕಷ್ಟಪಟ್ಟು ಕೆಲಸ ಮಾಡುತ್ತಾರೆ. ಅವರಿಗೆ ನೀಡಬೇಕಾದ ಎಲ್ಲ ಸೌಲಭ್ಯಗಳನ್ನು ಕಲ್ಪಿಸಿ ಕೊಡಬೇಕಾದ್ದು ಸಂಸ್ಥೆಯ ಜವಾಬ್ದಾರಿಯಾಗಿದ್ದು, ಅದನ್ನು ಕೆ.ಕೆ.ಆರ್.ಟಿ.ಸಿ ಸಮರ್ಥವಾಗಿ ಮಾಡುತ್ತಿದೆ. ಪರಿಹಾರ ಮೊತ್ತ ಪಡೆದ ಕುಟುಂಬಸ್ಥರು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು. ಮಕ್ಕಳ ವಿದ್ಯಾಭ್ಯಾಸಕ್ಕೆ ಹಣ ತೆಗೆದಿಡುವಂತೆಯೂ ಕುಟುಂಬಸ್ಥರಿಗೆ ಸಲಹೆ ನೀಡಿದ್ದಾರೆ.

## ಪಕ್ಷಿಗಳಿಗೆ ದಾಹತೀರಿಸುವ ಯತ್ನ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಹೆಚ್ಚುತ್ತಿರುವ ಬಿಸಿಲು ಹಾಗೂ ತಾಪಮಾನದಿಂದ ಪಶು–ಪಕ್ಷಿಗಳಿಗೆ ನೀರಿನ ದಾಹ ತೀರಿಸುವ ಪ್ರಯತ್ನ ಮಾಡಲಾಗಿದೆ. ನಗರದ ಬರೀದ್ ಶಾಹಿ ಉದ್ಯಾನದಲ್ಲಿ ಪಕ್ಷಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡುವ ಅಭಿಯಾನ ಕೈಗೊಳ್ಳಲಾಗಿದೆ.

ವೀರಭದ್ರಪ್ಪ ಉಪ್ಪಿನ್ ಮಾತನಾಡಿ, 'ಪಕ್ಷಿಗಳು ಮತ್ತು ಪರಿಸರ ಪರಸ್ಪರ ಅವಲಂಬಿತವಾಗಿವೆ. ಪರಿಸರ ಸಮತೋಲನ ಕಾಪಾಡುವಲ್ಲಿ ಪಕ್ಷಿಗಳ ಪಾತ್ರ ಮಹತ್ವದ್ದಾಗಿದೆ. ಕಳೆದ ಹತ್ತು ವರ್ಷಗಳಿಂದ ನಗರದಲ್ಲಿ ವಿವಿಧ ಸ್ಥಳಗಳಲ್ಲಿ ಪಕ್ಷಿಗಳಿಗೆ ನೀರಿನ ವ್ಯವಸ್ಥೆ ಮಾಡಲಾಗುತ್ತಿದ್ದು, ಈ ಅಭಿಯಾನಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆಯುತ್ತಿದೆ ಎಂದು ತಿಳಿಸಿದ್ದಾರೆ.

ಡಾ. ನಂದಕುಮಾರ ತಾಂದಳೆ, ಈಶ್ವರ ಕನೇರಿ, ನ್ಯಾಯವಾದಿ ಮೋಹನ ಏಳನೂರಕರ್, ನೀಲಮ್ಮ ರೂಗನ್, ಯೋಗೇಂದ್ರ ಯದಲಾಪುರ, ಪುಷ್ಪಾ ಕಪಲಾಪುರ, ಅರುಣಾ ಪಾಟೀಲ್, ಮಲ್ಲಿಕಾರ್ಜುನ ಹಂಡೆ, ಗುರುಸ್ವಾಮಿ, ಸಂಜು ಪಾಟೀಲ್, ಮಲ್ಲಿಕಾರ್ಜುನ ಪಾಟೀಲ್, ಅಶೋಕ, ಸಂಜು ಶೀಲವಂತ, ವೀರಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.



> ಪಕ್ಷಿಗಳ ಮೇಲೆ ದಯೆ ತೋರಿಸಿ, ಅವುಗಳಿಗೆ ನೀರು ಒದಗಿಸುವುದು ನಮ್ಮ ಸಾಮಾಜಿಕ ಜವಾಬ್ದಾರಿ. ಪಕ್ಷಿಗಳು ತಮ್ಮ ಬಾಯಾರಿಕೆಯನ್ನು ಹೇಳಿಕೊಳ್ಳುವುದಿಲ್ಲ. ಆದ್ದರಿಂದ ಮನೆ ಆವರಣಗಳಲ್ಲಿ, ಗಿಡಮರಗಳ ಕೆಳಗೆ ಸಾಧ್ಯವಾದ ಸ್ಥಳಗಳಲ್ಲಿ ನೀರಿನ ಪಾತ್ರೆಗಳನ್ನು ಇಡುವುದು ಅವಶ್ಯ.
> –ಡಾ. ಗಂಗಾಂಬಿಕಾ ಪಾಟೀಲ್, ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷ

**ಯೋಗ ತಂಡದಿಂದ ಸನ್ಮಾನ, ಗೌರವ**

ಕಾರ್ಯಕ್ರಮದಲ್ಲಿ ಮೊದಲಬಾರಿಗೆ ಉದ್ಯಾನವನಕ್ಕೆ ಆಗಮಿಸಿದ ಡಾ. ಗಂಗಾಂಬಿಕಾ ಅಕ್ಕ ಅವರಿಗೆ ಯೋಗತಂಡದವತಿಯಿಂದ ಗೌರವಿಸಲಾಯಿತು. ನಿವೃತ್ತ ಸರಕಾರಿ ಉಪನಿರ್ದೇಶಕರಾದ ಗಂಗಪ್ಪ ಸಾವಳೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

## ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಸದ್ವಿನಿಯೋಗಕ್ಕಾಗಿ ಹೆಚ್ಚಿನ ಮಾಹಿತಿ ಸಂಗ್ರಹ: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

# ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



## ರೆಡ್ಡಿ ಸಮಾಜ ಒಟ್ಟುಗೂಡಲಿ ಕಾಲದ ಕರೆಯಾದ ಅಗತ್ಯ

ಇಂದಿನ ಸಮಾಜದಲ್ಲಿ ಏಕತೆ ಎಂಬುದು ಕೇವಲ ಒಂದು ಪದವಲ್ಲ, ಅದು ಶಕ್ತಿ. ಯಾವುದೇ ಸಮುದಾಯ ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳಬೇಕಾದರೆ, ಅಭಿವೃದ್ಧಿಯ ದಾರಿಗೆ ಸಾಗಬೇಕಾದರೆ, ಒಗ್ಗಟ್ಟು ಅತ್ಯಗತ್ಯ. ಇದೇ ಸಂದರ್ಭದಲ್ಲಿ ರೆಡ್ಡಿ ಸಮಾಜದ ಒಗ್ಗಟ್ಟಿನ ಪ್ರಶ್ನೆ ಹೆಚ್ಚು ಪ್ರಸ್ತುತವಾಗುತ್ತದೆ.

ರೆಡ್ಡಿ ಸಮಾಜವು ಇತಿಹಾಸ, ಸಂಸ್ಕೃತಿ ಮತ್ತು ಶ್ರಮದ ಮೂಲಕ ತನ್ನದೇ ಆದ ಗುರುತನ್ನು ಹೊಂದಿದೆ. ಕೃಷಿ, ಉದ್ಯಮ, ಶಿಕ್ಷಣ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ ಈ ಸಮುದಾಯದ ಕೊಡುಗೆ ಅಪಾರವಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಒಳಜಗಳ, ವೈಮನಸ್ಯ ಮತ್ತು ವೈಯಕ್ತಿಕ ಸ್ವಾರ್ಥಗಳು ಒಗ್ಗಟ್ಟಿಗೆ ಅಡ್ಡಿಯಾಗುತ್ತಿರುವುದು ನೋವುಂಟುಮಾಡುವ ಸಂಗತಿ.

ಒಗ್ಗಟ್ಟಿಲ್ಲದೆ ಯಾವುದೇ ಸಮುದಾಯ ಮುಂದೆ ಸಾಗಲು ಸಾಧ್ಯವಿಲ್ಲ. ಸಮಾಜದ ಒಳಗೆ ಇರುವ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ಸಾಮೂಹಿಕ ಹಿತದತ್ತ ಗಮನ ಹರಿಸುವುದು ಅಗತ್ಯವಾಗಿದೆ. ಹಿರಿಯರು ಮಾರ್ಗದರ್ಶನ ನೀಡಬೇಕು, ಯುವಕರು ಸಮಾಜ ಸೇವೆಯಲ್ಲಿ ತೊಡಗಬೇಕು. ಶಿಕ್ಷಣ, ಉದ್ಯೋಗ, ರಾಜಕೀಯದಲ್ಲಿ ಪರಸ್ಪರ ಸಹಕಾರದಿಂದ ಮಾತ್ರ ಸಮಾಜದ ಬಲ ಹೆಚ್ಚುತ್ತದೆ.

ಇಂದಿನ ಪೀಳಿಗೆಗೆ ಒಗ್ಗಟ್ಟಿನ ಮಹತ್ವವನ್ನು ತಿಳಿಸುವುದು ಅತ್ಯಗತ್ಯ. ಸಾಮಾಜಿಕ ಜಾಲತಾಣಗಳಲ್ಲಿ ವ್ಯರ್ಥವಾದ ಚರ್ಚೆಗಿಂತ, ಸಮಾಜದ ಅಭಿವೃದ್ಧಿಗೆ ಸಂಬಂಧಿಸಿದ ಚಿಂತನೆಗಳು ನಡೆಯಬೇಕು. ಬಡ ಮತ್ತು ಹಿಂದುಳಿದ ವರ್ಗದವರನ್ನು ಮೇಲಕ್ಕೆತ್ತುವುದು ನಮ್ಮ ಕರ್ತವ್ಯ.

ರಾಜಕೀಯದಲ್ಲಿಯೂ ರೆಡ್ಡಿ ಸಮಾಜ ಒಗ್ಗಟ್ಟಿನಿಂದ ಇದ್ದರೆ, ತನ್ನ ಹಕ್ಕುಗಳನ್ನು ಸಾಧಿಸಿಕೊಳ್ಳಲು ಸಾಧ್ಯ. ವಿಭಜನೆಗಳಿಂದ ಶಕ್ತಿ ಕುಂದುತ್ತದೆ, ಆದರೆ ಏಕತೆ ಶಕ್ತಿಯನ್ನು ದ್ವಿಗುಣಗೊಳಿಸುತ್ತದೆ.

ಕೊನೆಗೆ, "ನಾವು" ಎಂಬ ಭಾವನೆ ಬಲವಾಗಿದ್ರೆ ಮಾತ್ರ ಸಮಾಜ ಬಲವಾಗುತ್ತದೆ. ವೈಯಕ್ತಿಕ ಸ್ವಾರ್ಥಗಳನ್ನು ತೊರೆದು, ಸಮಾಜದ ಒಟ್ಟಾರೆ ಬೆಳವಣಿಗೆಯತ್ತ ಹೆಜ್ಜೆ ಇಡಬೇಕಾಗಿದೆ. ರೆಡ್ಡಿ ಸಮಾಜ ಒಟ್ಟುಗೂಡಿದರೆ, ಅದು ಇತರ ಸಮಾಜಗಳಿಗೆ ಮಾದರಿಯಾಗಬಹುದು.

ಒಗ್ಗಟ್ಟೇ ಶಕ್ತಿ – ಇದನ್ನು ಮನಗಂಡು ಮುಂದೆ ಸಾಗೋಣ.

## ಬಂಗಾಳದ ಗೆಲುವಲ್ಲ ಭಾರತದ ಗೆಲುವು: ಗುರುನಾಥ ರಾಜಗೀರಾ



**ಬೀದರ:** ಪಶ್ಚಿಮ ಬಂಗಾಳ ಭಾರತ ದೇಶದ ಭಾಗವಾಗಿಯೆ ಉಳಿಬೇಕಿತ್ತು ಒಂದು ವೇಳೆ ಮಮತಾ ಬ್ಯಾನರ್ಜಿ ಅವರು ಪುನಃ ಅಧಿಕಾರಕ್ಕೆ ಬಂದಿದ್ದರೆ ಬಾಂಗ್ಲಾ ನುಸುಳುಕೋರರ ಅಟ್ಟಹಾಸ ಯಥೇಚ್ಚವಾಗಿ ಮಂದುವರಿಯುತಿತ್ತು ಇದರಿಂದ ಇಡಿ ದೇಶಕ್ಕೆ ಮಾರಕವಾಗುತಿತ್ತು ಇದನ್ನು ತಪ್ಪಿಸಲು ಬಿಜೆಪಿ ಗೆಲ್ಲಲೆಬೇಕಿತ್ತು ಗೆದ್ದಿದೆ ಕೂಡ ಈ ಗೆಲುವು ಬಂಗಾಳದ ಗೆಲುವಲ್ಲ ಬದಲಾಗಿ ಭಾರತದ ಗೆಲುವಾಗಿದೆ ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿ ಗೃಹ ಸಚಿವ ಅಮಿತ ಶಾ ಅವರ ತಂತ್ರಗಾರಿಕೆ ಹಾಗೂ ಅಲ್ಲಿನ ಕಾರ್ಯಕರ್ತರ ಅವಿರತ ಪರಿಶ್ರಮಕ್ಕೆ ಸಾರ್ಥಕತೆ ಸಿಕ್ಕಿದೆ, ತಕ್ಷಣ ಇನ್ನುಳಿದ ಬಾಂಗ್ಲಾ ನುಸುಳುಕೋರರನ್ನು ಗಡಿಯಾಚೆ ಕಳಿಸುವ ಹಾಗೂ ದೇಶದ ಗಡಿಗೆ ಬೇಲಿ ಹಾಕುವ ಕೆಲಸ ಮಾಡಬೇಕು.ಅದೇ ರೀತಿ ಪುದುಚೇರಿ ಹಾಗೂ ಅಸ್ಸಾಂ ರಾಜ್ಯದ ಫಲಿತಾಂಶವು ಬಿಜೆಪಿಗೆ ಮತ್ತಷ್ಟು ಬಲ ತಂದಿದೆ ಇಂದು ಜಿಲ್ಲಾ ಸಹ ವಕ್ತಾರರು ಬಿಜೆಪಿ ಬೀದರ ಗುರುನಾಥ ರಾಜಗೀರಾ ತಿಳಿಸಿದ್ದಾರೆ.

# ಮಾಧ್ಯಮ ಶಾಂತಿ ಹರಡುವ ಶಕ್ತಿ ಆಗಲಿ: ಕೆ. ಶ್ರೀನಿವಾಸ

- **ಮಲ್ಲಮ್ಮ ನುಡಿ ವಾರ್ತೆ ಆಬೂರಾಜ್**




ಮಾಧ್ಯಮವು ಸಮಾಜದಲ್ಲಿ ಶಾಂತಿ ಹರಡುವ ಶಕ್ತಿಯಾಗಿ ಕಾರ್ಯನಿರ್ವಹಿಸಬೇಕು, ಯುದ್ಧ ಪ್ರಚೋದನೆಗೆ ಕಾರಣವಾಗಬಾರದು ಎಂದು ತೆಲಂಗಾಣ ಮೀಡಿಯಾ ಅಕಾಡೆಮಿ ಅಧ್ಯಕ್ಷ ಕೆ. ಶ್ರೀನಿವಾಸ ರೆಡ್ಡಿ ಹೇಳಿದರು.

ಅವರು ಬ್ರಹ್ಮಕುಮಾರಿಗಳ ಮೀಡಿಯಾ ವಿಭಾಗದ ವತಿಯಿಂದ ಮೌಂಟ್ ಆಬೂನಲ್ಲಿ ಆಯೋಜಿಸಲಾದ ನಾಲ್ಕು ದಿನಗಳ ರಾಷ್ಟ್ರೀಯ ಮೀಡಿಯಾ ಮಹಾ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

"ನಾವು ಕೇವಲ ಸುದ್ದಿಗಳನ್ನು ನೀಡುವವರಲ್ಲ, ಶಾಂತಿ ಮತ್ತು ಪ್ರೀತಿಯ ಸಂದೇಶವಾಹಕರಾಗಬೇಕು. ಸತ್ಯವನ್ನು ಸಹ ಪ್ರೀತಿಯಿಂದಲೇ ಹೇಳಬೇಕು. ವಿಶ್ವದಲ್ಲಿ ಶಾಂತಿ ಸ್ಥಾಪನೆಗಿಂತ ಮೊದಲು ನಮ್ಮೊಳಗೆ ಶಾಂತಿ ಬೆಳೆಸಿಕೊಳ್ಳಬೇಕು. ಪತ್ರಕರ್ತರು ದಿನಕ್ಕೆ ಐದು ನಿಮಿಷವಾದರೂ ರಾಜಯೋಗ ಅಭ್ಯಾಸ ಮಾಡಿದರೆ, ಅದರ ಸಕಾರಾತ್ಮಕ ಸ್ಪಂದನೆಗಳು ವಿಶ್ವದಾದ್ಯಂತ ಹರಡುತ್ತವೆ," ಎಂದು ಅವರು ಹೇಳಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಬ್ರಹ್ಮಕುಮಾರಿಗಳ ಸಂಸ್ಥೆಯ ಹೆಚ್ಚುವರಿ ಮಹಾಸಚಿವ ಬಿ.ಕೆ. ಮೃತ್ಯುಂಜಯ ಭಾಯಿ ಮಾತನಾಡಿ, "ಇಲ್ಲಿ ಭಾಗವಹಿಸಿದ ಪತ್ರಕರ್ತರು ಆಧುನಿಕ ನಾರದ ಮುನಿಗಳಂತೆ. ಶಾಂತಿ ಎಲ್ಲ ಧರ್ಮ, ಭಾಷೆ ಮತ್ತು ವರ್ಗಗಳಿಗೆ ಅಗತ್ಯ. ಶಾಂತಿ ನಮ್ಮ ಸ್ವಧರ್ಮ. ಅದು ಕೆಲಕಾಲಕ್ಕೆ ಮಾತ್ರವಲ್ಲ, ಸದಾಕಾಲ ಇರಬೇಕಾಗಿದೆ. ಸ್ವ–ಪರಿವರ್ತನೆಯ ಮೂಲಕವೇ ವಿಶ್ವ ಪರಿವರ್ತನೆ ಸಾಧ್ಯ. ಮಹತ್ವದ ಹಾಗೂ ಶ್ರೇಷ್ಠ ಸಂಕಲ್ಪಗಳಿಂದಲೇ ಶಾಂತಿ ಸ್ಥಾಪನೆ ಸಾಧ್ಯ," ಎಂದು ಹೇಳಿದರು. ಅಹಿಂಸೆ ಯಾವುದೇ ಜಾತಿ ಅಥವಾ ವರ್ಗಕ್ಕೆ ಸೀಮಿತವಲ್ಲ, ಅದು ಮಾನವಕುಲದ ಧರ್ಮ ಎಂದರು.

ವಿಶಿಷ್ಟ ಅತಿಥಿ ಅನುಭವ್ ಮಾತುರ್ (ಟೈಮ್ಸ್ ಸ್ಕೂಲ್ ಆಫ್ ಮೀಡಿಯಾ, ಗ್ರೇಟರ್ ನೋಯ್ಡಾ) ಮಾತನಾಡಿ, "ಇಂದಿನ ಮಕ್ಕಳ ಕಾರ್ಟೂನ್ ಕಾರ್ಯಕ್ರಮಗಳಲ್ಲೂ ಹಿಂಸಾಚಾರ ಹೆಚ್ಚಾಗಿದೆ. ಇದರಿಂದ ಮಕ್ಕಳಿಗೆ ಹಿಂಸಾಚಾರ ಸಾಮಾನ್ಯವೆಂಬ ಭಾವನೆ ಮೂಡುತ್ತಿದೆ. ಇದನ್ನು ತಡೆಯಲು ಮಾಧ್ಯಮ ಮತ್ತು ಪೋಷಕರು ಜವಾಬ್ದಾರಿ ವಹಿಸಬೇಕು," ಎಂದು ಕಳವಳ ವ್ಯಕ್ತಪಡಿಸಿದರು.

ರುಡ್ಕಿಯಿಂದ ಆಗಮಿಸಿದ ಡಿವೈನ್ ಮಿರರ್ ಸಂಪಾದಕ ಶ್ರೀಗೋಪಾಲ್ ನಾರ್ಸನ್ ಅವರು, ಬ್ರಹ್ಮಕುಮಾರಿಗಳ ಮೀಡಿಯಾ ವೇದಿಕೆಗಳನ್ನು ಪ್ರಶಂಸಿಸಿ, "ಇದು ಜಾಹೀರಾತು ರಹಿತ ಮಾಧ್ಯಮವಾಗಿದ್ದು, ವಿಶ್ವ ಶಾಂತಿಗಾಗಿ ಕಾರ್ಯನಿರ್ವಹಿಸುತ್ತಿದೆ," ಎಂದರು. ಗುರುಗ್ರಾಮದಿಂದ ಆಗಮಿಸಿದ ಶ್ರೀಮತ್ ಎಕ್ಸ್‌ಪ್ರೆಸ್ ಮುಖ್ಯ ಸಂಪಾದಕ ಡಿ.ಡಿ. ಮಿತ್ತಲ್ ಅವರು, "ಮಾಧ್ಯಮ ದೇಶದ ನಾಲ್ಕನೇ ಸ್ತಂಭ. ವಿಶ್ವ ಶಾಂತಿಯ ಹೊಣೆಗಾರಿಕೆ ಮಾಧ್ಯಮದ ಮೇಲಿದೆ, ಏಕೆಂದರೆ ಅದರ ಬಳಿ ಕಲಂ ಮತ್ತು ಮೈಕ್ ಎಂಬ ಬಲವಿದೆ," ಎಂದು ಹೇಳಿದರು.

ಮೀಡಿಯಾ ವಿಭಾಗದ ಉಪಾಧ್ಯಕ್ಷೆ ಬಿ.ಕೆ. ಸರಳಾ ದೀದಿ ಅವರು ಮಹಾಸಮ್ಮೇಳನದಲ್ಲಿ ರೂಪುಗೊಂಡ ಏಳು ಸೂತ್ರಗಳ ಕ್ರಿಯಾಯೋಜನೆಯನ್ನು ಸಭೆಗೆ ಮಂಡಿಸಿದರು. ಈ ಯೋಜನೆಗೆ ಏಕಮತದಿಂದ ಅನುಮೋದನೆ ದೊರೆಯಿತು. ಸಕಾರಾತ್ಮಕ ಮತ್ತು ಪರಿಹಾರಾಧಾರಿತ ಪತ್ರಿಕೋದ್ಯಮಕ್ಕೆ ಒತ್ತು ನೀಡುವುದು, ಸಾಂಸ್ಕೃತಿಕ ಸಂವಾದವನ್ನು ಉತ್ತೇಜಿಸುವುದು, ನೈತಿಕ ಮೌಲ್ಯಗಳನ್ನು ಬೆಳೆಸುವುದು ಮತ್ತು ಮಾಧ್ಯಮ ಕಾರ್ಯಕರ್ತರ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುವುದು ಇದರ ಮುಖ್ಯ ಅಂಶಗಳಾಗಿವೆ.

ಮೌಂಟ್ ಆಬೂದಲ್ಲಿನ ಜ್ಞಾನಸರೋವರದಲ್ಲಿ ನಡೆದ ಈ ನಾಲ್ಕು ದಿನಗಳ ರಾಷ್ಟ್ರೀಯ ಮೀಡಿಯಾ ಮಹಾಸಮ್ಮೇಳನದಲ್ಲಿ ದೇಶದ ವಿವಿಧ ಭಾಗಗಳಿಂದ 450ಕ್ಕೂ ಹೆಚ್ಚು ಪತ್ರಕರ್ತರು ಭಾಗವಹಿಸಿ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಕಾರ್ಯಕ್ರಮದ ಆರಂಭದಲ್ಲಿ ಬಿ.ಕೆ. ರಾಘವೇಂದ್ರ ಅವರು ಅತಿಥಿಗಳನ್ನು ಸ್ವಾಗತಿಸಿದರು. ಬ್ರಹ್ಮಕುಮಾರಿಗಳ ಮಹಿಳಾ ವಿಭಾಗದ ರಾಷ್ಟ್ರೀಯ ಸಂಯೋಜಕಿ ಬಿ.ಕೆ. ಸವಿತಾ ದೀದಿ ಅವರು ಪ್ರೇರಣಾದಾಯಕ ಭಾಷಣ ನೀಡಿದರು. ವಡೋದರಾದ ಮೀಡಿಯಾ ವಿಭಾಗದ ಸಬ್‌ಜೋನಲ್ ಸಂಯೋಜಕ ಬಿ.ಕೆ. ನರೇಂದ್ರ ಭಾಯಿ ಅವರು ಧನ್ಯವಾದಗಳನ್ನು ಅರ್ಪಿಸಿದರು. ಸಮಾರಂಭವನ್ನು ಅಜ್ಮೇರಿನಿಂದ ಆಗಮಿಸಿದ ಬಿ.ಕೆ. ಯೋಗಿನಿ ಸಹೋದರಿ ಯಶಸ್ವಿಯಾಗಿ ನಿರ್ವಹಿಸಿದರು.

## ಬಿಜೆಪಿ ಗೆಲುವು: ಬೀದರ್‌ನಲ್ಲಿ ವಿಜಯೋತ್ಸವ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಪಂಚರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಮೂರರಲ್ಲಿ ಬಿಜೆಪಿ ಭಾರಿ ಗೆಲುವು ಸಾಧಿಸಿದ ಪ್ರಯುಕ್ತ ಬಿಜೆಪಿ ಹಾಗೂ ಹಿಂದೂ ಪರ ಸಂಘಟನೆಗಳ ಕಾರ್ಯಕರ್ತರು ನಗರದಲ್ಲಿ ಸೋಮವಾರ ವಿಜಯೋತ್ಸವ ಆಚರಿಸಿದರು.

ಪಟಾಕಿ ಸಿಡಿಸಿ, ಪರಸ್ಪರ ಸಿಹಿ ತಿನ್ನಿಸಿ ಸಂಭ್ರಮಿಸಿದರು. ಬಿಜೆಪಿ ಮುಖಂಡ ರೇವಣಸಿದ್ದಪ್ಪ ಜಲಾದೆ ಮಾತನಾಡಿ, ಐದು ರಾಜ್ಯಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ ಐತಿಹಾಸಿಕ ಗೆಲುವು ದಾಖಲಿಸಿದೆ ಎಂದು ಹೇಳಿದರು.

ಪಶ್ಚಿಮ ಬಂಗಾಳದ ಜನ ಬಿಜೆಪಿಗೆ ಅಭೂತಪೂರ್ವ ಗೆಲುವು ನೀಡುವ ಮೂಲಕ ಹೊಸ ಇತಿಹಾಸ ಬರೆದಿದ್ದಾರೆ. ಮುಕ್ತ, ನ್ಯಾಯ ಸಮ್ಮತ ಚುನಾವಣೆ ಹಾಗೂ ಹಿಂದೂಗಳ ಒಗ್ಗಟ್ಟಿನ ಪ್ರಯತ್ನದ ಪ್ರತಿಫಲ ಇದಾಗಿದೆ ಎಂದು ತಿಳಿಸಿದರು.

ದೇಶದ್ರೋಹಿ ಹಾಗೂ ಸಮಾಜ ಘಾತುಕ ಚಟುವಟಿಕೆಗಳ ಕಾರಣ ಪಶ್ಚಿಮ ಬಂಗಾಳ ರಾಜ್ಯ ಸರ್ಕಾರ ದೇಶಕ್ಕೆ ಆಘಾತಕಾರಿಯಾಗಿ ಪರಿಣಮಿಸಿತ್ತು. ಭ್ರಷ್ಟಾಚಾರ, ದಬ್ಬಾಳಿಕೆ ಸೇರಿ ಜನ ವಿರೋಧಿ ಆಡಳಿತದಿಂದ ಅಲ್ಲಿಯ ಜನ ಬೇಸತ್ತಿದ್ದರು. ಟಿಎಂಸಿಯನ್ನು ಕಿತ್ತೊಗೆದಿದ್ದರಿಂದ ಈಗ ಅವರಿಗೆ ನಿಜವಾದ ಸ್ವಾತಂತ್ರ್ಯ ಸಿಕ್ಕಿದೆ ಎಂದು ಹೇಳಿದರು. ಮೂರು ರಾಜ್ಯಗಳಲ್ಲಿ ಬಿಜೆಪಿ ಗೆಲುವು ಸಾಧಿಸಿರುವುದು ದೇಶದ ಜನ ಬಿಜೆಪಿ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ನಿದರ್ಶನವಾಗಿದೆ ಎಂದರು.

## ಪಿಎಸ್‌ಐ ಹುದ್ದೆಗೆ ನೇಮಕ, ಸನ್ಮಾನ

- **ಮಲ್ಲಮ್ಮ ನುಡಿ ವಾರ್ತೆ ಮುದಗಲ್**



ಸಮೀಪದ ಆಮದಿಹಾಳ ಗ್ರಾಮದ ವೆಂಕನಗೌಡ ಭೀಮನಗೌಡ ಪೊ.ಪಾ ಇವರು 2025 ನೇ ಸಾಲಿನಲ್ಲಿ ಪಿಎಸ್‌ಐ ಹುದ್ದೆಗೆ ನೇಮಕವಾದ ಹಿನ್ನೆಲೆಯಲ್ಲಿ ಲಿಂಗಸುಗೂರು ಶಾಸಕರಾದ ಮಾನಪ್ಪ ವಜ್ಜಲ್ ಅವರು ರವಿವಾರ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಶಾಸಕರು ಆಮದಿಹಾಳ ಗ್ರಾಮದ ಶ್ರೀ ಮಾರುತೇಶ್ವರ ಹಾಗೂ ಶ್ರೀ ಗದ್ದೆಮ್ಮ ದೇವಿ ಜಾತ್ರಾ ಮಹೋತ್ಸವ ಅಂಗವಾಗಿ ದೇವರ ದರ್ಶನ ಪಡೆಯಲು ಆಗಮಿಸಿದ ಸಂದರ್ಭದಲ್ಲಿ ಪಿಎಸ್‌ಐ ಹುದ್ದೆಗೆ ನೇಮಕವಾದ ಆಮದಿಹಾಳ ಗ್ರಾಮದ ನಿವಾಸಿ ವೆಂಕನಗೌಡ ಪೊ.ಪಾ ಇವರ ಮನೆಗೆ ಆಗಮಿಸಿ ಶಾಸಕರು ಸನ್ಮಾನಿಸಿ ಗೌರವಿಸಿದರು.

ನಂತರ ಮಾತನಾಡಿದ ಶಾಸಕರು ನಮ್ಮ ಆತ್ಮೀಯರಾದ ಭೀಮನಗೌಡ ಪೊ.ಪಾ ಹಾಗೂ ಬಸಮ್ಮ ಇವರ ಸುಪುತ್ರ ಪಿಎಸ್‌ಐ ಹುದ್ದೆಗೆ ನೇಮಕ ವಾಗಿರುವುದು ಬಹಳ ಸಂತೋಷವಾಯಿತು. ಇವರ ಸಾಧನೆ ಹೀಗೆ ಮುಂದುವರಿಯಲಿ ಗ್ರಾಮಕ್ಕೆ ಮತ್ತು ತಾಲೂಕಿಗೆ ಕೀರ್ತಿ ತಂದಿದ್ದಾರೆ ಎಂದು ಕೊಂಡಾಡಿದರು.

ಆಮದಿಹಾಳ ಗ್ರಾಮದ ಭೀಮನಗೌಡ ಪೊ.ಪಾ ಹಾಗೂ ಬಸಮ್ಮ ಇವರ ಹಿರಿಯ ಸುಪುತ್ರ ವೆಂಕನಗೌಡ ಪೊ.ಪಾ ಇವರು ಸತತ ಕಠಿಣ ಪರಿಶ್ರಮದಿಂದ 2025 ನೇ ಸಾಲಿನಲ್ಲಿ ಪಿಎಸ್‌ಐ ಹುದ್ದೆಗೆ ನೇಮಕ ವಾಗಿದ್ದು ಆಮದಿಹಾಳ ಗ್ರಾಮಕ್ಕೆ ಹೆಮ್ಮೆಯ ವಿಷಯವಾಗಿದೆ. ಮುಖಂಡರಾದ ಗಿರಿಮಲ್ಲನಗೌಡ ಕರಡಕಲ್, ನಾಗಭೂಷಣ ಸಾಹುಕಾರ, ನಿಂಗಣ್ಣ ದೇವಿಕೇರಿ, ಹನುಮಂತಪ್ಪ ಕಂದಗಲ್, ನಿಂಗನಗೌಡ ಪಾಟೀಲ್ ಇತರರು ಉಪಸ್ಥಿತರಿದ್ದರು.

## ಶ್ರೀಶೈಲ ಮಲ್ಲಿಕಾರ್ಜುನ ಪ್ರಾಣ ಪ್ರತಿಷ್ಠಾಪನಾ ಮಹೋತ್ಸವ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**




ಗಣೇಶಪುರ ಗ್ರಾಮದ ಶ್ರೀ ಆನಂದ ವನಾಶ್ರಮದ ಆವರಣದಲ್ಲಿರುವ ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಮೇ 1ರಂದು ಮೂರ್ತಿ ಪ್ರಾಣ ಪ್ರತಿಷ್ಠಾಪನಾ ಮಹೋತ್ಸವವು ಅತ್ಯಂತ ವೈಭವ ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ಸಂಪನ್ನಗೊಂಡಿತು.

ವೇದಮೂರ್ತಿ ಶ್ರೀ ರಾಜ್ಯಮಲ್ಲಯ್ಯ ಬೋರಂಚಿ ಸ್ವಾಮೀಜಿ ಅವರ ದಿವ್ಯ ಮಾರ್ಗದರ್ಶನದಲ್ಲಿ ನಡೆದ ಈ ಕಾರ್ಯಕ್ರಮದ ಮೂರನೇ ದಿನದ ಪೂಜಾ ಕೈಂಕರ್ಯಗಳಲ್ಲಿ ಮಹಾ ಗಣಪತಿ, ರೇವಣಸಿದ್ದೇಶ್ವರ, ನಾಗದೇವತೆ, ಶ್ರೀ ಹನುಮಂತ ದೇವರು ಹಾಗೂ ನಂದಿ ಸಹಿತ ಶ್ರೀಶೈಲ ಮಲ್ಲಿಕಾರ್ಜುನ ಬಾಣಲಿಂಗ ಮತ್ತು ಧ್ಯಾನಸ್ಥ ಶಿವನ ವಿಗ್ರಹಗಳನ್ನು ಮಂತ್ರಘೋಷಗಳೊಂದಿಗೆ ಪ್ರತಿಷ್ಠಾಪಿಸಲಾಯಿತು.

ಮಧ್ಯಾಹ್ನ 12:35ರ ಶುಭ ಮುಹೂರ್ತದಲ್ಲಿ ಸದ್ಗುರು ಶ್ರೀ ಕಾಶಿನಾಥ್ ಮಹಾರಾಜ್ ಪಂಚಗಾಮ ಅವರ ಸಕಲ ಮತ ಸ್ಥಾಪಿತ ಆಶಯದೊಂದಿಗೆ ಪ್ರತಿಷ್ಠಾಪನಾ ಕಾರ್ಯ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ರಾಜೇಶ್ವರ ಶಿವಾಚಾರ್ಯ ಕಟ್ಟಿಮನಿ, ಶ್ರೀ ರಾಚಯ್ಯ ಸ್ವಾಮಿಗಳು, ಶ್ರೀ ಗಂಗಾಧರ ಶಿವಾಚಾರ್ಯ ಲಾಡಗೇರಿ, ಶ್ರೀ ಹಾವಲಿಂಗ ಶಿವಾಚಾರ್ಯ ಹಲಬರ್ಗ ಹಾಗೂ ಅಮೃತಪ್ಪ ಪೂಜಾರಿ ಮತ್ತು ಸಿದ್ದಲಿಂಗೇಶ್ವರ ಸ್ವಾಮೀಜಿ ಬೋರಂಚಿ ಅಯ್ಯಪ್ಪ ಸ್ವಾಮಿ ಸೇರಿದಂತೆ ಅನೇಕ ಮಠಾಧೀಶರು ಉಪಸ್ಥಿತರಿದ್ದು ಭಕ್ತರಿಗೆ ಆಶೀರ್ವಚನ ನೀಡಿದರು. ಇದೇ ಸಂದರ್ಭದಲ್ಲಿ ಶ್ರೀ ರಾಜೇಶ್ವರ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ವಟುಗಳಿಗೆ ಅಯ್ಯಾಚಾರ ಹಾಗೂ ಇಷ್ಟಲಿಂಗ ದೀಕ್ಷಾ ಸಂಸ್ಕಾರಗಳನ್ನು ನೆರವೇರಿಸಲಾಯಿತು.

ಇದೇ ಸಂದರ್ಭದಲ್ಲಿ ದೇವಸ್ಥಾನಕ್ಕಾಗಿ ಭೂದಾನ ಮಾಡಿದ ದಾನಿಗಳಾದ ಶ್ರೀಮತಿ ಜಗದೇವಿ ಹಾಗೂ ಡಾ. ಶರಣಪ್ಪ ಬಾಲೋಡೆ ದಂಪತಿಗಳನ್ನು ಭಕ್ತಿಯಿಂದ ಸನ್ಮಾನಿಸಲಾಯಿತು. ಪೂಜಾ ಕಾರ್ಯಕ್ರಮದಲ್ಲಿ ಡಾ. ಶರಣಪ್ಪ ಬಾಲೋಡೆ ಪರಿವಾರ ಹಾಗೂ ಪ್ರಕಾಶ್ ದಂಪತಿಗಳ ಕುಟುಂಬದವರು ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಈ ಪುಣ್ಯ ಕಾರ್ಯಕ್ರಮಕ್ಕೆ ಡಾ. ಮಂಜುನಾಥ ಮದರ್ಗಿ, ವಿಜಯಕುಮಾರ್ ಪಾಟೀಲ್ ಗಾದಗಿ, ಸಾಯಿ ಸ್ಫೂರ್ತಿ ಕಾಲೇಜಿನ ಪ್ರಾಂಶುಪಾಲರಾದ ಶೇಖರ್ ಬಿರಾದರ್, ನಗರಸಭೆ ಸದಸ್ಯರಾದ ಪ್ರಕಾಶ್ ಗಣೇಶಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ಭಕ್ತಾದಿಗಳು ಪಾಲ್ಗೊಂಡು ದೇವರ ದರ್ಶನ ಪಡೆದರು. ಕಾರ್ಯಕ್ರಮದ ನಂತರ ಭಕ್ತಾದಿಗಳಿಗೆ ಮಹಾಪ್ರಸಾದ ವಿತರಣೆ ಮಾಡಲಾಯಿತು.

# ಕಾಂಗ್ರೆಸ್ ಅಭ್ಯರ್ಥಿಗಳ ಭರ್ಜರಿ ಗೆಲುವು; ಕೈ ಕಾರ್ಯಕರ್ತರಿಂದ ಸಂಭ್ರಮ



- **ಮಲ್ಲಮ್ಮ ನುಡಿ ವಾರ್ತೆ ಚಿಂತಾಮಣಿ**

ರಾಜ್ಯದಲ್ಲಿ ನಡೆದ ಉಪ ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ದಾವಣಗೆರೆ ಮತ್ತು ಬಾಗಲಕೋಟೆ ಕ್ಷೇತ್ರಗಳಲ್ಲಿ ಭರ್ಜರಿ ಜಯ ದಾಖಲಿಸಿದ್ದಾರೆ.ಈ ಗೆಲುವಿನ ಸುದ್ದಿ ತಿಳಿಯುತ್ತಿದ್ದಂತೆಯೇ ಚಿಂತಾಮಣಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ನಗರದ ತಾಲೂಕು ಆಫೀಸ್ ಮುಂಭಾಗ ಪಟಾಕಿ ತಿಳಿಸಿ ಸಿಹಿ ಹಂಚಿ ಸಂಭ್ರಮ ಮಾಡಿದರು.

ದಾವಣಗೆರೆ ಮತ್ತು ಬಾಗಲಕೋಟೆಯಲ್ಲಿ ಕಾಂಗ್ರೆಸ್ ಜಯಭೇರಿ ಬಾರಿಸಿದ ಬೆನ್ನಲ್ಲೇ ಚಿಂತಾಮಣಿಯ ರಸ್ತೆಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು ದೊಡ್ಡ ಸಂಖ್ಯೆಯಲ್ಲಿ ಜಮಾಯಿಸಿದರು.

ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಹಾಗೂ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಅವರ ಭಾವಚಿತ್ರವಿರುವ ಬ್ಯಾನರ್‌ಗಳನ್ನು ಹಿಡಿದ ಕಾರ್ಯಕರ್ತರು,ಪಕ್ಷದ ಬಾವುಟಗಳನ್ನು ಬೀಸುತ್ತಾ ಘೋಷಣೆಗಳನ್ನು ಕೂಗಿದರು.

ಗೆಲುವಿನ ಕುರಿತು ಮಾತನಾಡಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮುರುಗುಮಲ್ಲ ಲಕ್ಷ್ಮೀನಾರಾಯಣ ರೆಡ್ಡಿ,ಮುಖಂಡರಾದ ಶೇಕ್ ಸಾಧಿಕ್ ರಜ್ವಿ ಇದು ಜನರ ಗೆಲುವು ಮತ್ತು ಪಕ್ಷದ ಸಂಘಟಿತ ಹೋರಾಟಕ್ಕೆ ಸಂದ ಜಯ ಎಂದು ಬಣ್ಣಿಸಿದರು.

2028 ರಲ್ಲಿ ಬರುವ ಚುನಾವಣೆಯಲ್ಲಿ ಚಿಂತಾಮಣಿ ವಿಧಾನಸಭಾ ಕ್ಷೇತ್ರದಿಂದ ಡಾ.ಎಂ.ಸಿ. ಸುಧಾಕರ್ ಅವರು ಭಾರಿ ಬಹುಮತದೊಂದಿಗೆ ಜಯಗಳಿಸುವುದು ನಿಶ್ಚಿತ ಎಂದು ಹೇಳಿದರು.

ಕ್ಷೇತ್ರದ ಅಭಿವೃದ್ಧಿ ಮತ್ತು ಕಾಂಗ್ರೆಸ್ ಪಕ್ಷದ ಸಿದ್ಧಾಂತಗಳ ಮೇಲೆ ಜನರಿಗೆ ನಂಬಿಕೆಯಿದೆ ಡಾ. ಸುಧಾಕರ್ ಅವರ ನೇತೃತ್ವದಲ್ಲಿ ಕ್ಷೇತ್ರವು ಹೊಸ ಆಯಾಮವನ್ನು ಪಡೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಅಧ್ಯಕ್ಷರಾದ ಶ್ರೀನಾಥ್ ಬಾಬು, ಕಾಂಗ್ರೆಸ್ ಮುಖಂಡರಾದ ರೇಖಾ ಉಮೇಶ್,ಸಿ ಕೆ ಎಲ್ ಚಾಂದ್ ಪಾಷ,ಅಂಜನಪ್ಪ, ಆರ್ ಎಂ ಜೆ ಶ್ರೀನಿವಾಸ್,ಮಾದಮಂಗಲ ಚಂದ್ರಪ್ಪ,ಶ್ರೀನಿವಾಸ್, ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಬಿಜೆಪಿ ದೇಶದ ಮೂರು ಪ್ರಮುಖ ರಾಜ್ಯಗಳಲ್ಲಿ ಜಯಭೇರಿ, ವಿಜಯೋತ್ಸವ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**



ದೇಶದ ಮೂರು ಪ್ರಮುಖ ರಾಜ್ಯಗಳಾದ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಜೆಜೆಪಿ (ಎನ್‌ಡಿಎ) ಐತಿಹಾಸಿಕ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ, ಬೀದರ್ ದಕ್ಷಿಣ ಕ್ಷೇತ್ರದ ಮನ್ನಾಏಖೇಳ್ಳಿ ಗ್ರಾಮದಲ್ಲಿ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರ ನೇತೃತ್ವದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭರ್ಜರಿ ವಿಜಯೋತ್ಸವವನ್ನು ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ದೇಶದ ಪ್ರಧಾನಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿ ಜೀ, ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ನಿತಿನ್ ನಬಿನ್ ಜೀ ಹಾಗೂ ದೇಶದ ಗೃಹ ಸಚಿವರಾದ ಸನ್ಮಾನ್ಯ ಶ್ರೀ ಅಮಿತ್ ಶಾ ಜೀ ಸೇರಿದಂತೆ ಅನೇಕ ನಾಯಕರ ಮತ್ತು ಕಾರ್ಯಕರ್ತರ ಪರಿಶ್ರಮದ ಫಲವಾಗಿ ಇಂದು ಮೂರು ರಾಜ್ಯಗಳಲ್ಲಿ ಈ ಭರ್ಜರಿ ಜಯ ಸಾಧಿಸಲು ಸಾಧ್ಯವಾಗಿದೆ ಎಂದು ಹೇಳಿದರು. ಇಂದು ನಾವು ಆಚರಿಸುತ್ತಿರುವ ಈ ವಿಜಯೋತ್ಸವ ಕೇವಲ ಗೆಲುವಿನ ಸಂಭ್ರಮವಲ್ಲ ಇದು ಜನರ ಸೇವೆಗೆ ಸಿಕ್ಕ ಗೌರವ ಇದು ಉತ್ತಮ ಆಡಳಿತಕ್ಕೆ ಸಿಕ್ಕ ಮನ್ನಣೆ ಇದಾಗಿದೆ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಸಹ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಈ ಗೆಲುವು ಸುಲಭವಾಗಿ ಬಂದಿಲ್ಲ. ಇದು ಸಾವಿರಾರು ಕಾರ್ಯಕರ್ತರ ಬೆವರು. ಇದು ಜನರ ವಿಶ್ವಾಸ ಇದು ದೇಶದ ಭವಿಷ್ಯದ ನಿರ್ಧಾರ.

ಪ್ರಧಾನಿಗಳಾದ ಶ್ರೀ ನರೇಂದ್ರ ಮೋದಿ ಜೀ ಅವರ ನಾಯಕತ್ವದಲ್ಲಿ ದೇಶ ವಿಶ್ವದ ವೇದಿಕೆಯಲ್ಲಿ ಎತ್ತರಕ್ಕೆ ಏರುತ್ತಿದೆ! ನಮ್ಮ ಗೃಹ ಸಚಿವರಾದ ಶ್ರೀ ಅಮಿತ್ ಶಾ ಜೀ ಅವರ ಸಂಘಟನೆ ಶಕ್ತಿಯಿಂದ ಪಕ್ಷ ಇನ್ನಷ್ಟು ಬಲಿಷ್ಠವಾಗಿದೆ! ಈ ಗೆಲುವು ಕೇವಲ ರಾಜಕೀಯ ಜಯವಲ್ಲ, ಇದು ಜನರ ವಿಶ್ವಾಸದ ಪ್ರತಿಫಲ. ಜನರು ಅಭಿವೃದ್ಧಿ, ಸುವ್ಯವಸ್ಥೆ ಮತ್ತು ಉತ್ತಮ ಆಡಳಿತವನ್ನು ಬೆಂಬಲಿಸಿದ್ದಾರೆ ಎಂಬುದಕ್ಕೆ ಇದು ಸ್ಪಷ್ಟ ಉದಾಹರಣೆ. ಇನ್ನಷ್ಟು ಶ್ರಮಿಸಿ, ಜನರ ವಿಶ್ವಾಸವನ್ನು ಕಾಪಾಡಿಕೊಂಡು, ಅಭಿವೃದ್ಧಿಯ ಹಾದಿಯಲ್ಲಿ ದೇಶವನ್ನು ಇನ್ನಷ್ಟು ಮುನ್ನಡೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಬಳಿಕ ಗ್ರಾಮದಲ್ಲಿ ಪಟಾಕಿ ಸಿಡಿಸಿ ಸಂಭ್ರಮ ವ್ಯಕ್ತಪಡಿಸಲಾಯಿತು. ಅಲ್ಲದೆ ಸಿಹಿ ಹಂಚುವ ಮೂಲಕ ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಪಕ್ಷದ ಮಂಡಲ ಅಧ್ಯಕ್ಷರಾದ ಗುರುನಾಥ ರಾಜಗೀರ, ಮುಖಂಡರಾದ ರಾಜರೆಡ್ಡಿ ಶಾಬಾದ, ಝರೆಪ್ಪಾ ಹಂದಿಕೇರಾ, ಬಸವರಾಜ ಬೋರಾಳ, ರವಿ ಬಾಲೆಬಾಯಿ, ರಾಜಕುಮಾರ ಪಾಂಚಾಳ, ಜಗನಾಥ್ ಮಜಗೆ, ಹೇಮಾ ತುಕ್ಕಾರೆಡ್ಡಿ, ಸಂತೋಷಿ ನಿಡವಂಚಾ, ಶಿಲ್ಪಾ ಭಕ್ತಕುಮಾರ, ಸುಜಾತಾ, ಸುನೀತಾ ಮಂಗಲಗಿ, ತಾಜೋದ್ದಿನ್, ವಿನೋದ ಕೋಟೆ. ಮೋಹನ ಕೆಳಕೇರಿ, ಬಸು ಸಜ್ಜನಶೆಟ್ಟಿ, ಜಗನ್ನಾಥ್ ಪಂಡಿತ್, ಮಹಾದೇವ ಚಾಮಾ, ಸೈಯದ್ ಅಬೆದ್ ಅಲಿ, ಸಂಗ್ರಾಮ ಬಿರಾದಾರ, ಬಸವ ವಗ್ಗೆರ, ಚಾಂದಪಾಶ, ವಿಠಲ ಮರಕುಂದಾ, ಗಂಗರಾಮ, ಗಣೇಶ, ಉದಯ, ಗಣಪತಿ. ದತ್ತು, ಭರತ, ಮೇಘರಾಜ, ಸಂಗಮೇಶ, ಮಹೇಶ, ಸಂತೋಷ ಕಾಟೆ, ಓಂಕಾರ ಮತ್ತಿತರರು ಉಪಸ್ಥಿತರಿದ್ದರು.

# ನಾವಾಡುವ ಆಟಗಳು ಕಡಿಮೆಯಾಗಿ, ಆನ್‌ಲೈನ್ ಆಟಗಳು ಹೆಚ್ಚಾಗುತ್ತಿರುವ ಕಾಲ ಮಕ್ಕಳ ಭವಿಷ್ಯ ಯಾವ ದಿಕ್ಕಿಗೆ?

ಒಂದು ಕಾಲದಲ್ಲಿ ಮಕ್ಕಳ ಜೀವನದಲ್ಲಿ ಆಟ ಎಂದರೆ ಮೈದಾನ, ಮಣ್ಣು, ಸ್ನೇಹಿತರು ಮತ್ತು ಸಂಭ್ರಮ. ಶಾಲೆ ಮುಗಿದ ತಕ್ಷಣ ಮನೆಗೆ ಓಡಿ ಬಂದು ಪುಸ್ತಕ ಮನೆಯಲಿಟ್ಟು ಹೊರಗೆ ಓಡುವುದು ಸಾಮಾನ್ಯ ದೃಶ್ಯವಾಗಿತ್ತು. ಊರಿನ ಬೀದಿ, ಖಾಲಿ ಮೈದಾನ, ಹೊಲದ ಅಂಚು, ಮರದ ನೆರಳು ಎಲ್ಲವೂ ಮಕ್ಕಳ ಆಟದ ಮೈದಾನವಾಗಿತ್ತು. ಕಬ್ಬಡ್ಡಿ, ಗಿಲ್ಲಿ ದಂಡು, ಚಿಕ್ಕಮಕ್ಕಳ ಕ್ರಿಕೆಟ್, ಕುಸ್ತಿಪಟು, ಲಗೋರಿ, ಮರ ಹತ್ತುವುದು, ಓಟದಾಟ, ಕಣ್ಣುಮುಚ್ಚಾಲೆ, ಬಿಲ್ಲೆ ಇಂತಹ ಅನೇಕ ಆಟಗಳು ಮಕ್ಕಳ ಜೀವನದಲ್ಲಿ ಚೈತನ್ಯ ತುಂಬುತ್ತಿದ್ದವು.



ಆದರೆ ಇಂದು ದೃಶ್ಯ ಸಂಪೂರ್ಣವಾಗಿ ಬದಲಾಗಿದೆ. ಮನೆ ಮುಂದೆ ಮಕ್ಕಳು ಕಾಣುವುದೇ ಕಷ್ಟ. ಬೀದಿಗಳು ಖಾಲಿ. ಮೈದಾನಗಳು ಮೌನ. ಮಕ್ಕಳ ಕೈಯಲ್ಲಿ ಮೊಬೈಲ್, ಕಿವಿಯಲ್ಲಿ ಹೆಡ್‌ಫೋನ್, ಕಣ್ಣೆಲ್ಲಾ ಮೊಬೈಲ್ ಪರದೆಯಲ್ಲೇ ನೆಟ್ಟಿವೆ. ಈಗಿನ ಮಕ್ಕಳಿಗೆ ಆಟ ಎಂದರೆ ಆನ್‌ಲೈನ್ ಗೇಮ್, ಮೊಬೈಲ್ ಗೇಮ್, ವಿಡಿಯೋ ಗೇಮ್‌ಗಳೇ ಆಗಿವೆ.

ಹಳೆಯ ಕಾಲದ ಆಟಗಳ ಮಹತ್ವ

ಹಿಂದಿನ ಕಾಲದಲ್ಲಿ ಮಕ್ಕಳು ಆಡುವ ಆಟಗಳು ದೈಹಿಕ ಆರೋಗ್ಯಕ್ಕೆ ತುಂಬಾ ಒಳ್ಳೆಯವು ಆಗಿದ್ದವು. ಓಡಾಟ, ಜಿಗಿತ, ಹತ್ತಾಟ, ನೆಲದ ಮೇಲೆ ಕುಳಿತುಕೊಳ್ಳುವುದು ಇವು ಮಕ್ಕಳ ದೇಹದ ಬೆಳವಣಿಗೆಗೆ ಸಹಾಯ ಮಾಡುತ್ತಿತ್ತು. ದೈಹಿಕ ಶಕ್ತಿಯ ಜೊತೆಗೆ ಮಾನಸಿಕ ಬೆಳವಣಿಗೆಗೂ ಸಹಕಾರಿಯಾಗುತ್ತಿತ್ತು.

ಆಟಗಳ ಮೂಲಕ ಮಕ್ಕಳು ಸ್ನೇಹ ಬೆಳೆಸುತ್ತಿದ್ದರು. ಸೋಲು ಗೆಲುವನ್ನು ಅರ್ಥಮಾಡಿಕೊಳ್ಳುತ್ತಿದ್ದರು. ಒಬ್ಬರ ಜೊತೆ ಒಬ್ಬರು ಹೊಂದಿಕೊಂಡು ಆಟ ಆಡುವುದರಿಂದ ಸಹನಶೀಲತೆ, ತಂಡದ ಮನೋಭಾವ, ಸಹಕಾರ, ನಾಯಕತ್ವ ಗುಣಗಳು ಬೆಳೆಯುತ್ತಿತ್ತು.

ಹಳ್ಳಿಗಳಲ್ಲಿ ಸಂಜೆ ಸಮಯದಲ್ಲಿ ಮಕ್ಕಳ ಕೂಗಾಟ, ನಗುವು, ಓಡಾಟದಿಂದ ಊರೇ ಜೀವಂತವಾಗಿರುತ್ತಿತ್ತು. ಹಿರಿಯರು ಕೂಡ ಸಂತೋಷದಿಂದ ಮಕ್ಕಳ ಆಟಗಳನ್ನು ನೋಡಿ ಕುಳಿತುಕೊಳ್ಳುತ್ತಿದ್ದರು. ಮಕ್ಕಳ ಆಟಗಳು ಸಮಾಜದ ಸಾಂಸ್ಕೃತಿಕ ಭಾಗವಾಗಿದ್ದವು.

ಈಗಿನ ಕಾಲದ ಆನ್‌ಲೈನ್ ಆಟಗಳ ಪ್ರಭಾವ

ಇಂದು ಡಿಜಿಟಲ್ ಯುಗದಲ್ಲಿ ಮೊಬೈಲ್, ಟ್ಯಾಬ್, ಕಂಪ್ಯೂಟರ್ ಮಕ್ಕಳ ಜೀವನದಲ್ಲಿ ಪ್ರಮುಖ ಸ್ಥಾನ ಪಡೆದಿವೆ. ಪೋಷಕರು ಕೆಲಸದಲ್ಲಿ ಬ್ಯುಸಿ, ಮಕ್ಕಳು ಮೊಬೈಲ್‌ನಲ್ಲಿ ಬ್ಯುಸಿ. ಮಕ್ಕಳು ಹೊರಗೆ ಹೋಗದೇ ಮನೆಯೊಳಗೆ ಕೂತು ಆನ್‌ಲೈನ್ ಆಟಗಳಲ್ಲಿ ತೊಡಗುತ್ತಿದ್ದಾರೆ.

ಆನ್‌ಲೈನ್ ಗೇಮ್‌ಗಳು ಮಕ್ಕಳನ್ನು ಹೆಚ್ಚು ಆಕರ್ಷಿಸುತ್ತಿವೆ. ಬಣ್ಣ ಬಣ್ಣದ ಗ್ರಾಫಿಕ್ಸ್, ಸದ್ದು, ಸ್ಪರ್ಧಾತ್ಮಕ ಮನೋಭಾವ ಇವು ಮಕ್ಕಳನ್ನು ಅದಕ್ಕೆ ಅಂಟಿಸಿಬಿಡುತ್ತವೆ. ಒಮ್ಮೆ ಆನ್‌ಲೈನ್ ಆಟಗಳಲ್ಲಿ ಮಗ್ನರಾದರೆ ಮಕ್ಕಳು ಅದರಿಂದ ಹೊರಬರಲು ಕಷ್ಟವಾಗುತ್ತದೆ.

ಆನ್‌ಲೈನ್ ಆಟಗಳ ದುಷ್ಪರಿಣಾಮ

ಆನ್‌ಲೈನ್ ಆಟಗಳ ಹೆಚ್ಚುವರಿ ಬಳಕೆ ಮಕ್ಕಳ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಕಣ್ಣಿನ ಸಮಸ್ಯೆಗಳು ಹೆಚ್ಚಾಗುತ್ತಿವೆ ತಲೆನೋವು, ನಿದ್ರೆ ಸಮಸ್ಯೆಗಳು, ದೈಹಿಕ ಚಟುವಟಿಕೆ ಕಡಿಮೆಯಾಗುವುದು ಒಬ್ಬರ ಜೊತೆ ಒಬ್ಬರು ಬೆರೆಯುವ ಗುಣ ಕಡಿಮೆಯಾಗುವುದು, ಓದಿನ ಮೇಲೆ ಗಮನ ಕಡಿಮೆಯಾಗುವುದು, ಕೋಪ, ಚಿಡಿಚಿಡಿ ಸ್ವಭಾವ ಹೆಚ್ಚಾಗುವುದು, ಹಲವಾರು ಮಕ್ಕಳು ದಿನದ ಹೆಚ್ಚಿನ ಸಮಯವನ್ನು ಮೊಬೈಲ್‌ನಲ್ಲಿ ಕಳೆಯುತ್ತಿದ್ದಾರೆ. ಊಟ ಮಾಡುವಾಗ, ಓದುವಾಗ, ಮಲಗುವಾಗ ಕೂಡ ಮೊಬೈಲ್ ಕೈ ಬಿಡುವುದಿಲ್ಲ. ಇದು ಮಕ್ಕಳ ಭವಿಷ್ಯಕ್ಕೆ ಅಪಾಯಕಾರಿಯಾಗಿದೆ.

ಪೋಷಕರ ಜವಾಬ್ದಾರಿ ತುಂಬಾನೇ ಇದೆ, ಇದನ್ನು ತಡೆಗಟ್ಟುವಲ್ಲಿ ಪೋಷಕರ ಪಾತ್ರ ತುಂಬಾ ಮುಖ್ಯ. ಮಕ್ಕಳಿಗೆ ಮೊಬೈಲ್ ಕೊಟ್ಟು ಮೌನಗೊಳಿಸುವುದಕ್ಕಿಂತ ಹೊರಗೆ ಆಟ ಆಡಲು ಉತ್ತೇಜಿಸಬೇಕು. ಮಕ್ಕಳಿಗೆ ಸಮಯ ನಿಗದಿ ಮಾಡಬೇಕು ಮೊಬೈಲ್ ಬಳಕೆ ಕಡಿಮೆ ಮಾಡಬೇಕು, ಮಕ್ಕಳ ಜೊತೆ ಪೋಷಕರು ಕೂಡ ಆಟ ಆಡಬೇಕು ಹಳೆಯ ಆಟಗಳನ್ನು ಪರಿಚಯಿಸಬೇಕು ಹೊರಗೆ ಆಟ ಆಡಲು ಪ್ರೋತ್ಸಾಹಿಸಬೇಕು ಪೋಷಕರು ಮಕ್ಕಳ ಜೊತೆ ಸಮಯ ಕಳೆಯುವುದರಿಂದ ಮಕ್ಕಳು ಮೊಬೈಲ್‌ನಿಂದ ದೂರವಾಗಬಹುದು.

ಶಾಲೆಗಳ ಪಾತ್ರ ಹಚ್ಚಿದೆ ಶಾಲೆಗಳೂ ಕೂಡ ಮಕ್ಕಳಿಗೆ ಕ್ರೀಡೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು. ಆಟದ ಅವಧಿಯನ್ನು ಹೆಚ್ಚಿಸಬೇಕು. ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಬೇಕು. ಮಕ್ಕಳನ್ನು ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಸಬೇಕು.

ಸಮಾಜದ ಜವಾಬ್ದಾರಿ ಸಮಾಜವೂ ಮಕ್ಕಳಿಗೆ ಆಟದ ಮೈದಾನಗಳನ್ನು ಉಳಿಸಬೇಕು. ಖಾಲಿ ಜಾಗಗಳನ್ನು ಕಟ್ಟಡಗಳಿಗಾಗಿ ಬಳಸದೇ ಮಕ್ಕಳ ಆಟದ ಮೈದಾನಗಳಾಗಿ ಉಳಿಸಬೇಕು. ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಇದು ಅಗತ್ಯವಾಗಿದೆ. ಹಳೆಯ ಕಾಲದ ಆಟಗಳಲ್ಲಿ ಸಂತೋಷ, ಆರೋಗ್ಯ ಮತ್ತು ಸ್ನೇಹ ಇತ್ತು. ಈಗಿನ ಆನ್‌ಲೈನ್ ಆಟಗಳಲ್ಲಿ ಒಂಟಿತನ, ಅಲವಟ್ಟು ಮತ್ತು ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಮಕ್ಕಳ ಭವಿಷ್ಯ ಉತ್ತಮವಾಗಿರಬೇಕೆಂದರೆ ಮತ್ತೆ ನಾವಾಡುವ ಆಟಗಳನ್ನು ಉತ್ತೇಜಿಸಬೇಕು. ಮಕ್ಕಳನ್ನು ಮೊಬೈಲ್ ಜಗತ್ತಿನಿಂದ ಹೊರಗೆ ತಂದು ಮೈದಾನಕ್ಕೆ ಕರೆತರುವುದು ಇಂದಿನ ಅಗತ್ಯವಾಗಿದೆ. ಮಕ್ಕಳ ನಗು, ಕೂಗು, ಓಟ ಮತ್ತೆ ಬೀದಿಗಳಲ್ಲಿ ಕೇಳಿಸಲಿ ಮೊಬೈಲ್ ಪರದೆಗಿಂತ ಮೈದಾನದ ಮಣ್ಣು ಮಕ್ಕಳ ಕೈಗೆ ತಗಲಿ ಆಗ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ. ನಾವಾಡುವ ಆಟ ಮರಳಿ ಬಂದರೆ ಮಕ್ಕಳ ಭವಿಷ್ಯ ಬೆಳಗುತ್ತದೆ.



– ಚಂದ್ರಕಾಂತ ಹಳ್ಳಿಖೇಡಕರ್

## ಸಹರಾ ಆಂಗ್ಲ ಶಾಲೆಯ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಶೇ.95: ಅಧ್ಯಕ್ಷ ಎಲ್.ಕೆ ಬಿರಾದಾರ






• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಮೇ.4:ತಾಲೂಕಿನ ಹೂವಿನಹಿಪ್ಪರಗಿ ಗ್ರಾಮದ ಸಹರಾ ಆಂಗ್ಲ ಮಾಧ್ಯಮ ಪ್ರೌಢಶಾಲೆ ವಿಧ್ಯಾರ್ಥಿಗಳು ಎಸ್ಸೆಎಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ. 95ರಷ್ಟು ಸಾಧನೆ ಮಾಡಿದ್ದಾರೆ.

ಲಾಡಮಾ ಜಾ ಓಲೇಕಾರ(ಶೇ.96) ಪ್ರಥಮ, ರಕ್ಷಿತಾ ನ ಕನ್ನೊಳ್ಳಿ(ಶೇ. 95) ದ್ವಿತೀಯ, ಹೀನಾ ಮ ಬಿರಾದಾರ(ಶೇ. 94) ತೃತೀಯ ಸ್ಥಾನ ಪಡೆದಿದ್ದಾರೆ.

ಸನಾ ಮ ಕಾಚೂರ(ಶೇ.93), ದಿವ್ಯಾ ನಾ ಪಾಟೀಲ(ಶೇ. 92), ಭಾರತಿ ಕಡಕೋಳ(ಶೇ. 86), ಮಧು ದ್ಯಾ ಹಿಪ್ಪರಗಿ(ಶೇ. 82), ಪ್ರಜ್ವಲ್ ಪ್ರ ಚೌಧರಿ(ಶೇ. 81), ಸಚಿನ್ ಸು ಮುತ್ತಗಿ(ಶೇ.74), ಮಲ್ಲಿಕಾರ್ಜುನ ಭಜಂತ್ರಿ(ಶೇ. 72), ಮುತ್ತುರಾಜ ಹಡಪದ(ಶೇ. 72), ಯಲ್ಲಾಲಿಂಗ ಹುಣಸಗಿ(ಶೇ. 71), ದಾನಮ್ಮ ತಳವಾರ(ಶೇ. 71) ಉತ್ತಮ ಅಂಕ ಗಳಿಸಿದ್ದಾರೆ.

ಸನಾ ಮ ಕಾಚೂರ ಹಿಂದಿ ವಿಷಯದಲ್ಲಿ ನೂರಕ್ಕೆ ನೂರು ಅಂಕ ಗಳಿಸಿ ಸಂಸ್ಥೆಗೆ ಕೀರ್ತಿ ತಂದಿದ್ದಾಳೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಎಲ್.ಕೆ ಬಿರಾದಾರ, ಸಂಸ್ಥಾಪಕರಾದ ಎಂ.ಎಲ್ ಬಿರಾದಾರ, ಮುಖ್ಯಗುರು ಮತ್ತು ಶಿಕ್ಷಕರು ಹರ್ಷ ವ್ಯಕ್ತಪಡಿಸಿದ್ದಾರೆ.

## ವಿಶ್ವದ ಅತೀ ಎತ್ತರದ ಇಷ್ಟಲಿಂಗ ನಿರ್ಮಾಣಕ್ಕೆ ಪೂಜೆ: ಮಾರ್ಚ ಒಳಗಾಗಿ ಅನುಭವ ಮಂಟಪ ಲೋಕಾರ್ಪಣೆ:ಸಚಿವ ಈಶ್ವರ ಬಿ.ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಮೇ.04: ಬಸವಕಲ್ಯಾಣದ ಅನುಭವ ಮಂಟಪದಲ್ಲಿ ನಿರ್ಮಾಣವಾಗುತ್ತಿರುವ ವಿಶ್ವದ ಅತೀ ಎತ್ತರದ ಇಷ್ಟಲಿಂಗಕ್ಕೆ(55ಮೀ.) ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಇಂದು ಪೂಜೆ ಸಲ್ಲಿಸಿ ಅನುಭವ ಮಂಟಪದ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ಮಾತನಾಡಿದ ಅವರು ಬಸವಾದಿ ಶರಣರು ಈ ಜಗತ್ತಿನ ಸರ್ವಶ್ರೇಷ್ಠ ದಾರ್ಶನಿಕರು, ಮಹಾ ಮಾನವತಾವಾದಿಗಳು, ಕಾಯಕವೇ ಕೈಲಾಸವನ್ನು ಅಳವಡಿಸಿಕೊಂಡು ಜಗತ್ತಿಗೆ ಪ್ರಥಮ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ನೀಡಿದರು. 770 ಕಂಬಗಳ ಮೇಲೆ 770 ಶರಣರ ವಚನಗಳನ್ನು ಕೆತ್ತಲಾಗುತ್ತಿದೆ. ವೈಜ್ಞಾನಿಕವಾಗಿ ನೆಮ್ಮದಿ ನೀಡುವಂಥ ಇಷ್ಟಲಿಂಗ ತರಬೇತಿ ಕೇಂದ್ರವನ್ನು ನಿರ್ಮಿಸಲಾಗುತ್ತಿದೆ. ಬದುಕನ್ನು ಹಸನಗೊಳಿಸಿಕೊಳ್ಳಲು ವೈಚಾರಿಕ ವಚನಗಳು ಸಹ ಆಧುನಿಕ ವಿಜ್ಞಾನ ತಂತ್ರಜ್ಞಾನ ಮೂಲಕ ಐಐಟಿ ವಿಜ್ಞಾನಿಗಳ ಮೂಲಕವಾಗಿ ಜನಸಾಮಾನ್ಯರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು. ಕಾಯಕವೇ ಕೈಲಾಸ ಎಂದು ಹೇಳಿರುವ ಶರಣರ ಜೀವನವನ್ನು ಬಿಂಭಿಸುವ ಶರಣ ಗ್ರಾಮ ನಿರ್ಮಾಣಗೊಳ್ಳುತ್ತಿದೆ. ಈಗಿನ ಯುವಕರಿಗೆ ಅಗತ್ಯವಾದ ಕೌಶಲ್ಯ ತರಬೇತಿ ನೀಡುವ ಕೇಂದ್ರ ಆರಂಭಿಸಲಾಗುವುದು. ವೃತ್ತಿಯಲ್ಲಿ ಯಾವುದು ಮೇಲಿಲ್ಲ ಕೀಳಿಲ್ಲ ಎಂದು ಸಚಿವರು ತಿಳಿಸಿದರು. ಅನುಭವ ಮಂಟಪಕ್ಕೆ ಹಣದ ಕೊರತೆ ಇಲ್ಲ,ಈವರೆಗೆ 480 ಕೋರಿ ರೂ. ಖರ್ಚಾಗಿದೆ. ನಮ್ಮ ಮುಖ್ಯಮಂತ್ರಿಗಳು ಈ ಪೈಕಿ 280 ಕೋಟಿ ರೂ. ಅನುದಾನ ನೀಡಿದ್ದಾರೆ. ಉಳಿದ ಹಣವನ್ನು ಸಹ ಶೀಘ್ರವೇ ಬಿಡುಗಡೆ ಮಾಡಲಿದ್ದಾರೆ.

ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಅನುಭವ ಮಂಟಪದ ಸಂಯೋಜಕರಾದ ಡಾ.ಬಾಬಾಸಾಹೇಬ್ ಗಡ್ಡೆ ಸೇರಿದಂತೆ ಗಣ್ಯ ಮಾನ್ಯರು ಉಪಸ್ಥಿತರಿದ್ದರು.

## ಬಳ್ಳಾರಿ ಸರ್ಕಾರಿ ಪಾಲಿಟೆಕ್ನಿಕ್: ಡಿಪ್ಲೋಮಾ ಪ್ರವೇಶಾತಿ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ04:ನಗರದ ಹೊಸಪೇಟೆ ರಸ್ತೆಯಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2026–27ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸ್ಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಕಾಲೇಜಿನಲ್ಲಿ ಲಭ್ಯವಿರುವ ಆಟೋಮೊಬೈಲ್,ಸಿವಿಲ್, ಕಂಪ್ಯೂಟರ್ ಸೈನ್ಸ್,ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಶನ್,ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್, ಮೆಕ್ಯಾನಿಕಲ್ ಮತ್ತು ಮೆಟಲರ್ಜಿಕಲ್ ಇಂಜಿನಿಯರಿಂಗ್ ವಿಭಾಗಗಳಿಗೆ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ .*ವೇಳಾಪಟ್ಟಿ:*ಮೇ 16 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಅಂದು ಸಂಜೆ 06 ಗಂಟೆಯ ನಂತರ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸಲಾಗುವುದು. ಮೇ 18 ರ ಬೆಳಿಗ್ಗೆ 10 ರಿಂದ ಸಂಜೆ 04 ಗಂಟೆಯವರೆಗೆ ಮೆರಿಟ್ ಪಟ್ಟಿ ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಸಂಜೆ 06 ಗಂ–ಟೆಯ ನಂತರ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸಲಾಗುತ್ತದೆ.ಮೇ 22 ರಂದು ಸಂಜೆ 05.30 ಗಂಟೆಯ ನಂತರ ಸೀಟು ಹಂಚಿಕೆ ವಿವರಗಳ ಪ್ರಕಟಿಸಲಾಗುವುದು. ಮೇ 23 ರಿಂದ ಮೇ 25 ರವರೆಗೆ ಪ್ರವೇಶ ಪಡೆಯಲು ನಿಗದಿಪಡಿಸಿದ ಅವಧಿ ಹಾಗೂ ಮೇ 26 ರಿಂದ ಮೇ 30 ರವರೆಗೆ ಕಾಲೇಜು ಮಟ್ಟದಲ್ಲಿ ಮೆರಿಟ್ ಮತ್ತು ರೋಸ್ಟರ್ ಆಧಾರದ ಖಾಲಿ ಉಳಿದ ಸೀಟುಗಳಿಗೆ ಆಫ್‌ಲೈನ್ ಪ್ರವೇಶಾತಿ ಪ್ರಕ್ರಿಯೆ ನಡೆಯಲಿದೆ. ಆಸಕ್ತ ವಿದ್ಯಾರ್ಥಿಗಳು ನಿಗದಿತ ಸಮಯದೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕಾಲೇಜು ಪಾಲಿಟೆಕ್ನಿಕ್ ಕಚೇರಿ ಅಥವಾ ದೂ.08392–294371 ಅನ್ನು ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಕರಾಟೆ ಚಾಂಪಿಯನ್‌ಶಿಪ್‌ಗೆ ಆಯ್ಕೆಯಾದ ಸಬಾ ಮಾಹೀನ್ ಕರಾಟೆ ಸಾಧಕಿಗೆ ಶಾಹೀನ್‌ನಿಂದ ಉಚಿತ ಶಿಕ್ಷಣ

ಮಲ್ಲಮ್ಮ ನುಡಿ ವಾರ್ತೆ ಬೀದರ



ಮೇ.4: ಕಿರಿಯ ವಯಸ್ಸಿನಲ್ಲೇ ಕರಾಟೆಯಲ್ಲಿ ಅಮೋಘ ಸಾಧನೆಗೈದ ಹೈದರಾಬಾದನ ಕಿಶನ್‌ಬಾಗ್‌ನ ಬಹಾದ್ದೂರಪುರದ ಸಬಾ ಮಾಹೀನ್ ಖಾಜಾ ಮೊಯಿನುದ್ದೀನ್ ಅವರಿಗೆ ಇಲ್ಲಿಯ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹವು ಪ್ರೌಢ ಹಾಗೂ ಪದವಿಪೂರ್ವ ಶಿಕ್ಷಣ ಉಚಿತವಾಗಿ ನೀಡುವುದಾಗಿ ಘೋಷಿಸಿದೆ.

ಇಲ್ಲಿಯ ಶಹಾಪುರ ಗೇಟ್ ಸಮೀಪದ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಕಚೇರಿಗೆ ಭಾನುವಾರ ಕುಟುಂಬದ ಸದಸ್ಯರೊಂದಿಗೆ ಭೇಟಿ ನೀಡಿದ ಸಬಾ ಮಾಹೀನ್ ಅವರಿಗೆ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅವರು ಶೈಕ್ಷಣಿಕ ನೆರವಿನ ಭರವಸೆ ನೀಡಿದರು.

ಪ್ರೌಢ ಹಾಗೂ ಪದವಿಪೂರ್ವ ಶಿಕ್ಷಣ ಸಂಪೂರ್ಣ ಉಚಿತವಾಗಿ ಕೊಡಲಾಗುವುದು. ವೈದ್ಯಳಾಗಲು ಬಯಸಿದ್ದಲ್ಲಿ ನೀಟ್ ತರಬೇತಿಯನ್ನೂ ನೀಡಲಾಗುವುದು ಎಂದು ತಿಳಿಸಿದರು.


ಹೈದರಾಬಾದನ ಗ್ರೇಸ್ ಎಕ್ಸೆಲ್ ಶಾಲೆಯಲ್ಲಿ ಏಳನೇ ತರಗತಿಯಲ್ಲಿ ಅಗ್ರಶ್ರೇಣಿಯಲ್ಲಿ ತೇರ್ಗಡೆಯಾಗಿರುವ ಸಬಾ ಮಾಹೀನ್ ತೆಲಂಗಾಣ ರಾಜ್ಯಮಟ್ಟದ ಕರಾಟೆ ಸ್ಪರ್ಧೆಯಲ್ಲಿ 22,ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಮೂರು ಚಿನ್ನದ ಪದಕ ಜಯಿಸಿದ್ದಾರೆ. ಮೇ 8 ರಿಂದ 10 ರವರೆಗೆ ಮಲೇಷ್ಯಾದಲ್ಲಿ ನಡೆಯಲಿರುವ 22ನೇ ವಿಶ್ವ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಅವರ ಸಾಧನೆ ಬಾಲಕಿಯರಿಗೆ ಮಾದರಿ ಹಾಗೂ ಪ್ರೇರಣೆಯಾಗಿದೆ ಎಂದು ಹೇಳಿದರು.ವಿದ್ಯಾರ್ಥಿನಿ ತಂದೆ ಖಾಜಾ ಮೊಯಿನುದ್ದೀನ್, ಕೋಚ್ ಮಾಸ್ಟರ್ ಮೊಹಮ್ಮದ್ ಉಮರ್ ಇದ್ದರು.

## 5-17 ವರ್ಷದ ಮಕ್ಕಳಿಗೆ ಆಧಾರ್ ಬಯೋಮೆಟ್ರಿಕ್ ಉಚಿತವಾಗಿ ಅಪ್ಡೇಟ್ ಮಾಡಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ.04: ಜಿಲ್ಲೆಯಾದ್ಯಂತ 5 ರಿಂದ 7 ಹಾಗೂ 15 ರಿಂದ 17 ವಯೋಮಿತಿಯ ಮಕ್ಕಳ ಆಧಾರ್ ಸಂಖ್ಯೆಗೆ ಕಡ್ಡಾಯ ಬೈಯೋಮೆಟ್ರಿಕ್ ಅಪ್ಲೋಡಗಾಗಿ (Mandatory Biometric Update) ಜಿಲ್ಲೆಯ ಎಲ್ಲಾ ಆಧಾರ ಕೇಂದ್ರಗಳಲ್ಲಿ ಉಚಿತವಾಗಿ ಅವಕಾಶ ಕಲ್ಪಿಸಲಾಗಿದೆ. ಈ ಪ್ರಕ್ರಿಯೆಯನ್ನು

ಪೂರ್ಣಗೊಳಿಸಲು 2026ನೇ ಸೆಪ್ಟೆಂಬರ್.30 ರವರೆಗೆ ಅವಕಾಶ ಕಲ್ಪಿಸಲಾಗಿದೆ.ಪೊ?ಷಕರು ತಮ್ಮ ಮಕ್ಕಳ ಆಧಾರ್ ಕಾರ್ಡ ಹಾಗೂ ಸಂಬಂಧಿಸಿದ ದಾಖಲೆಗಳೊಂದಿಗೆ ತಮ್ಮ ಹತ್ತಿರದ ಆಧಾರ್ ಕೇಂದ್ರಗಳಿಗೆ ಭೇಟಿ ನೀಡಿ ನವೀಕರಿಸಿಕೊಳ್ಳಬಹುದಾಗಿದೆ ಇದರಿಂದಾಗಿ ಮಕ್ಕಳ ಶಾಲೆಯ ದಾಖಲಾತಿ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳು, ಸರ್ಕಾರದ ವಿವಿಧ ಯೋಜನೆಗಳು, ವಿದ್ಯಾರ್ಥಿ ವೇತನ, ತರಬೇತಿಗಳು ಸೇರಿದಂತೆ ಇತ್ಯಾದಿ ಯೋಜನೆಗಳ ಲಾಭ ಪಡೆಯಲ ು ಅನುಕೂಲವಾಗಲಿದೆ.ಪ್ರಯುಕ್ತ ಜಿಲ್ಲೆಯ ಎಲ್ಲಾ ಪೊ?ಷಕರು ಈ ಪ್ರಕ್ರಿಯೆಯನ್ನು ಜವಾಬ್ದಾರಿಯಿಂದ ನಿರ್ವಹಿಸಿ ತಮ್ಮ ಮಕ್ಕಳಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಬೇಕು. ಆಧಾರನಲ್ಲಿ ಜನನ ದಿನಾಂಕವನ್ನು ಒಂದು ಬಾರಿ ಮಾತ್ರ ತಿನ್ನುಪಡಿಗೆ ಹಾಗೂ ಹೆಸರು ತಿದ್ದುಪಡಿ ಕೂಡಾ ಒಂದು ಬಾರಿ ಮಾತ್ರ ತಿದ್ದುಪಡಿಗೆ ಅವಕಾಶ ಇರುವುದರಿಂದ ಪೂಷಕರು ಸದರಿ ತಿದ್ದುಪಡಿಗಳನ್ನು ಗಮನದಲ್ಲಿ ಇಟ್ಟಿಕೊಂಡು ತಿದ್ದುಪಡಿ ಮಾಡಿಕೊಳ್ಳತಕ್ಕದ್ದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.



ಹುಣಸೂರು: ಉಪ ವಿಭಾಗಧಿಕಾರಿ (ಂ.ಅ) ಕಾವ್ಯರಾಣಿ ರವರ ವಿವಾಹ ಮಹೋತ್ಸವವು ವಿಜಯನಗರ ಜಿಲ್ಲೆಯ ಹರಪ್ಪನಹಳ್ಳಿಯ ಸಮತಾ ಕಲ್ಯಾಣ ಮಂಟಪದಲ್ಲಿ ನೇರವೇರಿದ್ದು, ವಿವಾಹ ಮಹೋತ್ಸವದಲ್ಲಿ ಹುಣಸೂರಿನ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಭಾಗವಹಿಸಿ ನೂತನ ವಧು–ವರರಿಗೆ ಶುಭ ಕೋರಿದರು. ಈ ವೇಳೆ ಮಾಜಿಶಾಸಕರಾದ ಎಚ್ ಪಿ ಮಂಜುನಾಥ್ ರವರನ್ನು ಸನ್ಮಾನಿಸಿ ಗೌರವಿಸಿದರು.

ಹುಣಸೂರು ತಹಸಿಲ್ದಾರ್ ಮಂಜುನಾಥ್ ಜೆ.,ಉಪವಿಭಾಧಿಕಾರಿಗಳ ಕಚೇರಿ ತಹಸಿಲ್ದಾರ್ ಯಧುಗಿರೀಶ್ ಶ್ರೀಪಾದ ಸೇರಿದಂತೆ ಕಂದಾಯ ಇಲಾಖೆ ಸಿಬ್ಬಂದಿಗಳು ಇದ್ದರು.



ಹುಣಸೂರು :ತಾಲೂಕಿನ ಮಾಜಿ ಶಾಸಕ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಇಂದು ವಿಜಯನಗರ ಜಿಲ್ಲೆ ಹೂವಿನಹಡಗಲಿ ತಾಲೂಕಿನಲ್ಲಿರುವ ಮಾಜಿ ಉಪಮುಖ್ಯಮಂತ್ರಿಗಳಾದ ದಿವಂಗತ ಶ್ರೀ ಎಂ ಪಿ ಪ್ರಕಾಶ್ ರವರು, ಹಾಗೂ ಅವರ ಮಗ ಮತ್ತು ತಮ್ಮ ಆತ್ಮೀಯ ಸ್ನೇಹಿತರಾದ ಮಾಜಿ ಶಾಸಕರಾದ ದಿವಂಗತ ಎಂ ಪಿ ರವೀಂದ್ರ ರವರ ಸಮಾಧಿಗಳಿಗೆ ಭೇಟಿ ನೀಡಿ ನಮನ ಸಲ್ಲಿಸಿದರು.*ಈ ಸಂದರ್ಭದಲ್ಲಿ ಕಾರ್ಯಕರ್ತರು ಅಭಿಮಾನಿಗಳು ಮುಖಂಡರು ಹಾಜರಿದ್ದರು

# ಮಸರಕಲ್ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಎನ್.ಕ್ಯೂ.ಎ.ಎಸ್‌ನ ರಾಷ್ಟ್ರೀಯ ಗೌರವ: ಶೇ.91.27 ಅಂಕಗಳ ಜತೆ ಅಭೂತಪೂರ್ವ ಸಾಧನೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಮೇ.04 : ಜಿಲ್ಲೆಯ ದೇವದುರ್ಗ ತಾಲೂಕಿನ ಮಸರಕಲ್ ಪ್ರಾಥಮಿಕ ಆರೋಗ್ಯ ಕೇಂದ್ರವು ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ (ಎನ್.ಕ್ಯೂ.ಎ.ಎಸ್.) ಪರಿಶೀಲನೆಯಲ್ಲಿ ಶ್ರೇಷ್ಠ ಸಾಧನೆ ಮಾಡಿ ರಾಷ್ಟ್ರೀಯ ಮಟ್ಟದ ಗುಣಮಟ್ಟ ಪ್ರಮಾಣಪತ್ರವನ್ನು ಪಡೆದುಕೊಂಡಿದ್ದು, ಇದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಸಂತಸ ಹಂಚಿಕೊಂಡರು.

ಇತ್ತೀಚಿಗೆ ಕೇಂದ್ರ ತಂಡದ ಮಹಾರಾಷ್ಟ್ರದ ಡಾ.ಶ್ರೀಶೈಲ್ ಪಾಟೀಲ್ ಹಾಗೂ ತಮಿಳುನಾಡಿನ ಕಾವೇರಿ ಸೇಲ್ವಿ ಅವರ ತಂಡ ಕೈಗೊಂಡ ಸಮಗ್ರ ಮೌಲ್ಯಮಾಪನದಲ್ಲಿ ಮಸರಕಲ್ ಒಟ್ಟಾರೆ 91.27% ಅಂಕಗಳನ್ನು ಗಳಿಸಿರುವುದು ಜಿಲ್ಲೆಯ ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಸಾಧನೆಯಾಗಿದೆ. ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಮೂಲ ಸೌಕರ್ಯ, ರೋಗಿ ಸ್ನೇಹಿ ಸೇವೆಗಳು, ಆಸ್ಪತ್ರೆಯ ಸ್ವಚ್ಛತೆ, ಔಷಧಗಳ ಲಭ್ಯತೆ, ತುರ್ತು ಚಿಕಿತ್ಸಾ ವ್ಯವಸ್ಥೆ, ದಾಖಲೆ ನಿರ್ವಹಣೆ ಸೇರಿದಂತೆ ಹಲವು ಅಂಶಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗಿತ್ತು. ಈ ಎಲ್ಲ ವಿಭಾಗಗಳಲ್ಲಿ ಉತ್ತಮ ಕಾರ್ಯನಿರ್ವಹಣೆ ತೋರಿದ ಪರಿಣಾಮ ಉನ್ನತ ಅಂಕಗಳನ್ನು ಪಡೆದುಕೊಳ್ಳಲಾಗಿದೆ ಎಂದು ಅವರು ವಿವರಿಸಿದರು. ಮಇದನ್ನು



ಮಾನದಂಡವಾಗಿ ಪರಿಗಣಿಸಿ ಜಿಲ್ಲೆಯ ಉಳಿದ ಕೇಂದ್ರಗಳನ್ನು ಈ ದಿಶೆಯಲ್ಲಿ ರೂಪಿಸಲಾಗುವುದು ಎಂದರು.

ಈ ಕುರಿತು ಮಾಹಿತಿ ನೀಡಿದ ಜಿಲ್ಲಾ ಎನ್‌ಫೋರ್ಸ್ಮೆಂಟ್ ಅಧಿಕಾರಿ ಗ್ರಾಮೀಣ ಪ್ರದೇಶಗಳಲ್ಲಿಯೂ ಉತ್ತಮ ಮತ್ತು ಮಾನದಂಡಗಳಿಗೆ ಅನುಗುಣವಾದ ಆರೋಗ್ಯ ಸೇವೆಗಳನ್ನು ಒದಗಿಸುವ ಸರ್ಕಾರದ ಉದ್ದೇಶವನ್ನು ಈ ಸಾಧನೆ ಸ್ಪಷ್ಟಪಡಿಸುತ್ತದೆ ಎಂದರು. ನಿಗದಿತ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ, ಆಸ್ಪತ್ರೆಯ ಎಲ್ಲಾ ವಿಭಾಗಗಳಲ್ಲಿ ಗುಣಮಟ್ಟವನ್ನು ಕಾಪಾಡಿಕೊಂಡಿರುವುದರಿಂದಲೇ ಈ ಯಶಸ್ಸು ಸಾಧ್ಯವಾಗಿದೆ ಎಂದು ತಿಳಿಸಿದರು.

ವೈದ್ಯರು, ನರ್ಸಿಂಗ್ ಸಿಬ್ಬಂದಿ ಹಾಗೂ ಇತರ ಆರೋಗ್ಯ ಸಿಬ್ಬಂದಿಯ ಪರಿಶ್ರಮ ಮತ್ತು ಸಮರ್ಪಣೆಯು ಅಡಗಿದೆ ಎಂದರು.

ಸಾಧನೆ ಹೇಗೆ ಸಾಧ್ಯವಾಯಿತು.?: ಪ್ರತಿದಿನವೂ ರೋಗಿಗಳಿಗೆ ಗುಣಮಟ್ಟದ ಸೇವೆ ನೀಡುವ ದೃಷ್ಟಿಯಿಂದ ತಂಡವಾಗಿ ಕೆಲಸ ಮಾಡುತ್ತಿರುವ ಸಿಬ್ಬಂದಿಯ ನಿಷ್ಠೆ ಮತ್ತು ಸೇವಾಭಾವನೆ ಜೊತೆಗೆ ಸ್ಥಳೀಯ ಜನರ ಸಹಕಾರ, ಆರೋಗ್ಯ, ಜಾಗೃತಿ ಕಾರ್ಯಕ್ರಮಗಳಲ್ಲಿ ಅವರ ಸಕ್ರಿಯ ಭಾಗವಹಿಸುವಿಕೆ ಹಾಗೂ ಆಸ್ಪತ್ರೆಯ ಮೇಲಿನ ವಿಶ್ವಾಸವೂ ಈ ಸಾಧನೆಯನ್ನು ಸಾಧ್ಯವಾಗಿಸಿದೆ ಎಂದು ಅವರು ಹೇಳಿದರು.

ಇದಲ್ಲದೆ ಜನಪ್ರತಿನಿಧಿಗಳು, ಶಾಸಕರು ಮತ್ತು ಸಂಸದರು, ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದಿಂದ ದೊರೆತ ಮಾರ್ಗದರ್ಶನ ಮತ್ತು ಬೆಂಬಲವೂ ಈ ಸಾಧನೆಯಲ್ಲಿ ಮಹತ್ವದ ಪಾತ್ರವಹಿಸಿದೆ. ಇದಕ್ಕಾಗಿ ತಾಲುಕಾ ಆರೋಗ್ಯಾಧಿಕಾರಿ ಡಾ ಬನದೇಶ, ಆಡಳಿತ ವೈದ್ಯಾಧಿಕಾರಿ ಡಾ ಶಂಶುದ್ದೀನ್, ಜಿಲ್ಲಾ ಗುಣಮಟ್ಟ ಭರವಸೆ ಸಲೆಹೆಗಾರರಾದ ಹರೀಶ್ ಪತಂಗೆ, ಸತತ ನಿಗಾವಣೆ, ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳ ಸಲಹೆ ಸಿಬ್ಬಂದಿಯವರಾದ ಮಲ್ಲಯ್ಯ ಹಿರೇಮಠ, ಪರವೇಜ್, ಸೇರಿದಂತೆ ಎಲ್ಲ ಸಿಬ್ಬಂದಿಗಳ ಕಠಿಣ ಪರಿಶ್ರಮದಿಂದ ಈ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಸಾಧ್ಯವಾಯಿತು ಎಂದರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಿಂಗಸುಗೂರು: ಜಿಟಿಟಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಮೇ.04 : ಜಿಲ್ಲೆಯ ಲಿಂಗಸುಗೂರಿನ ಕರಡಕಲ್ ರಸ್ತೆಯ ಬಳಿ ಸ್ಥಾಪಿತವಾಗಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ದ ವತಿಯಿಂದ 2026–27ನೇ ಸಾಲಿನಲ್ಲಿ ವಿವಿಧ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರದ ಸ್ವಾಯತ್ತ ಸಂಸ್ಥೆಯಾಗಿದ್ದು, ಈ ಭಾಗದಲ್ಲಿನ ಪ್ರತಿಷ್ಠಿತ ತಾಂತ್ರಿಕ ವಿದ್ಯಾಸಂಸ್ಥೆಗಳಲ್ಲಿ ಒಂದಾಗಿದೆ. ನಮ್ಮ ಸಂಸ್ಥೆಯಿಂದ ನಡೆಸಲ್ಪಡುವ ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಆಟೊಮೇಷನ್ ಅಂಡ್ ರೊಬೊಟಿಕ್ಸ್, ಡಿಪ್ಲೊಮಾ ಇನ್ ಪ್ರಿಸಿಶನ್ ಮ್ಯಾನುಫ್ಯಾಕ್ಚರಿಂಗ್ 3+1ವರ್ಷದ ಕೋರ್ಸ್ಗಳ ಪ್ರವೇಶಾತಿಗಾಗಿ ಮೇ.15ರೊಳಗಾಗಿ fnn[1] ವೆಬ್‌ಸೈಟ್: https://gttc.karnataka.gov.inನಲ್ಲಿ ಅಥವಾ ನೇರವಾಗಿ ಸಂಸ್ಥೆಗೆ ಅಗತ್ಯ ದಾಖಲಾತಿಗಳೊಂದಿಗೆ ಭೇಟಿ ನೀಡಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9902072101, 8762564872ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಲಿಂಗಸುಗೂರಿನ ಜಿಟಿಟಿಸಿ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಳಂದ ಸರಕಾರಿ ಪಾಲಿಟೆಕ್ನಿಕ್ ನಲ್ಲಿ 2026-27ನೇ ಸಾಲಿಗೆ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮೇ.4.ಜಿಲೆಯ ಆಳಂದ ಪಟ್ಟಣದಲ್ಲಿ ಹೊಸದಾಗಿ ಪ್ರಾರಂಭಿಸಲಾದ ಆಳಂದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಪ್ರಸಕ್ತ 2026–27ನೇ ಶೈಕ್ಷಣಿಕ ಸಾಲಿಗಾಗಿ ಪ್ರಥಮ ವರ್ಷದ ಡಿಪ್ಲೋಮಾ ವಿವಿದ

ಕೋರ್ಸಗಳಿಗಾಗಿ ಪ್ರವೇಶಾತಿಯನ್ನು "ಆಫ್–ಲೈನ್" ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆರ್ಟಿಫಿಶಿಯಲ್ ಇಂಟಲಿಜೆನ್ಸ್ & ಮಶೀನ್ ಲರ್ನಿಂಗ್, ಸಿವಿಲ್ ಇಂಜಿನೀಯರಿಂಗ್, ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ ಇಂಜಿನೀಯರಿಂಗ್ ಹಾಗೂ ಮೆಕ್ಯಾನಿಕಲ್ ಇಂಜಿನೀಯರಿಂಗ್ ಕೋರ್ಸು ಇಲ್ಲಿ ಲಭ್ಯವಿದ್ದು, ಪ್ರತಿ ಕೋರ್ಸಿಗೆ ತಲಾ 60 ಸಂಖ್ಯೆ ಅಭ್ಯರ್ಥಿಗಳಿಗೆ ಪ್ರವೇಶಾವಕಾಶ ಇದೆ. ಪ್ರವೇಶ ಪ್ರಕ್ರಿಯೆ ಆರಂಭವಾಗಿದ್ದು, ಪ್ರವೇಶ ಬಯಸುವ ಅಭ್ಯರ್ಥಿಗಳು ಇದೇ ಮೇ 30ರ ಒಳಗಾಗಿ ಕಾಲೇಜಿಗೆ ಖುದ್ದಾಗಿ ಹಾಜರಾಗಿ ಅರ್ಜಿಗಳನ್ನು ಭರ್ತಿ ಮಾಡಿ ಪ್ರವೇಶ ಪಡೆಯಬಹುದಾಗಿದೆ.

ಪ್ರವೇಶದ ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ಕಾಲೇಜು ಮತ್ತು ತಾಂತ್ರಿಕಕ್ಷಣ ಇಲಾಖೆಯ ಅಂತರ್ಜಾಲ ವಿಳಾಸ dtek.karnataka.gov.in or dtetech.karnataka.gov.in/kartechnicalನಿಂದ ಡೌನ್‌ಲೋಡ್ ಮಾಡಿಕೊಂಡು ಪುಸ್ತಕದಲ್ಲಿನ ಸೂಚನೆಗಳನ್ವಯ ಅಭ್ಯರ್ಥಿಗಳು ಅರ್ಜಿಗಳನ್ನು ಭರ್ತಿ ಮಾಡಬೇಕದು ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಆಳಂದ ಸರಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ಪ್ರಾಚಾರ್ಯರ ಮೊಬೈಲ್ ಸಂ. 7760309348 ಗೆ ಸಂಪರ್ಕಿಸಲು ಕೋರಲಾಗಿದೆ.

## ರಾಜ್ಯದಲ್ಲಿ ಬಿಜೆಪಿ ಕಟ್ಟಿದ ಧೀರ ಬಿ.ಎಸ್. ಯಡಿಯೂರಪ್ಪ : ವೈ.ಎಂ.ಸತೀಶ್

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಮೇ.4: ರಾಜ್ಯದಲ್ಲಿ ಬಿಜೆಪಿ ಕಟ್ಟಿದ ಧೀರ, ರೈತ ನಾಯಕ, ದೇಶಕ್ಕೆ ಅನ್ನ ನೀಡುವ ರೈತರಿಗಾಗಿಯೇ ಪ್ರತ್ಯೇಕ ಕೃಷಿ ಬಜೆಟ್ ಮಂಡಿಸಿದ ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರ 50 ವರ್ಷಗಳ ಸಾರ್ಥಕ ರಾಜಕೀಯ ಸಾಧನೆ ಹಿನ್ನೆಲೆ ಮೇ.9 ರಂದು ಆಯೋಜಿಸಿದ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಪ್ರತಿಯೊಬ್ಬರು ಭಾಗವಹಿಸಿ ನಮ್ಮ ಯಡಿಯೂರಪ್ಪ ಅವರ ಕೈ ಬಲಪಡಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರು ಮನವಿ ಮಾಡಿದರು. ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ರಾಜ್ಯಕ್ಕೆ ಮಾಜಿ ಸಿ.ಎಂ. ಬಿ.ಎಸ್. ಯಡಿಯೂರಪ್ಪ ಅವರ ಕೊಡುಗೆ ಸಾಕಷ್ಟಿದೆ. ಇದನ್ನು ಯಾರು ಮರೆಯೋಲ್ಲ, ಅವರ 50 ವರ್ಷಗಳ ಸುಧೀರ್ಘ



ರಾಜಕೀಯ ಸಾರ್ಥಕ ಜೀವನ ಸಾಧನೆಯ ಅಭಿಮಾನೋತ್ಸವಕ್ಕೆ ಗಣಿ ಜಿಲ್ಲೆ ಬಳ್ಳಾರಿ ಜಿಲ್ಲೆಯಿಂದ 25 ರಿಂದ 30 ಸಾವಿರಕ್ಕೂ ಹೆಚ್ಚು ಜನರು ತೆರಳುತ್ತಿದ್ದಾರೆ. ರಾಜ್ಯ ಸೇರಿದಂತೆ ದೇಶದ ನಾನಾ ಮೂಲೆ ಮೂಲೆಗಳಿಂದ ಲಕ್ಷಾಂತರ ಜನರು ಭಾಗವಹಿಸಲಿದ್ದು, ಯಡಿಯೂರಪ್ಪ ಅವರ ಕೈ ಬಲಪಡಿಸಲಿದ್ದಾರೆ. ಜಿಲ್ಲೆ, ರಾಜ್ಯ, ದೇಶ ವಿದೇಶಗಳಲ್ಲೂ ಅವರ ಅಭಿಮಾನಿಗಳಿದ್ದು, ಬೆಂಬಲಿಗರಿದ್ದು, ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವಕ್ಕೆ ಸಾಕ್ಷಿಯಾಗಲಿದ್ದಾರೆ ಎಂದರು. ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೊಕ ಅವರು ಮಾತನಾಡಿ, ಚಿತ್ರದುರ್ಗ ನಗರದ ದಾವಣಗೆರೆ ರಸ್ತೆಯ ಮಾದರ ಚನ್ನಯ್ಯ ಶ್ರೀಮಠದ ಪಕ್ಕದ ಆವರಣದಲ್ಲಿ ಮೇ.9ರಂದು ರೈತ ನಾಯಕ, ಹಿರಿಯ ಮುತ್ಸದ್ದಿ ರಾಜಕಾರಣಿ ಮಾಜಿ ಸಿ.ಎಂ.ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ಸುಧೀರ್ಘ ಸಾರ್ಥಕ ರಾಜಕೀಯ ಜೀವನದ ಅಭಿಮಾನೋತ್ಸವ ಸಮಾರಂಭ ಅದ್ದೂರಿಯಾಗಿ ನಡೆಯಲಿದ್ದು, ಅನೇಕ ಜನರು, ಗಣ್ಯರು ಮೇ.8ರಂದೆ ತೆರಳಲಿದ್ದಾರೆ. ಇನ್ನು ಕೆಲವರು ಮೇ.9 ರಂದು ತೆರಳಲಿದ್ದಾರೆ. ಗಣಿನಾಡು ಬಳ್ಳಾರಿ ಜಿಲ್ಲೆಯಿಂದ 250 ಸಾರಿಗೆ ಬಸ್, 100ಕ್ಕೂ ಹೆಚ್ಚು ಕ್ರೂಸರ್ ಸೇರಿದಂತೆ ವಿವಿಧ ವಾಹನಗಳ ಮೂಲಕ ಅಭಿಮಾನಿಗಳು, ಪಕ್ಷದ ಕಾರ್ಯಕರ್ತರು ತೆರಳಲಿದ್ದಾರೆ. ಕೆಲವರು ಸ್ವಂತ ವಾಹನಗಳ ಮೂಲಕ ತೆರಳಲಿದ್ದಾರೆ. 50 ವರ್ಷಗಳ ಸಾರ್ಥಕ, ಸುಧೀರ್ಘ ಸಾಧನೆ ಮಾಡಿದ ಪಕ್ಷದ ಹಿರಿಯ ಚೇತನ, ರೈತರ ಕಣ್ಮಣಿ, ಅಭಿವೃದ್ಧಿ ಹರಿಕಾರ ಮಾಜಿ ಸಿ.ಎಂ. ಬಿ.ಎಸ್. ಯಡಿಯೂರಪ್ಪ ಅವರು ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕೆಲಸಗಳು ಇಂದಿಗೂ ಜನರ ಮನಸ್ಸಿನಲ್ಲಿ ಉಳಿದಿವೆ. ಅವಧಿಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಕೋಟ್ಯಂತರ ರೂ. ಅನುದಾನ ಬಿಡುಗಡೆ ಮಾಡುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ. ಇಂತಹ ನಾಯಕರನ್ನು ಎಂದಿಗೂ ಮರೆಯಲು ಸಾಧ್ಯವೇ ಇಲ್ಲ. ಪ್ರತಿಯೊಬ್ಬರೂ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಗುತ್ತಿಗನೂರು ವಿರೂಪಾಕ್ಷಗೌಡ, ಖಾರದಪುಡಿ ಮುದ್ದನ ಗೌಡ, ಗಾಳಿ ಶಂಕ್ರಪ್ಪ, ಅಡವಿಸ್ವಾಮಿ, ಗುಗ್ಗರಹಟ್ಟಿ ರಾಮಾಂಜಿನಿ, ಸುನಿಲ್ ರೆಡ್ಡಿ, ಮುರಹರ ಗೌಡ ಸೇರಿದಂತೆ ಇತರರಿದ್ದರು.

## ದುರಾಡಆತಕ್ಕೆ ಸೋಲು, ಜನಸಾಮಾನ್ಯನಿಗೆ ಗೆಲುವು ಶಾಸಕ ಪ್ರಭು ಚವ್ಹಾಣ

• **ಮಲ್ಲಮ್ಮ ನುಡಿ ವಾರ್ತೆ ಔರಾದ(ಬಿ)**



ಮೇ.4: ಪಂಚರಾಜ್ಯಗಳ ಚುನಾವಣೆಗಳು ದುರಾಡಳಿತಕ್ಕೆ ಸೋಲು, ಜನಸಾಮಾನ್ಯನಿಗೆ ಗೆಲುವು ಎಂಬ ಸ್ಪಷ್ಟ ಸಂದೇಶವನ್ನು ನೀಡಿವೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ ಬಿಜೆಪಿಯ ಐತಿಹಾಸಿಕ ಗೆಲುವು ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿ, ಪರಿಣಾಮಕಾರಿ ಆಡಳಿತ ಮತ್ತು ಜನಪರ ಯೋಜನೆಗಳಿಗೆ ಸಿಕ್ಕ ಗೆಲುವಾಗಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಂಘಟನಾ ಶಕ್ತಿ, ರಾಜಕೀಯ ಕಾರ್ಯಯೋಜನೆ ಹಾಗೂ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರ ಸಮರ್ಪಿತ ಕೆಲಸವು ಮಹತ್ತರ ಪಾತ್ರವಹಿಸಿದೆ ಎಂದಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ 15 ವರ್ಷಗಳ ದುರಾಡಳಿತ, ಭ್ರಷ್ಟಾಚಾರ ಹಾಗೂ ಕಾನೂನು ಸುವ್ಯವಸ್ಥೆಯ ಹದಗೆಟ್ಟ ಪರಿಸ್ಥಿತಿಯಿಂದ ಜನತೆ ಬಹಳಷ್ಟು ಬೇಸರ ಹೊಂದಿದ್ದರು. ಅವರು ಜನತೆಗೆ ಕನಿಷ್ಟ ಮೂಲಭೂತ ಅಗತ್ಯತೆಗಳನ್ನು ಪೂರೈಸಲು ಕೂಡ ವಿಫಲರಾಗಿದ್ದರು. ಆಡಳಿತದಲ್ಲಿ ಪಾರದರ್ಶಕತೆಯ ಕೊರತೆ ಎದ್ದು ಕಾಣುತ್ತಿತ್ತು.

ಅಭಿವೃದ್ಧಿಗಿಂತ ಅನಾವಶ್ಯಕ ವಿಷಯಗಳತ್ತ ಹೆಚ್ಚಿನ ಗಮನ ಹರಿಸಿರುವುದಕ್ಕೆ ಜನರಲ್ಲಿ ಅಸಮಾಧಾನ ಹೆಚ್ಚಾಗಿತ್ತು. ವಿಶೇಷವಾಗಿ ಮಹಿಳಾ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿದ್ದರಿಂದ ಮಮತಾ ಬ್ಯಾನರ್ಜಿ, ಕಾಂಗ್ರೆಸ್ ಹಾಗೂ ಮತ್ತಿತರೆ ಪಕ್ಷಗಳಿಗೆ ಮಹಿಳಾ ಮತದಾರರು ತಕ್ಕ ಪಾಠ ಕಲಿಸಿದ್ದಾರೆ ಎಂದಿದ್ದಾರೆ.

ಅಸ್ಸಾಂನಲ್ಲಿ ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಶರ್ಮಾ ಅವರು ಮಾಡಿದ ಅಭಿವೃದ್ಧಿ ಕೆಲಸಗಳನ್ನು ಮೆಚ್ಚಿಕೊಂಡಿದ್ದರಿಂದ ಜನತೆ ಮೂರನೇ ಅವಧಿಗೆ ಭರ್ಜರಿ ಗೆಲುವು ನೀಡಿದ್ದಾರೆ. ಎಲ್ಲ ಕಡೆ ಬಿಜೆಪಿ ಉತ್ತಮ ಸ್ಥಿತಿಯಲ್ಲಿದೆ. ಮುಂದಿನ ದಿನಗಳಲ್ಲಿ ಕರ್ನಾಟಕ ಒಳಗೊಂಡು ದೇಶದಿಂದ ಕಾಂಗ್ರೆಸ್ ನಿರ್ಮೂಲನೆಯಾಗಲಿದೆ ಎಂದು ಹೇಳಿದ್ದಾರೆ. ಎಲ್ಲ ಮತದಾರರು, ಪಕ್ಷದ ಕಾರ್ಯಕರ್ತರು ಹಾಗೂ ನಾಯಕತ್ವಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ.

## ಪಂಚ ರಾಜ್ಯಗಳ ಚುನಾವಣೆ, ಬಿಜೆಪಿ ಸಂಭ್ರಮಾಚರಣೆ

## ಪಶ್ಚಿಮ ಬಂಗಾಳನಲ್ಲಿ ಅರಳಿದ ಕಮಲ, ಬಿಜೆಪಿ ಕಾರ್ಯಕರ್ತರ ಸಂಭ್ರಮಾಚರಣೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಪಶ್ಚಿಮ ಬಂಗಾಳ, ಪಾಂಡಿಚೇರಿ, ಅಸ್ಸಾಂನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಇಲ್ಲಿನ ಬಿಜೆಪಿ ಕಾರ್ಯಕರ್ತರು ನಗರದ ಹೃದಯ ಭಾಗ ರಾಯಲ್ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸೋಮವಾರ ವಿಜಯೋತ್ಸವ ಆಚರಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೊಕ ಅವರು ಮಾತನಾಡಿ, ಪಂಚರಾಜ್ಯಗಳ ಚುನಾವಣೆಯಲ್ಲಿ ಅಸ್ಸಾಂ, ಪಾಂಡಿಚೇರಿ, ವಿಶೇಷವಾಗಿ ಪಶ್ಚಿಮ ಬಂಗಾಳ ನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದ್ದು, ಈ ಗೆಲುವಿನ ಗಾಳಿ ರಾಜ್ಯಕ್ಕೂ ಬೀಸಲಿದೆ. ಇದು ದೇಶದ ಕಾರ್ಯಕರ್ತರ ಗೆಲುವಾಗಿದೆ. ರಾಜ್ಯದ ಮೇಲು ಈ ಗಾಳಿ ಬೀಸಲಿದೆ. ಈ ಫಲಿತಾಂಶ ಗಮನಿಸಿದರೆ, ಇಡೀ



ದೇಶ ಬಿಜೆಪಿ ಪರವಾಗಿದೆ, ಈ ಶಕ್ತಿ ರಾಜ್ಯ ಹಾಗೂ ಜಿಲ್ಲೆಯಲ್ಲಿ ಅಪ್ಪಳಿಸಲಿದೆ ಎಂದರು.

ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರು ಮಾತನಾಡಿ, ನಮ್ಮ ಪ್ರಧಾನಿಮಂತ್ರಿ ನರೇಂದ್ರ ಮೋದಿ ಅವರ ಜನಪರ ಆಡಳಿತಕ್ಕೆ ಪಂಚರಾಜ್ಯಗಳ ಚುನಾವಣೆಯಲ್ಲಿ ಜನರು ಬಿಜೆಪಿಗೆ ಆಶೀರ್ವಾದ ಮಾಡಿದ್ದಾರೆ, ಇದು ಸಂತಸ ಮೂಡಿಸಿದೆ. ಮೋದಿ ಅವರ ತಂತ್ರದಲ್ಲಿ ಮೊದಲ ಬಾರಿಗೆ ಪಶ್ಚಿಮ ಬಂಗಾಳದಲ್ಲಿ ಮೊದಲ ಬಾರಿಗೆ ಬಿಜೆಪಿ ಕಮಲ ಅರಳಿದ್ದು, ಸ್ವಂತ ಬಲದ ಮೇಲೆ ಅಧಿಕಾರ ಚುಕ್ಕಾಣಿ ಹಿಡಿದಿದೆ. ಈ ಗೆಲುವಿನ ಓಟ ರಾಜ್ಯದಲ್ಲೂ ಮುಂದುವರಿಯಲಿದ್ದು, ಮತ್ತೆ ನಾವು ಇದೇ ಸ್ಥಳದಲ್ಲೇ ಸಂಭ್ರಮಾಚರಣೆ ಮಾಡುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಮಾಜಿ ಸಂಸದ ಸಣ್ಣ ಫಕೀರಪ್ಪ, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ಬುಡಾ ಮಾಜಿ ಅಧ್ಯಕ್ಷ ಮಾರುತಿ ಪ್ರಸಾದ್ ಸರ್ವಶೆಟ್ಟಿ, ಪಾಲಿಕೆ ಸದಸ್ಯರಾದ ಸುರೇಖಾ ಮಲ್ಲನಗೌಡ, ಕೆ.ಹನುಮಂತಪ್ಪ, ಗುಡಿಗಂಟೆ ಹನುಮಂತಪ್ಪ, ಬಿಜೆಪಿ ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಹಂಪಿ ರಮಣ, ಡಾ.ಅರುಣಾ ಕಾಮಿನೇನಿ ಸೇರಿದಂತೆ ಅನೇಕ ಗಣ್ಯರು, ನೂರಾರು ಕಾರ್ಯಕರ್ತರು ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಕೆ.ರಾಮಲಿಂಗಪ್ಪ, ಅಡವಿಸ್ವಾಮಿ, ಓಂ ಪ್ರಕಾಶ್, ಮಲ್ಲೇಶ್ ಕುಮಾರ್, ಎಚ್. ಓಬಳೇಶ್, ಹನುಮೇಶ ಉಪ್ಪಾರ, ಹಲಕುಂದಿ ವೀರನಗೌಡ, ಶಂಕ್ರಪ್ಪ, ರಾಘವೇಂದ್ರ ಎಸ್.ಚಲುವಾದಿ, ಹನುಮಂತಪ್ಪ ಕೋಳೂರು, ಎರಂಗಳಿ ತಿಮ್ಮಾರೆಡ್ಡಿ, ಶರಣು ಆರ್.ಸೋಮನಗೌಡ,

ರಬಿಯಾ, ಡಾ.ರೇಣುಕಾ ಸೇರಿದಂತೆ ವಿವಿಧ ಗಣ್ಯರು, ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

## ದಾವಣಗೆರೆ ಬಾಗಲಕೋಟೆ ಉಪಚುನಾವಣೆಯಲ್ಲಿ ಭರ್ಜರಿ ಜಯ ಶಾಸಕ ಡಾ. ಅಜಯ್ ಸಿಂಗ್ ಹರ್ಷ

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಮೇ.4: ದಾವಣಗೆರೆ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಭರ್ಜರಿ ಜಯ ದಾಖಲಿಸಿರುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಹಾಗೂ ಆ ಉಮೇಶ್ ಮೇಟಿ ಮತ್ತು ಸಮರ್ಥ ಶಾಮನೂರ ಗೆಲವು ಹಿನ್ನಲೆ ಶಾಸಕ ಹಾಗೂ ಅಧ್ಯಕ್ಷರಾದ ಡಾ. ಅಜಯ್ ಸಿಂಗ್ ಹರ್ಷ ವ್ಯಕ್ತಪಡಿಸಿ ನಂತರ ಮಾತನಾಡಿದ ಅವರು

ಕ್ಷೇತ್ರದ ಅಭಿವೃದ್ಧಿ ಮತ್ತು ಜನರ ಹಿತಕ್ಕಾಗಿ ನೀವು ತೋರಿದ ಶ್ರಮಕ್ಕೆ ಮತದಾರ ಪ್ರಭುಗಳು ಬೆಂಬಲ ನೀಡಿದ್ದಾರೆ. ನಿಮ್ಮ ನಾಯಕತ್ವದಲ್ಲಿ ಬಾಗಲಕೋಟೆ ಕ್ಷೇತ್ರವು ಮಾದರಿಯಾಗಿ ಬೆಳೆಯಲಿ ಎಂದು ಆಶಿಸುತ್ತೇನೆ. ಕಾಂಗ್ರೆಸ್ ಪಕ್ಷದ ಸಿದ್ಧಾಂತ ಹಾಗೂ ಜನಪರ ಯೋಜನೆಗಳಿಗೆ ಈ ಗೆಲುವು ಸಾಕ್ಷಿಯಾಗಿದೆ. ಪಕ್ಷದ ಎಲ್ಲಾ ನಾಯಕರಿಗೆ ಹಾಗೂ ಹಗಲಿರುಳು ಶ್ರಮಿಸಿದ ಕಾರ್ಯಕರ್ತ ಬಂಧುಗಳಿಗೆ ನನ್ನ ಅಭಿನಂದನೆಗಳು. ಎಂದು ಪತ್ರಿಕೆ ಪ್ರಕಟಣೆ ಮೂಲಕತಿಳಿಸಿದ್ದಾರೆ

## ನೂತನ ಉಪ ಪೋಲಿಸ್ ಆಯುಕ್ತರಾಗಿ ಶಾಲೂ ಅಧಿಕಾರ ಸ್ವೀಕಾರ

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಮೇ.4– ನಗರಕ್ಕೆ ನೂತನ ಉಪ ಪೋಲಿಸ್ ಆಯುಕ್ತರಾಗಿ ನೇಮಕಗೊಂಡ ಶಾಲೂ ಐಪಿಎಸ್ ಅವರು ಸೋಮವಾರ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದರು.

ಕರ್ನಾಟಕ ಕೇಡರ್‌ನ 2021ರ ಬ್ಯಾಚ್‌ನ ಶಾಲೂ ಅವರು ಈಗಾಗಲೇ ಹೊಳೆನರಸೀಪುರದಲ್ಲಿ ಸಹಾಯಕ ಪೋಲಿಸ್ ವರಿಷ್ಠಾಧಿಕಾರಿಗಳಾಗಿ (ಎಸಿಪಿ), ಸೇವೆ ಸಲ್ಲಿಸಿದ್ದಾರೆ. ನಂತರ ಅಪರಾಧ ತನಿಖಾ ಇಲಾಖೆಯ (ಸಿಐಡಿ) ವಿಶೇಷ ವಿಚಾರಣಾ ವಿಭಾಗದಲ್ಲಿ ಪೋಲಿಸ್ ವರಿಷ್ಠಾಧಿಕಾರಿಗಳಾಗಿ ಬಡ್ತಿ ಹೊಂದಿದ್ದರು.

ಮೂಲತ: ಉತ್ತರ ಪ್ರದೇಶದ ಜೌನಪುರ ಮೂಲದ ಶಾಲು ಅವರು ಕಂಪ್ಯೂಟರ್ ಸೈನ್ಸ್‌ನಲ್ಲಿ ಬಿಟೆಕ್ ಪದವಿ ಪಡೆದಿದ್ದಾರೆ. ತಮ್ಮ ಕಾರ್ಯಕ್ಷಮತೆ ಮತ್ತು ನಿಷ್ಠೆಯಿಂದ ಗುರುತಿಸಿಕೊಂಡಿರುವ ಅವರು, ಸದ್ಯ ನಗರದಲ್ಲಿ ಕಾನೂನು ಸುವ್ಯವಸ್ಥೆ ಬಲಪಡಿಸಲು ಹಾಗೂ ಸಾರ್ವಜನಿಕರ ಭದ್ರತೆಗಾಗಿ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳುವ ನಿರೀಕ್ಷೆಯನ್ನು ಹೊಂದಿದ್ದಾರೆ.

## ಯುವ ರಾಜಕೀಯ ಅಲೆ: ಕರ್ನಾಟಕದಲ್ಲೂ ಮೂಡಬಹುದೇ ಹೊಸ ಸಮೀಕರಣ: ಹಿರಿಯ ಪತ್ರಕರ್ತ ಎಂ. ಜಂಬುನಾಥ್

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ತಮಿಳುನಾಡಿನಲ್ಲಿ ನಟ ವಿಜಯ್ ದಳಪತಿ ಸ್ಥಾಪಿಸಿದ (ಟಿವಿಕೆ) ಪಕ್ಷದ ವೇಗವಾದ ಉದಯ ದಕ್ಷಿಣ ಭಾರತದ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಯುವಕರ ಬೆಂಬಲದೊಂದಿಗೆ ಬೆಳೆಯುತ್ತಿರುವ ಈ ಪಕ್ಷ, ಸಾಂಪ್ರದಾಯಿಕ ರಾಜಕೀಯ ಶೈಲಿಗೆ ಸವಾಲು ಸ್ವೀಕರಿಸಿ ಪ್ರಭಾವವನ್ನು ಹೆಚ್ಚಿಸಿಕೊಳ್ಳುತ್ತಿದೆ.

ಅದೇ ರೀತಿ ಆಂಧ್ರ ಪ್ರದೇಶದಲ್ಲಿ ಪವನ್ ಕಲ್ಯಾಣ್ ಸ್ಥಾಪಿಸಿದ ಜನ ಸೇನ ಪಕ್ಷ ಈಗಾಗಲೇ ಪ್ರಭಾವ ಬೀರಿದ್ದು, ಉಪಮುಖ್ಯಮಂತ್ರಿ ಸ್ಥಾನ ವಹಿಸಿಕೊಂಡಿರುವುದು ಗಮನಾರ್ಹ. ಇದು ಪ್ರಾದೇಶಿಕ ರಾಜಕೀಯದಲ್ಲಿ ಪರ್ಯಾಯ



ಶಕ್ತಿಯಾಗಿ ಹೊರಹೊಮ್ಮುತ್ತಿದೆ. ಈ ಹಿನ್ನೆಲೆ, ಕರ್ನಾಟಕದಲ್ಲೂ ಯುವಕರು ರಾಜಕೀಯಕ್ಕೆ ಧುಮುಕಬೇಕು ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ. ಹಿರಿಯ ವರದಿಗಾರ ಎಂ. ಜಂಬುನಾಥ್ ಮಾತನಾಡಿ, "ರಾಜಕೀಯದಲ್ಲಿ ಗುಣಾತ್ಮಕ ಬದಲಾವಣೆ ತರಲು ಯುವ ನಾಯಕತ್ವ ಅತ್ಯವಶ್ಯಕ. ಶಿಕ್ಷಣ ಪಡೆದ ಯುವಕರು ಮುಂದೆ ಬಂದರೆ ಪಾರದರ್ಶಕತೆ ಹಾಗೂ ಅಭಿವೃದ್ಧಿಗೆ ಹೊಸ ವೇಗ ಸಿಗುತ್ತದೆ" ಎಂದು ಹೇಳಿದ್ದಾರೆ.

ಅವರು ಮುಂದುವರೆದು, ಜನಸಾಮಾನ್ಯರ ಸಮಸ್ಯೆಗಳ ಪರಿಹಾರಕ್ಕೆ ಹೊಸ ಚಿಂತನೆಗಳು ಅಗತ್ಯವಿದ್ದು, ಅದನ್ನು ಯುವಕರು ಮಾತ್ರ ಪರಿಣಾಮಕಾರಿಯಾಗಿ ಮುನ್ನಡೆಸಬಹುದು ಎಂದು ಅಭಿಪ್ರಾಯಪಟ್ಟರು.

# ಕುಡಿಯುವ ನೀರಿನ ಸಮಸ್ಯೆ ಕುರಿತು ಸಭೆ:ನೀರು ಸರಬರಾಜಿಗೆ ಅಡ್ಡಿ ಮಾಡುವವರ ವಿರುದ್ಧ ಪ್ರಕರಣ ದಾಖಲಿಸಿ:ಸಚಿವ ಈಶ್ವರ ಬಿ.ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ
ಬೀದರ



ಮೇ.04: ಬೇಸಿಗೆಯ ತಾಪದ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರು ಸರಬರಾಜಿಗೆ ಯಾವುದೇ ರೀತಿಯ ಅಡ್ಡಿಯನ್ನುಂಟು ಮಾಡುವವರ ವಿರುದ್ಧ ಅಧಿಕಾರಿಗಳು ಪ್ರಕರಣ ದಾಖಲಿಸುವಂತೆ ಅರಣ್ಯ,ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಸೂಚಿಸಿದರು. ಕುಡಿಯುವ ನೀರಿನ ಸಮಸ್ಯೆ ಕುರಿತು ಇಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡುತ್ತಾ, ಸರಕಾರದ ಅನುದಾನದಿಂದ ಖಾಸಗಿ ಜಮೀನಿನಲ್ಲಿ ಕೊರೆಯಿಸಿದ ಕೊಳವೆ ಭಾವಿ ಅಥವಾ ತೆರೆದ ಬಾವಿಯಿಂದ ಕುಡಿಯುವ ನೀರು ಸರಬರಾಜು ಮಾಡುವ ಸಂದರ್ಭದಲ್ಲಿ ಕೆಲವರು ಅಡ್ಡಿಯನ್ನುಂಟು ಮಾಡುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ. ಯಾರು ಎಷ್ಟೇ ಪ್ರಭಾವಿಯಾಗಿರಲ್ಲಿ,ಶಕ್ತಿಶಾಲಿಯಾಗಿರಲಿ, ಕುಡಿಯುವ ನೀರು ಸರಬರಾಜು ಮಾಡಲು ಅಡ್ಡಿಪಡಿಸಿದವರ ವಿರುದ್ಧ ಅಧಿಕಾರಿಗಳು ನಿರ್ಧಾಕ್ಷಿಣ್ಯವಾಗಿ ಪ್ರಕರಣ ದಾಖಲಿಸುವಂತೆ ಸಚಿವರು ಸೂಚಿಸಿದರು. ಜಿಲ್ಲೆಯಲ್ಲಿ ಔರಾದ್, ಭಾಲ್ಕಿ,ಬಸವಕಲ್ಯಾಣ,ಕಮಲನಗರ ತಾಲ್ಲೂಕಿನಲ್ಲಿ ಹೆಚ್ಚಿನ ನೀರಿನ ಸಮಸ್ಯೆ ಕಂಡುಬಂದಿದೆ. ಔರಾದ್‌ನ 14 ಗ್ರಾಮಗಳು ಕಮಲನಗರ 11, ಬಸವಕಲ್ಯಾಣ 10,ಭಾಲ್ಕಿಯ 8 ಗ್ರಾಮ ಸೇರಿದಂತೆ 43 ಗ್ರಾಮಗಳಲ್ಲಿ ಸದ್ಯಕ್ಕೆ ನೀರು ಸಮಸ್ಯೆ ಉಲ್ಬಣಗೊಂಡಿದೆ. ಮೇ ಕೊನೆಯವರೆಗೆ ಸಮಸ್ಯೆ ತೀವ್ರವಾಗಬಹುದಾಗಿದೆ.ಅಧಿಕಾರಿಗಳು ಟ್ಯಾಂಕರ್ ಮೂಲಕ ನೀರು ಸರಬರಾಜು ಮುಂದುವರಿಸುವಂತೆ ಸೂಚಿಸಿದರು. ತೀರ ಅಗತ್ಯವಿದ್ದಲ್ಲಿ ಮಾತ್ರ ಹೊಸ ಕೊಳವೆ ಬಾವಿ ಕೊರೆಯಿಸಿ ಎಂದು ತಿಳಿಸಿದರು. ಔರಾದ್‌ನ ತಾಂಡಾಗಲ್ಲಿ ಹೆಚ್ಚಿನ ಸಮಸ್ಯೆ ಕಂಡು ಬಂದಿದೆ. ನೀರಿನ ಮಟ್ಟ 700 ರಿಂದ 800 ಅಡಿವರೆಗೆ ಕುಸಿದಿದೆ.ಅಧಿಕಾರಿಗಳು ಕೊಳವೆಬಾವಿ ಪುನಶ್ಚೇತನ ಕಾರ್ಯಕೈಗೊಳ್ಳಬೇಕು. ಫ್ಲಶಿಂಗ್ ಹಾಗೂ ಡೀಪನಿಂಗ್ ಕಾರ್ಯಕೈಗೊಳ್ಳಬೇಕೆಂದು ತಿಳಿಸಿದರು.

ಸಮಸ್ಯಾತ್ಮಕ ಗ್ರಾಮಗಳ ವಾರ್ಡಗಳಲ್ಲಿ ಸ್ಥಳೀಯ ತಹಸೀಲ್ದಾರರು,ತಾಲ್ಲೂಕ ಪಂಚಾಯತ ಇಓ, ಪಿಡಿಓ ಹಾಗೂ ಗ್ರಾಮ ಲೆಕ್ಕಾಧಿಕಾರಿ ಬೆಳಿಗ್ಗೆ ಓಡಾಡಿ ನೀರು ಸರಬರಾಜು ಸ್ಥಿತಿಯನ್ನು ನಿಭಾಯಿಸಿ ನೇರವಾಗಿ ಮೋಟಾರು ಹಚ್ಚಿಕೊಳ್ಳುವವರ ಸರಬರಾಜು ಕಟ್ ಮಾಡುವಂತೆ ಸಚಿವರು ಸೂಚಿಸಿದರು. ಗ್ರಾಮಗಳ ಅವಶ್ಯಕತೆಗನುಗುಣವಾಗಿ ಕಾರ್ಯನಿರ್ವಹಿಸಿ ಟ್ಯಾಂಕರ್ ಸರಬರಾಜು ಮಾಡುವುದರ ಬಿಲ್‌ಗಳನ್ನು ಸಕಾಲದಲ್ಲಿ ಪಾವತಿಸುವಂತೆ ಸೂಚಿಸದರು.

ಸದ್ಯಕ್ಕೆ ಮೇವಿನ ಕೊರತೆ ಇರುವುದಿಲ್ಲ. ಮುಂದಿನ 24 ವಾರಗಳಿಗೆ ಆಗುವಷ್ಟು ಮೇವು ದಾಸ್ತಾನು ಇದೆ. ಜಾನುವಾರುಗಳಿಗೆ ನೀರು ಸಮಸ್ಯೆ ಆಗದಂತೆ ಕಾರಂಜಾ ಹಾಗೂ ಚುಳಕಿ ಜಲಾಶಯಗಳಿಂದ ನೀರು ಬಿಡಲು ಸೂಚಿಸಿದರು.

ಮುಂಗಾರು ಕೃಷಿ ಬಿತ್ತನೆಗೆ ರೈತರಿಗೆ ಬೀಜ, ರಸಗೊಬ್ಬರಗಳ ಕೊರತೆಯಾಗದಂತೆ ಹಾಗೂ ಎಲ್ಲವನ್ನು ಈಗಲೇ ಸಿದ್ಧಪಡಿಸಿಕೊಳ್ಳುವಂತೆ ಸಚಿವರು ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನವ ಭಾರತದ ದಿಕ್ಸೂಚಿ : ಮುಖಂಡ ಬಸವರಾಜ ಕ್ಯಾವಟರ್ ಸಂತಸ

• ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ



ಪಂಚರಾಜ್ಯ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ ಮತ್ತು ಪುದುಚೇರಿ ಹಾಗೂ ಅಸ್ಸಾಂ ರಾಜ್ಯಗಳಲ್ಲಿ ಅಲ್ಲಿಯ ಮತದಾರರು ಎನ್ ಡಿಎ ಬೆಂಬಲಿಸುವ ಮೂಲಕ ನವ ಭಾರತಕ್ಕೆ ದಿಕ್ಸೂಚಿಯಾಗಿದ್ದಾರೆ ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಹೇಳಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಫಲಿತಾಂಶದ ಮೂಲಕ ಮತದಾರರು ಅಭಿವೃದ್ಧಿ, ಸ್ಥಿರತೆ ಮತ್ತು ಭದ್ರತೆಗೆ ಮನ್ನಣೆ ನೀಡಿದ್ದಾರೆ. ಇಂದು ದೇಶದಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿ ಅವರ ನಾಯಕತ್ವದ ಮೇಲೆ ಜನರ ವಿಶ್ವಾಸ ಮತ್ತೊಮ್ಮೆ ವ್ಯಕ್ತವಾಗಿದೆ. ಇಂದಿನ ಪಂಚರಾಜ್ಯಗಳ ಚುನಾವಣಾ ಫಲಿತಾಂಶಗಳು ದೇಶಾದ್ಯಂತ "ಮೋದಿ ಹವಾ" ಇನ್ನೂ ಮುಂದುವರಿದಿದೆ ಎಂಬುದನ್ನು ಸ್ಪಷ್ಟವಾಗಿ ಸಾಬೀತುಪಡಿಸಿವೆ. ಪಶ್ಚಿಮಬಂಗಾಳದ ಫಲಿತಾಂಶವು ದೇಶದ ಪ್ರಜಾಪ್ರಭುತ್ವ ಮತ್ತು ನ್ಯಾಯಾಂಗ ವ್ಯವಸ್ಥೆಯ ಮೇಲೆ ಜನರ ನಂಬಿಕೆಗೆ ದೊಡ್ಡ ಜಯ ತಂದುಕೊಟ್ಟಿದೆ. ಮಮತಾ ಬ್ಯಾನರ್ಜಿ ಅವರ ಆಡಳಿತದಲ್ಲಿ ರಾಜ್ಯದ ಜನತೆ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದರು. ಇದೀಗ ಬಂದಿರುವ ಫಲಿತಾಂಶವು ಆ ರಾಜ್ಯದಲ್ಲಿ ಬದಲಾವಣೆಯ ಆಶೆಯನ್ನು ಮೂಡಿಸಿದ್ದು, ದೇಶದ ಜನರು ಈ ಬೆಳವಣಿಗೆಯನ್ನು ಸ್ವಾಗತಿಸುತ್ತಿದ್ದಾರೆ.

ಇನ್ನೊಂದೆಡೆ, ರಾಜ್ಯದ ಎರಡು ವಿಧಾನಸಭಾ ಉಪಚುನಾವಣೆಗಳಲ್ಲಿ ನಮ್ಮ ಅಭ್ಯರ್ಥಿಗಳು ಜಯ ಸಾಧಿಸದಿರುವುದು ನಮಗೆ ಸ್ವಲ್ಪ ನಿರಾಶೆ ತಂದಿದೆ.

ಆದಾಗ್ಯೂ, ಇದನ್ನು ಪಾಠವಾಗಿ ತೆಗೆದುಕೊಂಡು ಮುಂದಿನ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಸಂಘಟನೆ ಬಲಪಡಿಸುವ ಕಾರ್ಯವನ್ನು ಇನ್ನಷ್ಟು ತೀವ್ರಗೊಳಿಸಲಾಗುತ್ತದೆ. ಬಿಜೆಪಿ ಪಕ್ಷವು ಸದಾ ಜನಸೇವೆಗೆ ಬದ್ಧವಾಗಿದ್ದು, ಜನರ ಆಶೀರ್ವಾದದೊಂದಿಗೆ ಮುಂದಿನ ದಿನಗಳಲ್ಲಿ ಉತ್ತಮ ಸಾಧನೆ ಮಾಡುವ ವಿಶ್ವಾಸ ಹೊಂದಿದೆ.

ಅಸ್ಸಾಂ ರಾಜ್ಯದಲ್ಲಿ ಸತತ ಮೂರನೇ ಬಾರಿಗೆ ಅಧಿಕಾರದ ಗದ್ದುಗೆ ಏರುವ ಮೂಲಕ ಬಿಜೆಪಿ ಹ್ಯಾಟ್ರಿಕ್ ಗೆಲುವು ಸಾಧಿಸಿದೆ. ಪುದುಚೇರಿಯಲ್ಲಿ ಜನರ ವಿಶ್ವಾಸ ಉಳಿಸಿಕೊಳ್ಳುವಲ್ಲಿ ನಮ್ಮ ಪಕ್ಷ ಯಶಸ್ವಿಯಾಗಿದೆ. ತಮಿಳುನಾಡು ಮತ್ತು ಕೇರಳದಲ್ಲಿಯೂ ಎನ್ ಡಿಎ ಸ್ಪರ್ಧಾತ್ಮಕವಾಗಿ ಸ್ಪರ್ಧೆಯೊಡ್ಡಿದ್ದು, ಮುಂದಿನ ದಿನಮಾನಗಳಲ್ಲಿ ದೇಶದ ಉಳಿದ ಭಾಗಗಳ ಮತದಾರರಂತೆ ಈ ರಾಜ್ಯಗಳ ಮತದಾರರು, ಎನ್ ಡಿಎ ಕೈ ಹಿಡಿಯಲಿದ್ದಾರೆ ಎಂದರು.

# ಕನಕಗಿರಿ ಉತ್ಸವದ ಎಲ್ಲ ಸಮಿತಿಗಳು ಚುರುಕಾಗಿ ಕಾರ್ಯನಿರ್ವಹಿಸಲಿ: ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ

• ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ



ಮೇ.4:ಕೊಪ್ಪಳ ಜಿಲ್ಲೆಯ ಐತಿಹಾಸಿಕ ಪುಣ್ಯಕ್ಷೇತ್ರವಾದ ಕನಕಗಿರಿಯಲ್ಲಿ ಮೇ 16 ರಿಂದ ಎರಡು ದಿನಗಳ ಕಾಲ ನಿಗದಿಯಾದ ಕನಕಗಿರಿ ಉತ್ಸವ–2026ರ ವಿವಿಧ ಸಮಿತಿಗಳಲ್ಲಿನ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಚುರುಕಾಗಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಕನಕಗಿರಿ ಉತ್ಸವ–2026ರ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೇ 4ರಂದು ಹಮ್ಮಿಕೊಂಡಿದ್ದ ಮತ್ತೊಂದು ಸುತ್ತಿನ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಈ ಮೊದಲು ನಡೆದ ಸಭೆಯಲ್ಲಿ ಸೇರಿದ್ದ 16ಕ್ಕು ಹೆಚ್ಚಿನ ಸಮಿತಿಗಳಲ್ಲಿನ ಅಧಿಕಾರಿಗಳಿಗೆ ಈಗಾಗಲೇ ಬೇರೆ ಬೇರೆ ರೀತಿಯ ಕಾರ್ಯ ಹಂಚಿಕೆ ಮಾಡಿದಂತೆ ಕಾರ್ಯಪ್ರವೃತ್ತರಾಗಲು ಸೂಚಿಸಲಾಗಿತ್ತು. ಪ್ರಸ್ತುತ ಉತ್ಸವಕ್ಕೆ ಬೆರಳಣಿಯಷ್ಟು ದಿನಗಳು ಮಾತ್ರ ಬಾಕಿಯಿದೆ. ಎಲ್ಲಾ ಸಮಿತಿಗಳು ತಮ್ಮ ಕಾರ್ಯ ನಿರ್ವಹಣೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ವಿಶೇಷ ಒತ್ತು ಕೊಡಬೇಕು. ಮೇಲಿಂದ ಮೇಲೆ ಸಭೆ ನಡೆಸಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಉತ್ಸವ ಸಂದರ್ಭದಲ್ಲಿ ಕನಕಗಿರಿಯಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಬೇಕು. ಮೆರವಣಿಗೆ ಮಾರ್ಗ ಸೇರಿದಂತೆ ಎಲ್ಲಾ ಕಡೆಗೆ ವಿದ್ಯೂದೀಪಾಲಂಕಾರಕ್ಕೆ ವ್ಯವಸ್ಥೆಯಾಗಬೇಕು. ಉತ್ಸವದ ಅಂಗವಾಗಿ ನಡೆಯುವ ಮೆರವಣಿಗೆಯಲ್ಲಿ ಪಾಲ್ಗೊಳ್ಳುವ ಜಾನಪದ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆ ಬೇಗನೆ ಪೂರ್ಣವಾಗಬೇಕು. ಉತ್ಸವದಲ್ಲಿ ಕಾರ್ಯಕ್ರಮ ನೀಡುವ ಕಲಾವಿದರ ಆಯ್ಕೆ ಪ್ರಕ್ರಿಯೆ ಕೂಡ ಪಾರದರ್ಶಕವಾಗಿ ನಡೆಯಬೇಕು ಎಂದು ಮೆರವಣಿಗೆ ಮತ್ತು ಸಾಂಸ್ಕೃತಿಕ ಸಮಿತಿಗೆ ಸೂಚನೆ ನೀಡಿದರು.

ಕಾರ್ಯಕ್ರಮಕ್ಕೆ ಆಗಮಿಸಲಿರುವ ಗಣ್ಯರು, ಕಲಾವಿದರು, ಪತ್ರಕರ್ತರು, ಅಧಿಕಾರಿಗಳು ಸೇರಿದಂತೆ ಎಲ್ಲ ಆಹ್ವಾನಿತರ ಮಾಹಿತಿ ಪಡೆದು ಅವರಿಗೆ ಕನಕಗಿರಿ ಸೇರಿದಂತೆ ಸುತ್ತಲಿನ ವಿವಿಧೆಡೆ ಸರಿಯಾದ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಬೇಕು. ಸಾರ್ವಜನಿಕರಿಗೆ ಊಟ ಮತ್ತು ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಬೇಕು. ಆಹಾರ ಗುಣಮಟ್ಟದ ಬಗ್ಗೆ ಒತ್ತು ಕೊಡಬೇಕು ಎಂದು ಆಹಾರ ಸಮಿತಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಉತ್ಸವದಲ್ಲಿ ಕುಸ್ತಿ, ಕಬ್ಬಡ್ಡಿ ಹಾಗೂ ವಾಲಿಬಾಲ್ ಸೇರಿದಂತೆ ಬೇರೆ ಬೇರೆ ಕ್ರೀಡೆಗಳಿಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಹೆಸರಾಂತ ಕುಸ್ತಿ ಹಾಗೂ ಕಬಡ್ಡಿ ಪಟುಗಳು ಸೇರುವುದನ್ನು ಖಚಿತಪಡಿಸಿಕೊಂಡು ಅವರ ಪಟ್ಟಿ ನೀಡಬೇಕು ಎಂದು ಜಿಲ್ಲಾಧಿಕಾರಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವೇದಿಕೆ ಮತ್ತು ಪೇಂಡಾಲ ನಿರ್ಮಾಣ, ಗ್ರೀನ್ ರೂಮ್, ವೇದಿಕೆಗೆ ಹೂವಿನ ಕುಂಡಗಳ ವ್ಯವಸ್ಥೆ, ಬ್ಯಾರಿಕೇಡಿಂಗ್ ಮತ್ತು ಕಾರ್ಯಕ್ರಮಕ್ಕೆ ಬರುವ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆಗೆ ಅಗತ್ಯ ಕ್ರಮ ವಹಿಸುವಂತೆ ವೇದಿಕೆ ಸಮಿತಿಗೆ ಸೂಚನೆ ನೀಡಲಾಯಿತು.

ಈ ಬಾರಿ ಉತ್ಸವದಲ್ಲಿ ಕೃಷಿ ಹಾಗೂ ತೋಟಗಾರಿಕಾ ಇಲಾಖೆಯಿಂದ ದೊಡ್ಡ ಮಟ್ಟದಲ್ಲಿ ಪ್ರದರ್ಶನ ಮಳಿಗೆಗಳು ನಿರ್ಮಾಣವಾಗಬೇಕು. ರೇಷ್ಮೆ, ಮೀನುಗಾರಿಕೆ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆಯಿಂದಲು ಸಹಯೋಜನೆಗಳ ಮಾಹಿತಿ ಪ್ರದರ್ಶನ ಮಳಿಗೆಗಳನ್ನು ಅಚ್ಚುಕಟ್ಟಾಗಿ ನಿರ್ಮಿಸಬೇಕು. ಉತ್ಸವದಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಹಾಕಲು ಸಂಜೀವಿನಿ ಮತ್ತು ಎನ್.ಆರ್.ಎಲ್.ಎಂ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದರು.

ಉತ್ಸವದಲ್ಲಿ ಪಾಲ್ಗೊಳ್ಳುವ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಹೆಚ್ಚಿನ ಬಸ್‌ಗಳ ವ್ಯವಸ್ಥೆ ಮಾಡಬೇಕು. ಮೇ 16 ಮತ್ತು 17 ರಂದು ಎರಡು ದಿನಗಳ ಕಾಲ ನಡೆಯುವ ಕನಕಗಿರಿ ಉತ್ಸವದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬೇರೆ ಬೇರೆ ಸಮಿತಿಗಳು ಮತ್ತು ಪ್ರಚಾರ ಹಾಗೂ ಮಾಧ್ಯಮ ಸಮಿತಿ ಅಗತ್ಯ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ ಮಾತನಾಡಿ, ಉತ್ಸವಕ್ಕೆ ಆಗಮಿಸುವ ಗಣ್ಯ ವ್ಯಕ್ತಿಗಳು ಹಾಗೂ ಕಲಾವಿದರು ಮತ್ತು ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ಭದ್ರತಾ ವ್ಯವಸ್ಥೆಗೆ ಈಗಿನಿಂದಲೇ ಕ್ರಮ ವಹಿಸಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಇನ್ನಿತರ ಸಮಿತಿಗಳಲ್ಲಿನ ಅಧಿಕಾರಿಗಳು ಸಹಕಾರ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಕನಕಗಿರಿ ಉತ್ಸವ ಹಿನ್ನೆಲೆಯಲ್ಲಿ ಕನಕಗಿರಿ, ಕಾರಟಗಿ ಮತ್ತು ಗಂಗಾವತಿ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಪರಸ್ಪರ ಸಮನ್ವಯದಿಂದ, ಮುತುವರ್ಜಿ ವಹಿಸಿ ಕಾರ್ಯ ನಿರ್ವಹಿಸಬೇಕು. ಕನಕಗಿರಿ ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿ ಸಹ ಹಬ್ಬದ ವಾತಾವರಣ ನಿರ್ಮಾಣವಾಗುವಂತೆ ಕನಕಗಿರಿ ತಾಲೂಕಿನ ಎಲ್ಲ ಗ್ರಾಮ ಪಂಚಾಯತಗಳ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಕಾರ್ಯಕ್ರಮಗಳನ್ನು ರೂಪಿಸಬೇಕು. ಕನಕಗಿರಿ ತಾಲೂಕಿನಲ್ಲಿನ ಐತಿಹಾಸಿಕ ಸ್ಥಳಗಳೆಲ್ಲವೂ ಅಲಂಕಾರವಾಗಬೇಕು. ಎಲ್ಲ ಪ್ರಮುಖ ರಸ್ತೆಗಳು ಸುಗಮ ಸಂಚಾರಕ್ಕೆ ಸಿದ್ದವಾಗಿರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಮುಖ್ಯ ಯೋಜನಾಧಿಕಾರಿಗಳಾದ ಡಿ.ಮಂಜುನಾಥ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶರಣೇಗೌಡ ಪಾಟೀಲ್, ಕನಕಗಿರಿ ತಾಲ್ಲೂಕು ಕಸಾಪ ಅಧ್ಯಕ್ಷರಾದ ಮಹೇಬೂಬ್, ಮುಖ್ಯ ಲೆಕ್ಕಾಧಿಕಾರಿಗಳಾದ ಅಮೀನ ಅತ್ತಾರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿಗಳಾದ ಮಂಜುನಾಥ ಗುಂಡೂರು, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಜಗದೀಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪನಿರ್ದೇಶಕರಾದ ಸೋಮಶೇಖರಗೌಡ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಮೇಶ್ ಮೇಟಿ ಗೆಲುವು: ರಂಗನಗೌಡ ಹರ್ಷ

• ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ



ಮೇ.4:ಬಾಗಲಕೋಟೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ 21800 ಮತಗಳ ಅಂತರದಿಂದ ಜಯ ಸಾಧಿಸಿದ್ದು ಬಾಗಲಕೋಟ ಉಪಚುನಾವಣೆ ಉಸ್ತುವಾರಿ ಹಾಗೂ ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಕಾರ್ಯದರ್ಶಿ ರಂಗನಗೌಡ ಪಾಟೀಲ್ ದೇವಿಕೇರಿ ವರ್ಷ ವ್ಯಕ್ತಪಡಿಸಿದ್ದಾರೆ. ನಾನು ಕೂಡ ಉಮೇಶ್ ಮೇಟಿ ರವರ ಪರ ಅವರ ಗೆಲುವಿಗಾಗಿ ಶ್ರಮಿಸಿದ್ದೇನೆ ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳೆ ನಮಗೆ ಶ್ರೀರಕ್ಷೆ ಕಾಂಗ್ರೆಸ್ ಪಕ್ಷ ದೀನ ದಲಿತ ಬಡವರ ಪರವಾಗಿ ಕೆಲಸ ಮಾಡುತ್ತದೆ ಉಮೇಶ್ ಮೇಟಿಯವರು ಅತ್ಯಂತ ಸರಳ ವ್ಯಕ್ತಿಯಾಗಿದ್ದು ಜನರ ಸೇವೆಗೆ ಸದಾ ಸಿದ್ದರಿದ್ದಾರೆ. ನಮ್ಮ ಪಕ್ಷದ ಸಾಧನೆಗಳಿಗೆ ಜನ ಮನ್ನಣೆ ನೀಡಿದ್ದಾರೆ. ಬಿಜೆಪಿ ಪಕ್ಷದ ಬಣ್ಣದ ಮಾತುಗಳಿಗೆ ಜನ ಮರುಳಾಗಿಲ್ಲ ಪಕ್ಷದ ಅಭ್ಯರ್ಥಿ ಗೆಲ್ಲುವಲ್ಲಿ ಶ್ರಮವಹಿಸಿದ ಸಚಿವರು ಶಾಸಕರು ಪಕ್ಷದ ಮುಖಂಡರು ಕಾರ್ಯಕರ್ತರು ಹಾಗೂ ಮತದಾರರಿಗೆ ಬಾಗಲಕೋಟ ಉಪ ಚುನಾವಣೆ ಉಸ್ತುವಾರಿ ಹಾಗೂ ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಕಾರ್ಯದರ್ಶಿ ರಂಗನಗೌಡ ಪಾಟೀಲ್ ದೇವಿಕೇರಿ ಧನ್ಯವಾದಗಳು ತಿಳಿಸಿದ್ದಾರೆ.

# ಪಶ್ಚಿಮ ಬಂಗಾಳ, ಪುದುಚೇರಿ, ಆಸ್ಸಾಂ, ರಾಜ್ಯಗಳ ಚುನಾವಣಾ ಅಭೂತಪೂರ್ವ ವಿಜಯಕ್ಕೆ ಅಭಿನಂದನೆ; ಡಾ. ಶರಣಭೂಪಾಲರಡ್ಡಿ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮೇ.4:ಪಶ್ಚಿಮ ಬಂಗಾಳ, ಪುದುಚೇರಿ ಹಾಗೂ ಆಸ್ಸಾಂ ವಿಧಾನಸಭಾ ಚುನಾವಣೆಗಳಲ್ಲಿ ಭಾರತೀಯ ಜನತಾ ಪಕ್ಷವು ಅಭೂತಪೂರ್ವ ಗೆಲುವು ಸಾಧಿಸಿರುವುದು ಅತ್ಯಂತ ಸಂತಸದ ವಿಷಯವಾಗಿದೆ. ಈ ಐತಿಹಾಸಿಕ ವಿಜಯಕ್ಕೆ ಕಾರಣರಾದ ಪಕ್ಷದ ಅಭ್ಯರ್ಥಿಗಳಿಗೆ ಹಾಗೂ ರಾಷ್ಟ್ರೀಯ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಮತ ಚಲಾಯಿಸಿದ ಮತದಾರ ಪ್ರಭುಗಳಿಗೆ ಅಭಿನಂದನೆಗಳು ಸಲ್ಲಿಸುತ್ತೇನೆ. ಗೌರವಾನ್ವಿತ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರು ನೀವು ನಮಗೆ ಮತ ನೀಡಿ, ನಾವು ನಿಮಗೆ ಸ್ವಾತಂತ್ರ್ಯ ತಂದು ಕೊಡುತ್ತೇವೆ ಎಂದು ನೀಡಿದ ಕರೆಗೆ ಜನತೆ ಅಭೂತಪೂರ್ವ ಬೆಂಬಲ ಸೂಚಿಸಿದ್ದಾರೆ. ಕೇಂದ್ರ ಗೃಹ ಸಚಿವರಾದ ಶ್ರೀ ಅಮಿತ್ ಶಾ ಅವರ ಬಂಗಾಳ ಗೆದ್ದೇ ಸಿದ್ಧ ಎನ್ನುವ ಶಪಥ ಹಾಗೂ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಬಿ. ಎಲ್. ಸಂತೋಷ್ ಅವರ "ಬಂಗಾಳದ ಗೆಲುವು ಅಧಿಕಾರಕ್ಕಲ್ಲ, ನಮ್ಮ ನಾಗರಿಕತೆಯ ರಕ್ಷಣೆಗಾಗಿ" ಎಂಬ ಘರ್ಜನೆ ಇಂದು ಸಾಕಾರಗೊಂಡಿದೆ. ಈ ಗೆಲುವಿನ ಹಿಂದಿನ ಶಕ್ತಿಯಾದ ಹಗಲಿರುಳು ಶ್ರಮಿಸಿದ ಪಕ್ಷದ ಲಕ್ಷಾಂತರ ಕಾರ್ಯಕರ್ತರಿಗೆ ನಾನು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ.

ಬಂಗಾಳದ ವಿಜಯದಲ್ಲಿ ಕನ್ನಡಿಗರ ಪಾತ್ರ:

ಬಂಗಾಲದ ಕಠಿಣ ಚುನಾವಣಾ ಹೋರಾಟದಲ್ಲಿ ನಮ್ಮ ಕರ್ನಾಟಕದ ಇಬ್ಬರು ನಾಯಕರ ಪಾತ್ರ ಅತ್ಯಂತ ಶ್ಲಾಘನೀಯ. ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ.ಟಿ. ರವಿ ಹಾಗೂ ಕಲಬುರಗಿ ವಿಭಾಗದ ನಿಕಟಪೂರ್ವ ಸಂಘಟನಾ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಅರುಣ್ ಬಿನ್ನಡಿ ಅವರು ಕಳೆದ ಹಲವು ತಿಂಗಳುಗಳಿಂದ ಬಂಗಾಲದಲ್ಲಿ ನಿರಂತರ ಪ್ರವಾಸ ಮಾಡಿ, ಚುನಾವಣಾ ತಂತ್ರಗಾರಿಕೆಯನ್ನು ರೂಪಿಸಿ ಯಶಸ್ವಿಯಾಗಿದ್ದಾರೆ. ಇವರ ಶ್ರಮಕ್ಕೆ ಇಂದು ವಿಜಯದ ಪುರಸ್ಕಾರ ದೊರೆತಿದೆ, ಎಂದು ಮಾಜಿ ಬಿಜೆಪಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರಡ್ಡಿ ಅವರು ಪತ್ರಿಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವೇಶ್ವರ ಆಸ್ಪತ್ರೆಯಲ್ಲಿ ಉಚಿತ ಚರ್ಮ ಕ್ಯಾನ್ಸರ್ ಜಾಗೃತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೆಯ ಚರ್ಮರೋಗ ವಿಭಾಗದ ಅಡಿಯಲ್ಲಿ ಮೇ 4 ಚರ್ಮ ಕ್ಯಾನ್ಸರ್ ಜಾಗೃತಿ ಮಾಸದ ಅಂಗವಾಗಿ ಉಚಿತ ಚರ್ಮರೋಗ ತಪಾಸಣಾ ಶಿಬಿರವನ್ನು ಏರ್ಪಡಿಸಲಾಯಿತು. ಆಸ್ಪತ್ರೆಯ ಹೊರ ರೋಗಿಗಳ ವಿಭಾಗ 6 ರಲ್ಲಿ ನಡೆದ ಈ ಶಿಬಿರದಲ್ಲಿ 150 ಕ್ಕಿಂತಲೂ ಹೆಚ್ಚು ರೋಗಿಗಳು ಭಾಗವಹಿಸಿ ಈ ಶಿಬಿರದ ಲಾಭ ಪಡೆದುಕೊಂಡರು. ಬಸವೇಶ್ವರ ಆಸ್ಪತ್ರೇಯ ಚರ್ಮ ರೋಗದ ತಜ್ಞ ವೈದ್ಯರು ತಂಡ ಹಾಗೂ ವಿಭಾಗದ ಮುಖ್ಯಸ್ಥರಾದ ಡಾ ಅಂಬರೀಷ್ ಎಸ್ ಬಾಡದ ಅವರು ಶಿಬಿರದಲ್ಲಿ ಭಾಗವಹಿಸಿದ ರೋಗಿಗಳಿಗೆ ಚರ್ಮದ ಕ್ಯಾನ್ಸರ್ ಸೇರಿದಂತೆ ವಿವಿಧ ಚರ್ಮರೋಗಗಳ ತಪಾಸಣೆ ಮಾಡಿ ಚರ್ಮ ರೋಗಗಳ ಬಗ್ಗೆ ಜಾಗೃತಿ ಮೂಡಿಸಿದರು. ಚರ್ಮ ಕ್ಯಾನ್ಸರ್ ಆರಂಭಿಕ ಹಂತದಲ್ಲಿ ಗುರುತಿಸಿ ಚಿಕಿತ್ಸೆ ಪಡೆದರೆ ಸಂಪೂರ್ಣವಾಗಿ ಗುಣ ಪಡಿಸಬಹುದು ಎಂದು ರೋಗಿಗಳಿಗೆ ತಿಳಿಸಿದರು. ಶಿಬಿರದಲ್ಲಿ ಭಾಗವಹಿಸಿದ ರೋಗಿಗಳಿಗೆ ಉಚಿತ ಡರ್ಮೋಸ್ಕೋಪಿ ಪರೀಕ್ಷೆ , ಸಂಭಂದಿಸಿದ ರಕ್ತ ತಪಾಸಣೆ, ಜೋತೆಗೆ ಅಗತ್ಯ ಔಷಧಿಗಳು ಹಾಗೂ ಬಿಸಿಲಿನಿಂದ ಚರ್ಮ ಕಾಪಾಡಿಕೊಳ್ಳಲು ಸನ್ ಸ್ಕ್ರೀನ್ ಲೋಷನ್ ಗಳನ್ನು ಉಚಿತವಾಗಿ ವಿತರಿಸಲಾಯಿತುಈ ಶಿಬಿರದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು ಆಸ್ಪತ್ರೇಯ ಸಂಚಾಲಕರಾದ ಡಾ ಕಿರಣ ದೇಶಮುಖ್, ರಾಂಪೂರೆ ವೈದ್ಯಕೀಯ ಮಹಾವಿದ್ಯಾಲಯದ ಸಂಚಾಲಕರಾದ ಡಾ ಶರಣಬಸಪ್ಪ ಹರವಾಳ, ಆಡಳಿತ ಮಂಡಳಿ ಸದಸ್ಯರಾದ ಡಾ ನಾಗೇಂದ್ರ ಮಂತಾಳೆ, ಕಾಲೇಜಿನ ಡೀನ್ ಡಾ ಶರಣಗೌಡ ಪಾಟೀಲ, ಉಪ ಡೀನ್ ಡಾ ವಿಜಯಕುಮಾರ ಕಪ್ಪಿಕೇರಿ, ವೈದ್ಯಕೀಯ ಅಧೀಕ್ಷಕರಾದ ಡಾ ಮಲ್ಲಿಕಾರ್ಜುನ ತೇಗನೂರ, ಆಡಳಿತಾಧಿಕಾರಿ ಡಾ ಎಂ ಆರ್ ಪೂಜಾರಿ ಉಪಸ್ಥಿತರಿದ್ದರ. ಬಸವೇಶ್ವರ ಆಸ್ಪತ್ರೆಯಲ್ಲಿನ ಎಲ್ಲ ವಿಭಾಗಗಳು ಇಂತಹ ಉಚಿತ ಶಿಬಿರಗಳನ್ನು ನಿರಂತರವಾಗಿ ಹಮ್ಮಿಕೊಳ್ಳುತ್ತದ್ದು ರೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸಂಸ್ಥೆಯ ಅಧ್ಯಕ್ಷರು ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ ನಮೋಶಿ, ಉಪಾಧ್ಯಕ್ಷರಾದ ರಾಜಾ ಭೀ ಭೀಮಳ್ಳಿ, ಕಾರ್ಯದರ್ಶಿಗಳಾದ ಉದಯಕುಮಾರ್ ಚಿಂಚೋಳ್ಳಿ ,ಜಂಟಿ ಕಾರ್ಯದರ್ಶಿಗಳಾದ ಡಾ ಕೈಲಾಸ ಪಾಟೀಲ್ ಮನವಿ ಮಾಡಿದ್ದಾರೆ

# ಮುಖ್ಯ ಮಾಹಿತಿ ಆಯುಕ್ತರಾಗಿ ಜಿ. ಸತ್ಯವತಿ ಅವರಿಂದ ಪ್ರಮಾಣವಚನ ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು




ಮೇ 04: ಲೋಕಭವನದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಸರಳ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತರಾಗಿ ನಿವೃತ್ತ ಐ.ಎ.ಎಸ್ ಅಧಿಕಾರಿ ಜಿ. ಸತ್ಯವತಿ ಅವರು ಇಂದು ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ರಾಜ್ಯಪಾಲರಾದ ಗೌರವಾನ್ವಿತ ಥಾವರ್ ಚಂದ್ ಗೆಹ್ಲೋಟ್ ಅವರು ಪ್ರಮಾಣವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಎಚ್.ಕೆ. ಪಾಟೀಲ್, ಇಂಧನ ಸಚಿವರಾದ ಕೆ.ಜೆ.ಜಾರ್ಜ್ ಸರ್ಕಾರದ ಮುಖ್ಯಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಸೇರಿದಂತೆ ಕರ್ನಾಟಕ ಮಾಹಿತಿ ಆಯೋಗದ ಆಯುಕ್ತರುಗಳು ಉಪಸ್ಥಿತರಿದ್ದು, ನೂತನ ಮುಖ್ಯ ಆಯುಕ್ತರಿಗೆ ಶುಭಾಶಯ ಕೋರಿದರು.

# ನಿರಂತರ ಪರಿಶ್ರಮದಿಂದ ವ್ಯಕ್ತಿತ್ವ ರೂಪಿಸಿಕೊಳ್ಳಿ

• ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ



ನಿರಂತರ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ವ್ಯಕ್ತಿತ್ವ ರೂಪಿಸಿಕೊಂಡು ಸಾಧನೆಗೈಯಲು ಸಾಧ್ಯವಾಗುತ್ತದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘ ಅಧ್ಯಕ್ಷರು, ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿ ಪೂಜ್ಯ ಡಾ.ದಾಕ್ಷಾಯಿಣಿ ಎಸ್. ಅಪ್ಪ ಹೇಳಿದರು. ಶರಣಬಸವೇಶ್ವರ ದೇವಸ್ಥಾನ ಆವರಣದಲ್ಲಿರುವ ಪೂಜ್ಯ ಡಾ.ಶರಣಬಸವಪ್ಪ ಅಪ್ಪ ಅನುಭವ ಮಂಟಪದಲ್ಲಿ ಶನಿವಾರ ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಿಳಾ ಮಹಾವಿದ್ಯಾಲಯವು ಹಮ್ಮಿಕೊಂಡ ಕಲಾವಾಣಿ ವಿದ್ಯಾರ್ಥಿ ಸಂಘದ ಸಮಾರೋಪ ಮತ್ತು 2025–26ನೇ ಸಾಲಿನ 'ಅವ್ವಪ್ರಶಸ್ತಿ' ಸಮಾರಂಭದಲ್ಲಿ ಆಶೀರ್ವಚನ ನೀಡಿದರು. ಜೀವನದಲ್ಲಿ ಸೋಲು–ಗೆಲವುಗಳು ಅನಿರೀಕ್ಷತ, ಸೋಲನ್ನು ಮೆಟ್ಟಿ ನಿಂತು ಸಾಧನೆ ಮಾಡಿ ತೋರಿಸಬೇಕು. ಕಷ್ಟಗಳು ಬಂದಾಗ ಕುಗ್ಗದೆ, ತಾಳ್ಮೆಯಿಂದ ಎದುರಿಸುವ ಧೈರ್ಯ ಬೆಳೆಸಿಕೊಳ್ಳಬೇಕು. ಉನ್ನತ ಗುರಿ ಹೊಂದಬೇಕು, ಆ ಗುರಿಯನ್ನು ಮುಟ್ಟುಲು ಪರಿಶ್ರಮಿಸಬೇಕು ಎಂದು ಸಲಹೆ ನೀಡಿದರು. ಡಾ.ಗೀತಾ ಈಶ್ವರ ಖಂಡ್ರೆ ಅವರ ಅವಿರತ ಸಾಧನೆಗೆ ಅವ್ವ ಪ್ರಶಸ್ತಿ ನೀಡಿ ಗೌರವಿಸಿರುವುದು ಸಂತೋಷ ಮತ್ತು ಹೆಮ್ಮೆ ಪಡುವಂತದು ಎಂದರು. ಅವ್ವ ಪ್ರಶಸ್ತಿ ಸ್ವೀಕರಿಸಿದ ಸಮಾಜ ಸೇವಕರು ಮತ್ತು ಭಾಲ್ಕಿ ಶಾಂತಿವರ್ಧಕ ಸಂಘದ ನಿರ್ದೇಶಕರಾದ ಡಾ.ಗೀತಾ ಈಶ್ವರ ಖಂಡ್ರೆ ಅವರು ಮಾತನಾಡಿ, ಪ್ರಶಸ್ತಿಯು ಜವಾಬ್ದಾರಿಯನ್ನು ಹೆಚ್ಚಿಸಿದೆ. ಕಲ್ಯಾಣ ಕರ್ನಾಟಕ ಭಾಗಕ್ಕೆ ಶರಣಬಸವೇಶ್ವರ ಸಂಸ್ಥಾನದ ಕೊಡುಗೆ ಅಪಾರವಾಗಿದೆ. ಪೂಜ್ಯ ಡಾ.ಅಪ್ಪ ಅವರು ಶೈಕ್ಷಣಿಕವಾಗಿ, ಸಾಂಸ್ಕೃತಿಕವಾಗಿ, ಧಾರ್ಮಿಕವಾಗಿ ಬೆಳೆಸಿದ್ದಾರೆ. ಪೂಜ್ಯ ಡಾ.ದಾಕ್ಷಾಯಿಣಿ ಅವ್ವ ಅವರು ಸ್ತ್ರೀ ಸಬಲೀಕರಣದ ಸಂಕೇತವಾಗಿದ್ದು, ಈ ಭಾಗದ ವಿದ್ಯಾರ್ಥಿಗಳ ಏಳ್ಗೆಗಾಗಿ ಹಗಲಿರುಳು ಚಿಂತಿಸುತ್ತಾರೆ ಎಂದರು. ಕಾರ್ಯಕ್ರಮದ ಅತಿಥಿಗಳಾದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ಮಹಿಳೆಯರಲ್ಲಿ ಆಗಾಧ ಶಕ್ತಿಯಿರುತ್ತದೆ. ತೊಟ್ಟಿಲು ತೂಗುವ ಕೈ ದೇಶವನ್ನೆ ತೂಗುತ್ತದೆ. ಪೂಜ್ಯ ಡಾ.ಅಪ್ಪ ಅವರು ಹೆಣ್ಣು ಮಕ್ಕಳಿಗಾಗಿಯೇ ಅನೇಕ ಶಾಲಾ ಕಾಲೇಜುಗಳನ್ನು ತೆರೆದಿದ್ದಾರೆ. ವಿದ್ಯಾರ್ಥಿಗಳು ಪರಿಶ್ರಮದಿಂದ ಓದಿ ಸಂಶೋಧನೆಯಲ್ಲಿ ತೊಡಗಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಇನ್ನೊರ್ವ ಅತಿಥಿಗಳಾದ ಬೀದರ ಖ್ಯಾತ ವೈದ್ಯರಾದ ಡಾ.ಉಮಾದೇವಿ ದೇಶಮುಖ ಮಾತನಾಡಿ, ಪೂಜ್ಯ ಡಾ.ದಾಕ್ಷಾಯಿಣಿ ಅವ್ವ ಮತ್ತು ಡಾ.ಗೀತಾ ಖಂಡ್ರೆ ಅವರ ಜೀವನ ಸಾಮಿಪ್ಯವಾಗಿದ್ದು, ಪ್ರತಿಯೊಬ್ಬರಿಗೂ ಆದರ್ಶವಾಗಿದೆ ಎಂದರು.

ಶರಣಬಸವೇಶ್ವರ ಸಂಸ್ಥಾನ ತಂಗಿಯವರಾದ ಕು. ಭವಾನಿ ಎಸ್.ಅಪ್ಪ ಮತ್ತು ದೇವಸ್ಥಾನ ಆವರಣದ ಶಾಲಾ–ಕಾಲೇಜುಗಳ ನಿರ್ದೇಶಕಿ ಡಾ.ನೀಲಾಂಬಿಕಾ ಶೇರಿಕಾರ ಮಾತನಾಡಿದರು.

ವೇದಿಕೆ ಮೇಲೆ ಶರಣಬಸವೇಶ್ವರ ಸಂಸ್ಥಾನ 9ನೇ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪ, ಆಡಳಿತಾಧಿಕಾರಿ ಡಾ.ಅಲ್ಲಮಪ್ರಭು ದೇಶಮುಖ, ಶರಣಬಸವ ವಿವಿಯ ಕುಲಸಚಿವರಾದ ಡಾ.ಲಕ್ಷ್ಮೀ ಪಾಟೀಲ ಮಾಕಾ, ಮತ್ತಿತರರು ಇದ್ದರು. ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಸೀಮಾ ಪಾಟೀಲ ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಪ್ರಾಧ್ಯಾಪಕ ಪ್ರಸಾದ ಅಪ್ಪಗೇಕರ್ ನಿರೂಪಿಸಿ, ವಂದಿಸಿದರು. ಸಂಗೀತ ವಿಭಾಗದವರು ಪ್ರಾರ್ಥಿಸಿದರು.

ಸಾಧನೆ ಮಾಡಿದ ಪ್ರಾಧ್ಯಾಪಕರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಸನ್ಮಾನಿಸಲಾಯಿತು. ಎಲ್ಲಾ ಬೋಧಕ, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿನಿಯರು ಇದ್ದರು.

## ನಾಗದೇವರ ಮೂರ್ತಿ ಪ್ರತಿಷ್ಠಾಪನಾ





**ಕುರುಗೋಡು:** ಪಟ್ಟಣ ಸಮೀಪದ ಮಾರುತಿಪುರ ಕ್ಯಾಂಪಿನಲ್ಲಿ ಶ್ರೀ ರಾಮ ದೇವರ ದೇವಸ್ಥಾನದಲ್ಲಿ ನೂತನ ಶ್ರೀ ಶಿವಲಿಂಗ, ನಂದಿ, ಆಂಜನೇಯ ಸ್ವಾಮಿ ಹಾಗೂ ನಾಗ ದೇವರ ಮೂರ್ತಿಗಳ ಪ್ರತಿಷ್ಠಾಪನಾ ಮಹೋತ್ಸವ ಭಕ್ತ ಸಾಗರದಲ್ಲಿ ಅದ್ದೂರಿಯಿಂದ ಜರುಗಿತು.

ಪ್ರಾರಂಭದಲ್ಲಿ ಶ್ರೀ ರಾಮ ದೇವರ ದೇವಸ್ಥಾನದಲ್ಲಿ ಶ್ರೀ ಜಾನಕಿ ದೇವಿ ಸಮೇತ ವೆಂಕುಟಾ ರಾಮ ದೇವರಿಗೆ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳಿಂದ ವಿಶೇಷ ಪೂಜೆ ಜರುಗಿ, ದೇಔರ ಮೂರ್ತಿಗೆ ಸುಂದರವಾಗಿ ಹೂವಿನ ಅಲಂಕಾರ ಮಾಡಿದ್ದರು.

ನೂತನ ದೇವರ ವಿಗ್ರಹಗಳ ಪ್ರತಿಷ್ಠಾಪನ ಅಂಗವಾಗಿ ಗಣಪತಿ ಪೂಜೆ, ನವಗ್ರಹ ಪೂಜೆ, ಪುಣ್ಯಾಹ ವಾಚನ, ಹೋಮ ಹವನ, ತತ್ವನ್ಯಾಸ, ಶಯ್ಯಾಧಿವಾಸ, ಜಲಾಧಿವಾಸ, ಧಾನ್ಯಾಧಿವಾಸ, ಮಹಾಪೂಜೆ ಹಾಗೂ ಶಾಸ್ತ್ರೋಕ್ತವಾಗಿ ವಿವಿಧ ಧಾರ್ಮಿಕ ವಿಧಿ ವಿಧಾನಗಳಿಂದ ಪೂಜೆ ಜರುಗಿದವು.

ಸಂಜೆ ಅಲಂಕೃತ ನೂತನ ಶಿವಲಿಂಗ, ನಂದಿ, ಆಂಜನೇಯ ಸ್ವಾಮಿ ಹಾಗೂ ನಾಗ ದೇವರಗಳ ವಿಗ್ರಹಗಳನ್ನು ಮುತ್ತೈದೆಯರ ಕಳಸ ಹಾಗೂ ವಿವಿಧ ವಾದ್ಯಗಳೊಂದಿಗೆ ಕ್ಯಾಂಪಿನ ಪ್ರಮುಖ ಬೀದಿಗಳಲ್ಲಿ ವಿಜೃಮಭಣೆಯಿಂದ ಮೆರವಣಿಗೆ ಜರುಗಿತು.

ನಂತರ ಬಾದನಹಟ್ಟಿ ಗ್ರಾಮದ ಕೋಲಾಟ ತಂಡದ ವತಿಯಿಂದ ಜರುಗಿದ ಕೋಲಾಟದ ನೃತ್ಯ ನೋಡಗರಿಗೆ ಅತ್ಯಾಕರ್ಷಕವಾಗಿತ್ತು.

ಬೆಳಿಗ್ಗೆ ಬ್ರಾಹ್ಮಿ ಮೂಹೂರ್ತದಲ್ಲಿ ಶಿವಲಿಂಗ, ನಂದಿ, ಆಂಜನೇಯ ಸ್ವಾಮಿ ಹಾಗೂ ನಾಗ ದೇವರ ನೂತನ ಮೂರ್ತಿಗಳನ್ನು ಆರ್ಚಕ ಪಾಂಡುರಂಗ ತಂಡದ ನೇತೃತ್ವದಲ್ಲಿ ಮಂತ್ರ ಘೋಷಗಳ ಮೂಲಕ ಧೈವಿಕ ಶಕ್ತಿ ತುಂಬುವ ಮೂಲಕ ಅತ್ಯಾಂತ ಶಾಸ್ತ್ರೋಕ್ರವಾಗಿ ವಿಗ್ರಹಗಳ ಪ್ರತಿಷ್ಠಾಪನೆ ಜರುಗಿದವು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು, ಮಹಿಳೆಯರು, ಯುವಕರು ಹಾಗೂ ನೂರಾರು ಜನ ಭಕ್ತರು ಇದ್ದರು.



**ಹುಣಸೂರು ತಾಲೂಕಿನ ಮಾಜಿ ಶಾಸಕ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಇಂದು ವಿಜಯನಗರ ಜಿಲ್ಲೆ ಹೂವಿನಹಡಗಲಿ ತಾಲೂಕಿನಲ್ಲಿರುವ ಮಾಜಿ ಉಪಮುಖ್ಯಮಂತ್ರಿಗಳಾದ ದಿವಂಗತ ಶ್ರೀ ಎಂ ಪಿ ಪ್ರಕಾಶ್ ರವರು, ಹಾಗೂ ಅವರ ಮಗ ಮತ್ತು ತಮ್ಮ ಆತ್ಮೀಯ ಸ್ನೇಹಿತರಾದ ಮಾಜಿ ಶಾಸಕರಾದ ದಿವಂಗತ ಎಂ ಪಿ ರವೀಂದ್ರ ರವರ ಸಮಾಧಿಗಳಿಗೆ ಭೇಟಿ ನೀಡಿ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಾರ್ಯಕರ್ತರು ಅಭಿಮಾನಿಗಳು ಮುಖಂಡರು ಹಾಜರಿದ್ದರು.**



**ಕೇರಳದಲ್ಲಿ ಯು ಡಿ ಎಫ್ ಜಯಭೇರಿ ಹಿನ್ನೆಲೆಯಲ್ಲಿ ಕ್ಯಾಲಿ ಕಟ್ ನಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಅವರು ವಿಜಯೋತ್ಸವ ಕಾರ್ಯಕ್ರಮ ದಲ್ಲಿ ಪಾಲ್ಗೊಂಡರು. ಯುವ ಕಾಂಗ್ರೆಸ್ ಕಾರ್ಯಕರ್ತರು ಕೇಕ್ ಕಟ್ ಮಾಡಿ ಸಿಹಿ ತಿನ್ನಿಸಿ ಸಂಭ್ರಮಿಸಿದರು.**

# ಕಾಂಗ್ರೆಸ್‌ನ ಉಮೇಶ ಮೇಟಿಗೆ ಭರ್ಜರಿ ಗೆಲುವು

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಜಯಭೇರಿ ಭಾರಿಸಿದ್ದು, ಅಭ್ಯರ್ಥಿ ಉಮೇಶ ಮೇಟಿ ಪ್ರಚಂಡ ಗೆಲುವು ಸಾಧಿಸುವ ಮೂಲಕ ತಂದೆಯ ಸ್ಥಾನವನ್ನು ಉಳಿಸಿಕೊಂಡಿದ್ದಾರೆ.

ಸೋಮವಾರ ಬೆಳಿಗ್ಗೆ 8 ಗಂಟೆಗೆ ನವನಗರದ ತೋಟಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ ನಡೆದ 23 ಸುತ್ತುಗಳ ಮತ ಎಣಿಕೆಯಲ್ಲಿ ಪ್ರಾರಂಭದಿಂದಲೂ ಲೀಡ್ ಪಡೆಯುತ್ತ ಸಾಗಿದ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಅಂತಿಮವಾಗಿ 98919 ಮತಗಳನ್ನು ಗಳಿಸಿ ವಿಜಯಪತಾಕೆ ಹಾರಿಸಿದರು.

ಪ್ರತಿಸ್ಪರ್ಧಿ ಬಿಜೆಪಿಯ ಮಾಜಿ ಶಾಸಕ ವೀರಣ್ಣ ಚರಂತಿಮಠ 76587 ಮತಗಳನ್ನು ಪಡೆದು ಸೋಲನುಭವಿಸಿದರು. ಉಮೇಶ ಮೇಟಿ ಒಟ್ಟಾರೆ 22332 ಮತಗಳ ಅಂತರದಿಂದ ಚರಂತಿಮಠ ಅವರನ್ನು ಸೋಲಿಸಿ ಗೆಲುವಿನ ನಗೆ ಬೀರಿದರು. ಗ್ರಾಮೀಣ ಭಾಗದಲ್ಲಿ ಕಾಂಗ್ರೆಸ್ ಹೆಚ್ಚು ಮತಗಳನ್ನು ಪಡೆದಿದೆ.

ಮೊದಲ 6 ಸುತ್ತಿನ ಮತ ಎಣಿಕೆಯಲ್ಲೇ ಕಾಂಗ್ರೆಸ್ ಅಭ್ಯರ್ಥಿಗೆ 15457 ಮತಗಳ ಲೀಡ್ ದೊರೆಯಿತು. ನಂತರ ನಗರ ಪ್ರದೇಶದ ಮತ ಎಣಿಕೆಯಲ್ಲಿ 5 ಸಾವಿರ ಮತಗಳನ್ನು ಹೆಚ್ಚುವರಿಯಾಗಿ ಪಡೆದ ಬಿಜೆಪಿ ಲೀಡನ್ನು 10 ಸಾವಿರಕ್ಕೆ ಇಳಿಸಿತಾದರೂ



ನವನಗರದಿಂದ ಹಿಡಿದು ಐಹೊಳೆಯವರೆಗೂ ಕಾಂಗ್ರೆಸ್ ಲೀಡ ಗಳಿಸುತ್ತಲೇ ಸಾಗಿ ಒಟ್ಟಾರೆ 21825 ಮತಗಳ ಅಂತರದ ಲೀಡ್ ಪಡೆಯಿತು.

**ನಿರೀಕ್ಷೆಗೂ ಮೀರಿ ಗೆಲುವು:** ತೀವ್ರ ಕುತೂಹಲ ಕೆರಳಿಸಿದ್ದ ಬಾಗಲಕೋಟೆ ಉಪ ಚುನಾವಣೆಯ ಲೆಕ್ಕಾಚಾರದಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷಗಳು ಗೆಲುವು ನಮ್ಮದೇ ಎನ್ನುತ್ತಲೇ ಬಂದಿದ್ದು, ಕಾಂಗ್ರೆಸ್ಸಿನವರು 10 ಸಾವಿರ ಮತಗಳಿಂದ ಮತ್ತು ಬಿಜೆಪಿಯವರು 6 ಸಾವಿರ ಮತಗಳಿಂದ ಗೆಲ್ಲುವುದಾಗಿ ಹೇಳಿಕೊಂಡಿದ್ದರು. ಆದರೆ ಫಲಿತಾಂಶ ಇಬ್ಬರ ನಿರೀಕ್ಷೆಯನ್ನು ಹುಸಿಗೊಳಿಸಿದೆ.

**ಫಲಿಸಿದ ಸಚಿವ ಜಾರಕಿಹೊಳಿ ತಂತ್ರ:** ಸಚಿವ ಸತೀಶ ಜಾರಕಿಹೊಳಿ ಅವರು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿನ ಜವಾಬ್ದಾರಿ ಹೊತ್ತು ಅದಕ್ಕಾಗಿ ತಂತ್ರ ರಚಿಸಿದ್ದರು. ಆ ತಂತ್ರ ಸಂಪೂರ್ಣವಾಗಿ ಫಲಕಾರಿಯಾಗಿದೆಯಲ್ಲದೇ, ಸಿಎಂ ಸಿದ್ದರಾಮಯ್ಯ ಅವರಿಗೂ ಸಹ ಕಾಂಗ್ರೆಸ್ ಗೆಲುವು ಪ್ರತಿಷ್ಠೆಯಾಗಿತ್ತು.

**ಕ್ಷೇತ್ರದ ಜನರ ಗೆಲುವು :** ಬಾಗಲಕೋಟೆ ಉಪ ಚುನಾವಣೆಯ ಗೆಲುವು ಕ್ಷೇತ್ರದ ಜನರ ಗೆಲುವು ಆಗಿದ್ದು, ನನ್ನ ತಂದೆಯವರ ಕನಸು ನನಸು ಮಾಡುವ ಕೆಲಸ ಮಾಡುತ್ತೇನೆ ಎಂದು ಉಮೇಶ ಮೇಟಿ ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ ಜಾರಕಿಹೊಳಿ, ಎಂ.ಬಿ.ಪಾಟೀಲ, ಆರ್.ಬಿ.ತಿಮ್ಮಾಪೂರ, ಶಿವಾನಂದ ಪಾಟೀಲ ಸೇರಿದಂತೆ ಸಂಪುಟ ದರ್ಜೆಯ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು, ಪಕ್ಷದ ಹಿರಿಯ ಮುಖಂಡರು, ಪಕ್ಷದ ವಿವಿಧ ಘಟಕಗಳ ಮುಖಂಡರು, ಪದಾಧಿಕಾರಿಗಳು, ಎಲ್ಲಕ್ಕೂ ಮಿಗಿಲಾಗಿ ಕಾರ್ಯಕರ್ತರು ನನ್ನ ಗೆಲುವಿಗೆ ಅಹರ್ನಿಸಿ ಶ್ರಮಿಸಿದ್ದು, ಎಲ್ಲರಿಗೂ ನಮ್ಮ ಕುಟುಂಬದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ಹೇಳಿದ ಉಮೇಶ ಮೇಟಿ, ನಮ್ಮ ತಂದೆಯವರು ಈ ಕ್ಷೇತ್ರದ ಅಭಿವೃದ್ದಿಗೆ ಶ್ರಮಿಸಿದಂತೆ ನಾನು ಕೂಡಾ ಎಲ್ಲ ಹಿರಿಯರ ಮಾರ್ಗದರ್ಶನದಲ್ಲಿ ಶ್ರಮ ವಹಿಸುವುದಾಗಿ ಹೇಳಿದರು.

**ವಿಜಯೋತ್ಸವ:** ಮತ ಎಣಿಕೆ ಕೇಂದ್ರದ ಹೊರಗಡೆ ಫಲಿತಾಂಶಕ್ಕಾಗಿ ಕಾಯ್ದುತ್ತಿದ್ದ ಕಾಂಗ್ರೆಸ್ ಕಾರ್ಯಕರ್ತರು 16 ನೇ ಸುತ್ತಿನ ಮತ ಎಣಿಕೆ ಮುಗಿಯುತ್ತಿದ್ದಂತೆ ಸಂಭ್ರಮಾಚರಣೆ ಆಚರಿಸಿ, ಗುಲಾಲ್ ಎರಚಿಕೊಂಡು ಕುಣಿದು ಕುಪ್ಪಳಿಸಿದರು. ಗ್ರಾಮೀಣ ಭಾಗದಲ್ಲಿಯೂ ಸಹಿತ ಮೇಟಿ ಗೆಲುವಿನ ಸಂಭ್ರಮಾಚರಣೆ ಭರ್ಜರಿಯಾಗಿ ನಡೆಯಿತು.

## ಎಲ್‌ಪಿಜಿ ದರ ಏರಿಕೆಗೆ ತೀವ್ರ ಖಂಡನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಎಲ್‌ಪಿಜಿ ದರದ ಭಾರೀ ಏರಿಕೆಯನ್ನು ಎಸ್‌ಯುಸಿಐ(ಕಮ್ಯುನಿಸ್ಟ್) ತೀವ್ರವಾಗಿ ವಿರೋಧಿಸುತ್ತದೆ ಎಂದು ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಕಾರ್ಯದರ್ಶಿ ಆರ್.ಕೆ. ವೀರಭದ್ರಪ್ಪ ಅವರು ತಿಳಿಸಿದ್ದಾರೆ.



ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಗಳು ಮುಗಿದ ಬೆನ್ನಲ್ಲೇ, ಕೇಂದ್ರ ಸರ್ಕಾರವು ವಾಣಿಜ್ಯ ಬಳಕೆಯ ಅನಿಲದ ಬೆಲೆಯನ್ನು ಏರಿಸಿದೆ. ಇದರ ಪರಿಣಾಮವಾಗಿ, ಒಂದು ತಿಂಗಳ ಹಿಂದೆ 2078.50 ರೂ.ಗಳು ಇದ್ದ ವಾಣಿಜ್ಯ ಸಿಲಿಂಡರ್‌ಗಳ ಬೆಲೆ ಈಗ ದಾಖಲೆಯ 3071.50 ರೂ.ಗಳಿಗೆ ಏರಿಕೆಯಾಗಿದೆ. ಈ ಅಗಾಧ ಬೆಲೆ ಏರಿಕೆಯು ಹೋಟೆಲ್‌ಗಳಿಗೆ, ಉಪಹಾರ ಮಂದಿರಗಳಿಗೆ ಮತ್ತು ಇತರ ಸಣ್ಣ ಉದ್ದಿಮೆಗಳಿಗೆ ತೀವ್ರ ಹೊಡೆತ ನೀಡಲಿದೆ. ಈ ಹೊರೆಯನ್ನು ಗ್ರಾಹಕರ ಮೇಲೆ ವರ್ಗಾಯಿಸುವ ಸಾಧ್ಯತೆಯಿರುವುದರಿಂದ, ಹೋಟೆಲ್ ಊಟ, ಆಹಾರ ಜನಸಾಮಾನ್ಯರಿಗೆ ಮತ್ತಷ್ಟು ದುಬಾರಿಯಾಗಲಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಪೆಟ್ರೋಲ್ ಮತ್ತು ಡೀಸೆಲ್‌ನ ಚಿಲ್ಲರೆ ಬೆಲೆಗಳೂ ಸಹ ಶೀಘ್ರದಲ್ಲೇ ಭಾರೀ ಪ್ರಮಾಣದಲ್ಲಿ ಏರಿಕೆಯಾಗುವ ಆತಂಕವಿದ್ದು, ಅಂತಹ ಸಂದರ್ಭದಲ್ಲಿ ಸಾಮಾನ್ಯ ಬೆಲೆಗಳ ಮಟ್ಟವು ಮತ್ತಷ್ಟು ಜಿಗಿಯಲಿದೆ. ಇದು ಜನಸಾಮಾನ್ಯರ ಜೀವನವನ್ನು ಮತ್ತಷ್ಟು ದುಸ್ತರಗೊಳಿಸಲಿದೆ. ಅಮೆರಿಕದ ಸಾಮ್ರಾಜ್ಯಶಾಹಿಗಳ ಆಜ್ಞೆಗೆ ಶರಣಾದ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು, ರಷ್ಯಾ ಮತ್ತು ಇರಾನ್‌ನಿಂದ ಅಗ್ಗದ ತೈಲವನ್ನು ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸಿ, ಈಗ ಅಮೆರಿಕದ ತೈಲವನ್ನು ಹೆಚ್ಚಿನ ಬೆಲೆಗೆ ಖರೀದಿಸಲು ಮುಂದಾಗಿದೆ ಎಂಬುದು ಇಲ್ಲಿ ಗಮನಾರ್ಹ ಎಂದು ಅವರು ಟೀಕಿಸಿದ್ದಾರೆ.

ಎಲ್‌ಪಿಜಿ ಬೆಲೆಯಲ್ಲಿನ ಈ ತೀವ್ರ ಏರಿಕೆಯನ್ನು ನಾವು ಕಠಿಣವಾಗಿ ವಿರೋಧಿಸುತ್ತೇವೆ. ಬಂಡವಾಳಶಾಹಿ ಬಿಕ್ಕಟ್ಟಿನ ಹೊರೆಯನ್ನು ಶೋಷಿತ ಜನರ ಮೇಲೆ ಹೇರುವ ಸರ್ಕಾರದ ನೀತಿಯ ವಿರುದ್ಧ ಒಗ್ಗಟ್ಟಿನಿಂದ ಪ್ರತಿಭಟನಾ ಧ್ವನಿ ಎತ್ತಲು ನಾವು ಪೀಡಿತ ಜನತೆಗೆ ಕರೆ ನೀಡುತ್ತೇವೆ. ಸರ್ಕಾರವು ತಕ್ಷಣವೇ ಈ ಬೆಲೆ ಏರಿಕೆಯನ್ನು ಹಿಂತೆಗೆದುಕೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಉಪಚುನಾವಣೆ ಮತ ಎಣಿಕೆಗೆ ಸಕಲ ಸಿದ್ಧತೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಬಾಗಲಕೋಟ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ಮೇ 4ರಂದು ಬೆಳಿಗ್ಗೆ 8 ಗಂಟೆಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆರಂಭವಾಗಲಿದ್ದು, ಅಭ್ಯರ್ಥಿಗಳು, ಚುನಾವಣಾ ಏಜೆಂಟರು ಹಾಗೂ ಮತ ಎಣಿಕೆ ಏಜೆಂಟರು ಬೆಳಿಗ್ಗೆ 7 ಗಂಟೆಗೆ ಹಾಜರಾಗುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಿಗ್ಗೆ 7 ಗಂಟೆಗೆ ಚುನಾವಣಾ ವೀಕ್ಷಕರು ಹಾಗೂ ಅಭ್ಯರ್ಥಿ /ಏಜೆಂಟರ ಸಮ್ಮುಖದಲ್ಲಿ ಸ್ಟಾಂಗ್ ರೂಂ ತೆರೆಯಲಾಗುವುದು ಎಂದರು.

ಇವಿಎಂ ಮತ ಎಣಿಕೆಗಾಗಿ ರೂಂ ನಂ.4ರಲ್ಲಿ 322 ಮತಗಟ್ಟೆಗಳ ಮತ ಎಣಿಕೆ ನಡೆಯಲಿದ್ದು, 14 ಟೇಬಲ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ. ಒಟ್ಟು 23 ಸುತ್ತುಗಳಲ್ಲಿ ಮತ ಎಣಿಕೆ ನಡೆಯಲಿದೆ. ಅಂಚೆ ಮತಪತ್ರ ಎಣಿಕೆಗೆ ಒಂದು ಟೇಬಲ್ ಹಾಗೂ ಇಟಿಪಿಬಿಎಸ್ (ಇಖಿಕಃಖ) ಸ್ಕ್ಯಾನಿಂಗ್‌ಗಾಗಿ ಪ್ರತ್ಯೇಕ ಟೇಬಲ್ ವ್ಯವಸ್ಥೆ ಮಾಡಲಾಗಿದೆ.

ಪ್ರತಿ ಟೇಬಲ್‌ಗೆ ಒಬ್ಬ ಮೇಲ್ವಿಚಾರಕ, ಒಬ್ಬ ಸಹಾಯಕ ಹಾಗೂ ಒಬ್ಬ ಮೈಕ್ರೋ ಅಬ್ಸರ್ವರ್ ನೇಮಕ ಮಾಡಲಾಗಿದೆ. ಅಂಚೆ ಮತಪತ್ರ ಎಣಿಕೆಗೆ



ಇಬ್ಬರು ಸಹಾಯಕರು ಸೇರಿದಂತೆ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಒಟ್ಟು 63 ಸಿಬ್ಬಂದಿಯನ್ನು ಮತ ಎಣಿಕೆ ಕಾರ್ಯಕ್ಕೆ ನಿಯೋಜಿಸಲಾಗಿದೆ ಎಂದು ತಿಳಿಸಿದರು.

**ಕಲಂ 163 ಜಾರಿ**

ಮೇ 4ರ ಬೆಳಿಗ್ಗೆ 6 ಗಂಟೆಯಿಂದ ಮೇ 5ರ ಬೆಳಿಗ್ಗೆ 6 ಗಂಟೆಯವರೆಗೆ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ–2023ರ ಕಲಂ 163 ಜಾರಿಗೊಳಿಸಲಾಗಿದೆ ಎಂದು ಹೇಳಿದರು.

**ಮದ್ಯ ಮಾರಾಟ ನಿಷೇಧ**

ಮೇ 4ರಂದು ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ 24–ಬಾಗಲಕೋಟ ವಿಧಾನಸಭಾ ಕ್ಷೇತ್ರ ಹಾಗೂ 10 ಕಿ.ಮೀ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ಮತ್ತು ಸರಬರಾಜು ನಿಷೇಧಿಸಲಾಗಿದೆ. ಬಾರ್, ಹೋಟೆಲ್, ಕ್ಲಬ್ ಹಾಗೂ ಢಾಬಾಗಳಲ್ಲಿ ಮದ್ಯ ಮಾರಾಟಕ್ಕೆ ಅವಕಾಶ ಇರುವುದಿಲ್ಲ ಎಂದು ತಿಳಿಸಿದರು.

## ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಚಿವ ಈಶ್ವರ ಖಂಡ್ರೆ ತುರ್ತು ಸಭೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಜಿಲ್ಲೆಯ ಜನಜೀವನಕ್ಕೆ ಸಂಬಂಧಿಸಿದ ಪ್ರಮುಖ ಸಮಸ್ಯೆಗಳ ಪರಿಹಾರಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿದರು.

ಬೇಸಿಗೆ ತೀವ್ರತೆಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ತಕ್ಷಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಯಾವುದೇ ಗ್ರಾಮ ಅಥವಾ ಹಳ್ಳಿಯಲ್ಲಿ ನೀರಿನ ಸಮಸ್ಯೆ ಎದುರಾಗದಂತೆ ಪರ್ಯಾಯ



ವ್ಯವಸ್ಥೆಗಳನ್ನು ಸಿದ್ಧವಾಗಿರಿಸಬೇಕು ಎಂದು ಹೇಳಿದರು.

ವಿದ್ಯುತ್ ವ್ಯತ್ಯಯ ಸಮಸ್ಯೆಗಳ ಕುರಿತು ಚರ್ಚಿಸಿ, ನಿರಂತರ ಹಾಗೂ ಸುಗಮ ವಿದ್ಯುತ್ ಪೂರೈಕೆ ಒದಗಿಸುವಂತೆ ಸಂಬಂಧಿತ ಇಲಾಖೆಗೆ ಸೂಚನೆ ನೀಡಿದರು. ತುರ್ತು ದುರಸ್ತಿ ಕಾರ್ಯಗಳನ್ನು ವೇಗವಾಗಿ ಕೈಗೊಳ್ಳುವಂತೆ ತಿಳಿಸಿದರು.

ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಕಾಲುವೆಗಳ ಮೂಲಕ ನೀರು ಹರಿಸುವ ವ್ಯವಸ್ಥೆಯನ್ನು ತಕ್ಷಣ ಜಾರಿಗೆ ತರಲು ಸೂಚಿಸಿದರು.

ಬೇಸಿಗೆ ಸಂದರ್ಭದಲ್ಲಿ ಅರಣ್ಯ ಪ್ರದೇಶಗಳಲ್ಲಿ ಸಂಭವಿಸುತ್ತಿರುವ ಅಗ್ನಿ ಅವಘಡಗಳನ್ನು ಗಂಭೀರವಾಗಿ ಪರಿಗಣಿಸಿ, ಅಗ್ನಿಶಾಮಕ ದಳವನ್ನು ಸದಾ ಸನ್ನದ್ಧವಾಗಿರಿಸುವುದರ ಜೊತೆಗೆ ಉದ್ದೇಶಪೂರ್ವಕವಾಗಿ ಬೆಂಕಿ ಹಚ್ಚುವವರ ವಿರುದ್ಧ ಕಟ್ಟುನಿಟ್ಟಿನ ತನಿಖೆ ನಡೆಸಿ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಜನರ ಮೂಲಭೂತ ಅಗತ್ಯಗಳಾದ ನೀರು ಮತ್ತು ವಿದ್ಯುತ್ ಸರಬರಾಜಿನಲ್ಲಿ ಯಾವುದೇ ಲೋಪವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಜನರಿಂದ ಬಂದ ದೂರನ್ನು ತಕ್ಷಣ ಪರಿಹರಿಸುವುದು ಅತ್ಯಂತ ಪ್ರಮುಖ ಎಂದು ಸಚಿವರು ತಿಳಿಸಿದರು.

## ಕಲಬುರಗಿಯಲ್ಲಿ ಜಿಲ್ಲಾ ಮಟ್ಟದ ಕವಿ ಸಮ್ಮೇಳನ



• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಹೊಸ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಮತ್ತು ಕನ್ನಡ ಸಾಹಿತ್ಯ ಪರಂಪರೆಯನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಕನ್ನಡದ ಅಸ್ಮಿತೆಯ ಪ್ರತೀಕವಾಗಿರುವ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟದ ಆಶ್ರಯದಲ್ಲಿ ಮೇ ತಿಂಗಳ ಮಾಸಾಂತ್ಯದಲ್ಲಿ ನಗರದಲ್ಲಿ ಒಂದು ದಿನದ ಜಿಲ್ಲಾ ಪ್ರಥಮ ಕವಿ ಸಮ್ಮೇಳನವನ್ನು ಏರ್ಪಡಿಸಲು ನಿರ್ಧರಿಸಲಾಗಿದೆ ಎಂದು ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ತಿಳಿಸಿದ್ದಾರೆ.

ಹೊಸ ಹೊಸ ಬರಹಗಾರರು ಸಮಾಜದ ಬಡಿತವನ್ನು ಅರಿತು, ಅದನ್ನು ಬದುಕಿನ ಅನುಭವದೊಂದಿಗೆ ಬೆರೆಸಿ ಕಾವ್ಯರೂಪಕ್ಕಿಳಿಸಿದಾಗ ಗಟ್ಟಿಯಾದ ಸಾಹಿತ್ಯ ಸೃಷ್ಠಿಯಾಗುತ್ತದೆ. ಇದಕ್ಕೆ ಪ್ರೇರಣೆ ಕೊಡುವ ಕಾರ್ಯ ಪರಿಷತ್ತು ಮಾಡುತ್ತಿದೆ. ಕವಿ, ಕಾವ್ಯ, ಬದುಕು ಮತ್ತು ಸಮಾಜ ಇವು ಒಂದಕ್ಕೊಂದು ಅವಿನಾಭಾವ ಸಂಬಂಧ ಹೊಂದಿವೆ. ಕಾವ್ಯವು ಕವಿಯ ಬದುಕಿನ ಅನುಭವಗಳ ಪ್ರತಿಬಿಂಬವಾಗಿದ್ದರೆ, ಅದು ಸಮಾಜದ ಕನ್ನಡಿಯೂ ಹೌದು. ಇಂದು ಸಾಮಾಜಿಕ ಜಾಲತಾಣಗಳನ್ನೇ ವೇದಿಕೆಯನ್ನಾಗಿ ರೂಪಿಸಿಕೊಂಡು ಅನೇಕ ಹೊಸ ಬರಹಗಾರರು ಕಾವ್ಯ ಕೃಷಿಯಲ್ಲಿ ತೊಡಗಿದ್ದಾರೆ. ಇಂದಿನ ಪ್ರಸ್ತುತ ಸಮಾಜದಲ್ಲಿನ ಪ್ರಚಲಿತ ವಿಷಯಗಳ ಮೇಲೆ ಕಾವ್ಯ ಕಟ್ಟಿಕೊಳ್ಳಬೇಕಾಗಿದೆ. ಹೀಗಾಗಿ ಇಂಥ ಕವಿ ಸಮ್ಮೇಳನವನ್ನು ಆಯೋಜಿಸುವ ಮೂಲಕ ಎರಡು ಸಾವಿರ ವರ್ಷಗಳ ಇತಿಹಾಸವುಳ್ಳ ಕನ್ನಡ ಭಾಷೆಯನ್ನು ಉಳಿಸುವಲ್ಲಿ ಸಾಹಿತ್ಯಾಸಕ್ತರು, ನವ ಕವಿ ಹೃದಯಗಳು ಇನ್ನೂ ಕಾರ್ಯ ಮಾಡಬೇಕಾಗಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲೆಯಲ್ಲಿ ಇಲ್ಲಿಯವರೆಗೆ ಆಗದೇ ಇರುವ ಅನೇಕ ಪ್ರಥಮ ಸಮ್ಮೇಳನಗಳನ್ನು ಏರ್ಪಡಿಸಿ ಯಶಸ್ವಿಗೊಳಿಸಲಾಗಿದೆ. ಆ ಮೂಲಕ ಈ ನೆಲದ ಪರಂಪರೆಯನ್ನು ಮುಂದಿನ ಪೀಳಿಗೆಗೆ ಬಳುವಳಿಯಾಗಿ ಕೊಡುವ ಕಾರ್ಯ ಮಾಡುತ್ತಿದೆ. ಸಮ್ಮೇಳನವನ್ನು ಅರ್ಥಪೂರ್ಣವಾಗಿ ನಡೆಸಲು ತೀರ್ಮಾನಿಸಲಾಗಿದ್ದು, ಆಡಂಬರ, ಮೆರವಣಿಗೆ ನಡೆಸದಿರಲು ನಿರ್ಧರಿಸಲಾಗಿದೆ. ಸಮ್ಮೇಳನದ ಯಶಸ್ವಿಗೆ ಪೂರಕವಾಗಿ ಸ್ವಾಗತ ಸಮಿತಿ ರಚನೆ, ಜಿಲ್ಲೆಯ ಹಿರಿಯ ಮತ್ತು ಅನುಭವಿ ಕವಿಯೊಬ್ಬರನ್ನು ಸಮ್ಮೇಳನಾಧ್ಯಕ್ಷರನ್ನು ಶೀಘ್ರದಲ್ಲಿಯೇ ಆಯ್ಕೆ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಪರಿಷತ್ ಜಿಲ್ಲಾ ಕಾರ್ಯದರ್ಶಿಗಳಾದ ಶಿವರಾಜ್ ಅಂಡಗಿ, ಧರ್ಮಣ್ಣ ಎಚ್. ಧನ್ನಿ, ಕೋಶಾಧ್ಯಕ್ಷ ಶರಣರಾಜ್ ಛಪ್ಪರಬಂದಿ, ಪ್ರಮುಖರಾದ ಸಿದ್ಧಲಿಂಗ ಜಿ ಬಾಳಿ, ಬಾಬುರಾವ್ ಪಾಟೀಲ್, ಜಯಶ್ರೀ ಜಮಾದಾರ್, ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ರಾಜೇಂದ್ರ ಮಾಡಬೂಳ್, ದಿನೇಶ್ ಮದಕರಿ, ಧರ್ಮರಾಜ್ ಜವಳಿ, ರವಿಕುಮಾರ್ ಶಹಾಪೂರಕರ್, ಪ್ರಭುಲಿಂಗ ಮೂಲಗೆ, ಡಾ. ರೆಹಮಾನ್ ಪಟೇಲ್, ಹಣಮಂತರಾವ್ ಪೆಂಚನಪಳ್ಳಿ, ರಮೇಶ್ ಬಡಿಗೇರ್, ಶಿವಲೀಲಾ ಕಲಗುರ್ಕಿ, ಸುರೇಶ್ ದೇಶಪಾಂಡೆ ಮುಂತಾದವರು ಉಪಸ್ಥಿತರಿದ್ದರು.

## ಮೇ 9ರಂದು ಬಿಎಸ್‌ವೈ ಅಭಿಮಾನೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ನಾಡು ಕಂಡ ಶ್ರೇಷ್ಠ ನಾಯಕ, ಮಾಜಿ ಮುಖ್ಯಮಂತ್ರಿಗಳು, ಮಾರ್ಗದರ್ಶಕ ಬಿ.ಎಸ್. ಯಡಿಯೂರಪ್ಪ ಅವರ ಸಾರ್ವಜನಿಕ ಜೀವನದ 50 ವರ್ಷಾಚರಣೆ, ಅಭಿಮಾನೋತ್ಸವ ಕಾರ್ಯಕ್ರಮವನ್ನು ಚಿತ್ರದುರ್ಗದ ಹೊರವಲಯದ ಮಾದರ ಚನ್ನಯ್ಯ ಅವರ ಆವರಣದಲ್ಲಿ ಮೇ 9ರಂದು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರದಿಂದ ಕನಿಷ್ಠ ಒಂದು ಸಾವಿರ ಕಾರ್ಯಕರ್ತರು ಪಾಲ್ಗೊಳ್ಳುವರು ಎಂದು ಬಿಜೆಪಿ ಗ್ರಾಮಾಂತರ ಘಟಕದ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೃಹತ್ ಅಭಿಮಾನೋತ್ಸವ ಕಾರ್ಯಕ್ರಮವೂ ಪಕ್ಷಾತೀತವಾಗಿ ನಡೆಯಲಿದ್ದು, ನಾಡಿನ ಲಕ್ಷಾಂತರ ಅಭಿಮಾನಿಗಳು ಭಾಗವಹಿಸಲಿದ್ದಾರೆ. ಕಲಬುರ್ಗಿ ಸೇರಿದಂತೆ ಕಲ್ಯಾಣ ಕರ್ನಾಟಕದ ಪ್ರಗತಿಗೆ ಬಹುದೊಡ್ಡ ಕೊಡುಗೆ ನೀಡಿರುವ ಬಿ.ಎಸ್. ಯಡಿಯೂರಪ್ಪ ಅವರನ್ನು ಅಭಿಮಾನದಿಂದ ಗೌರವಿಸುವುದು ನಮ್ಮೆಲ್ಲರ ಜವಾಬ್ದಾರಿ ಆಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯಿಂದಲೂ ಸಹಸ್ರಾರು ಅಭಿಮಾನಿಗಳು ಭಾಗವಹಿಸಬೇಕು ಎಂದು ಕೋರಿದರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ್ ಮತ್ತಿಮೂಡ್ ಅವರು ಮಾತನಾಡಿ, ಬಿ.ಎಸ್. ಯಡಿಯೂರಪ್ಪ ಅವರ ನಾಯಕತ್ವದಿಂದ ರಾಜ್ಯದಲ್ಲಿ ಉತ್ತಮ ಆಡಳಿತ ಸಿಕ್ಕಿದೆ. ಅನೇಕ ಜನಪರ ಯೋಜನೆಗಳು ಜಾರಿಗೆ ಬಂದಿವೆ. ಭಾಗ್ಯಲಕ್ಷ್ಮೀ ಯೋಜನೆಯೂ ಸಹ ಮಹತ್ವದ್ದಾಗಿದೆ. ರೈತ ಪರ ನಿರ್ಣಯಗಳನ್ನು ಕೈಗೊಂಡರು. ಪ್ರತ್ಯೇಕ ಕೃಷಿ ಬಜೆಟ್ ಮಂಡಿಸಿದರು. ಅಂತಹ ಮಹಾನ್ ನಾಯಕ ಅಭಿಮಾನೋತ್ಸವಕ್ಕೆ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಕೋರಿದರು. ರಾಜ್ಯ ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ ಪಾಟೀಲ್ ಅವರು ಮಾತನಾಡಿ, ನಾಲ್ಕು ಬಾರಿ ರಾಜ್ಯದ ಮುಖ್ಯಮಂತ್ರಿಗಳಾಗಿದ್ದ ಬಿ.ಎಸ್. ಯಡಿಯೂರಪ್ಪ ಅವರು, ಜಿಲ್ಲೆಗೆ 40 ಬಾರಿ ಬಂದು ಹೋಗಿದ್ದಾರೆ. ಹೈದ್ರಾಬಾದ್ ಕರ್ನಾಟಕಕ್ಕೆ ಕಲ್ಯಾಣ ಕರ್ನಾಟಕ ಎಂದು ಹೊಸ ನಾಮಕರಣ ಮಾಡಿದರು ಎಂದರು.

ರಾಜ್ಯ ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ



ಅವರು ಮಾತನಾಡಿ, ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗಾಗಿ ಎಸ್. ಎಂ. ಕೃಷ್ಣ ಅವರು ಡಾ. ಡಿ.ಎಂ. ನಂಜುಂಡಪ್ಪ ವರದಿಯನ್ನು ಸಿದ್ಧಪಡಿಸಿದರು. ಅದನ್ನು ಅನುಷ್ಠಾನಕ್ಕೆ ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದಾಗ ಅನುಷ್ಠಾನಕ್ಕೆ ತಂದು ಅದರ ಮೊದಲ ಅಧ್ಯಕ್ಷರನ್ನಾಗಿ ನನಗೆ ಮಾಡಿದರು. ಯಾದಗಿರಿ ಹೊಸ ಜಿಲ್ಲೆಯನ್ನು ಘೋಷಿಸಿದರು. ಕಲಬುರ್ಗಿಗೆ ಹಾಗೂ ಕಲ್ಯಾಣ ಕರ್ನಾಟಕಕ್ಕೆ ಬಿ.ಎಸ್. ಯಡಿಯೂರಪ್ಪ ಅವರ ಕೊಡುಗೆ ಅಪಾರವಾಗಿದೆ. ಹೀಗಾಗಿ ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವದಲ್ಲಿ ಸುಮಾರು ಹತ್ತು ಲಕ್ಷ ಜನರು ಸೇರುವ ನಿರೀಕ್ಷೆ ಇದೆ ಎಂದರು. ರಾಜ್ಯ ವಿಧಾನ ಪರಿಷತ್ ಸದಸ್ಯ ಡಾ. ಬಿ.ಜಿ. ಪಾಟೀಲ್ ಅವರು ಮಾತನಾಡಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರೊಂದಿಗೆ ನಮ್ಮದು ಅತ್ಯಂತ ನಿಕಟ ಸಂಪರ್ಕ ಇದೆ. ನನಗೆ ಒಮ್ಮೆ ಬಿಜೆಪಿ ಅಧ್ಯಕ್ಷರನ್ನಾಗಿ ಮಾಡಿದ್ದಲ್ಲದೇ ರಾಜ್ಯ ವಿಧಾನ ಪರಿಷತ್ ಸದಸ್ಯರನ್ನಾಗಿಯೂ ಮಾಡಿದ್ದಾರೆ. ಬಿ.ಎಸ್. ಯಡಿಯೂರಪ್ಪ ಅವರು ಕಲಬುರ್ಗಿಯಲ್ಲಿ ಎರಡು ಕಡೆ ತಮ್ಮ ಸಂಬಂಧಗಳನ್ನು ಬೆಳೆಸಿದ್ದಾರೆ. ಹಾಗಾಗಿ ಕಲಬುರ್ಗಿಯ ಮೇಲೆ ಯಡಿಯೂರಪ್ಪ ಅವರಿಗೆ ಹೆಚ್ಚಿನ ಪ್ರೀತಿ ಇದೆ ಎಂದರು. ಮಾಜಿ ಸಂಸದ ಡಾ. ಉಮೇಶ್ ಜಾಧವ್ ಅವರು ಮಾತನಾಡಿ, ನಾನು ಕಾಂಗ್ರೆಸ್ ಬಿಟ್ಟು ಬಿಜೆಪಿಗೆ ಸೇರಿ ಸಂಸದನಾಗಿ ಆಯ್ಕೆಯಾದೆ. ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದಾಗ ಕೋವಿಡ್ ಸಂಕಷ್ಟದ ಸ್ಥಿತಿಯನ್ನು ಅತ್ಯಂತ ಸಮರ್ಥವಾಗಿ ಎದುರಿಸಿದರು. ಅನೇಕ ನಾಯಕರನ್ನು ಅವರು ಬೆಳೆಸಿದ್ದಾರೆ ಎಂದರು. ಶಾಸಕ ಡಾ. ಅವಿನಾಶ್ ಜಾಧವ್ ಅವರು ಮಾತನಾಡಿ, ನನಗೆ ಬಿ.ಎಸ್. ಯಡಿಯೂರಪ್ಪ ಅವರೇ ರಾಜಕೀಯ ಗುರುಗಳು. ನಾನು ಚಿಂಚೋಳಿ ಕ್ಷೇತ್ರದಲ್ಲಿ ಸ್ಪರ್ಧಿಸಿದಾಗ ಈ ಕ್ಷೇತ್ರದಲ್ಲಿ ಬಿಜೆಪಿ ಗೆದ್ದರೆ ರಾಜ್ಯದಲ್ಲೂ ಬಿಜೆಪಿ ಸರ್ಕಾರ ಬರುತ್ತದೆ ಎಂದು ಯಡಿಯೂರಪ್ಪ ಅವರು ಹೇಳಿದ್ದರು. ಅದೇ ರೀತಿ ಆಗಿದೆ ಎಂದರು.

# ಅಣೆಕಟ್ಟಿನ ಗೇಟ್ ಅಳವಡಿಕೆ ಕಾರ್ಯ ಡಿಕೆಶಿ ಪರಿಶೀಲನೆ

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ**

ತುಂಗಭದ್ರ ಅಣೆಕಟ್ಟಿನ 19ನೇ ಕ್ರೆಸ್ಟ್ ಗೇಟ್ 2024 ಆಗಸ್ಟ್ 10 ರಂದು ರಾತ್ರಿ ಅನಾಹುತದ ನಂತರ ತಾಂತ್ರಿಕ ತಂಡ ಕೈಗೊಳ್ಳಲಾದ ತುರ್ತು ದುರಸ್ತಿ ಕಾರ್ಯಗಳು ಈಗ ಅಂತಿಮ ಹಂತಕ್ಕೆ ತಲುಪಿವೆ. ಇಂದು ಅಣೆಕಟ್ಟಿನ ಗೇಟ್ ಅಳವಡಿಕೆ ಕಾರ್ಯವನ್ನು ಖುದ್ದಾಗಿ ಪರಿಶೀಲಿಸಿದ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಅವರು, ಮೇ 15ರೊಳಗೆ ಸಂಪೂರ್ಣ ಕಾಮಗಾರಿ ಮುಗಿಸಿ ಲೋಕಾರ್ಪಣೆ ಮಾಡುವ ವಿಶ್ವಾಸ ವ್ಯಕ್ತಪಡಿಸಿದರು.

ತುಂಗಭದ್ರಾ ಜಲಾಶಯ ಕ್ರೆಸ್ಟ್ ಗೇಟ್ ಕಾರ್ಯ ಪರಿಶೀಲನೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಮಾಹಿತಿ ನೀಡಿದರು.

ಅಣೆಕಟ್ಟಿನ ಒಟ್ಟು 33 ಗೇಟ್‌ಗಳ ಪೈಕಿ 22 ಗೇಟ್‌ಗಳಿಗೆ ಸ್ಕೈಸ್ ಪ್ಲೇಟ್‌ಗಳನ್ನು ಅಳವಡಿಸುವ ಕಾರ್ಯ ಪೂರ್ಣಗೊಂಡಿದೆ. ತಜ್ಞರ ವರದಿಯಂತೆ ಹಳೆಯ ಚೈನ್‌ಗಳು ಸದೃಢವಾಗಿದ್ದರೂ, ಮುನ್ನೆಚ್ಚರಿಕಾ ಕ್ರಮವಾಗಿ ಹೊಸ ಚೈನ್‌ಗಳನ್ನು ಅಳವಡಿಸಲು ನಿರ್ಧರಿಸಲಾಗಿದೆ. ಮೊದಲ ಸೆಟ್ ಹೊಸ ಚೈನ್‌ಗಳು ಮೇ 7 ರಂದು ಆಗಮಿಸಲಿದ್ದು, ಮೇ ಅಂತ್ಯದೊಳಗೆ ಚೈನ್ ಅಳವಡಿಕೆ ಕಾರ್ಯ ಸಂಪೂರ್ಣ ಪ್ರಕ್ರಿಯೆ ಮುಗಿಯಲಿದೆ. ಮುಂಬರುವ ಮಳೆಗಾಲವನ್ನು ಗಮನದಲ್ಲಿಟ್ಟುಕೊಂಡು ಮೇ 15 ರಂದು ಯೋಜನೆಯನ್ನು ಅಧಿಕೃತವಾಗಿ ಉದ್ಘಾಟಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.



ದಾಖಲೆ ಸಮಯದಲ್ಲಿ 33 ಗೇಟ್‌ಗಳನ್ನು ದುರಸ್ತಿಗೊಳಿಸಿದ್ದು ಇಡೀ ದೇಶಕ್ಕೆ ಒಂದು ದೊಡ್ಡ ಸವಾಲು ಮತ್ತು ಮಾದರಿಯಾಗಿದೆ. ಕೇವಲ ಗೇಟ್‌ಗಳ ದುರಸ್ಥಿಗೆ ಸುಮಾರು 54 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಇದಲ್ಲದೆ, ಕಾಲುವೆಗಳ ದುರಸ್ತಿ ಮತ್ತು ಇತರೆ ಕೆಳಹಂತದ ಕಾಮಗಾರಿಗಳಿಗೆ ಒಟ್ಟು 315 ಕೋಟಿ ರೂಪಾಯಿ ವ್ಯಯಿಸಲಾಗಿದೆ. ತಜ್ಞರ ವರದಿಯಂತೆ ಈ ದುರಸ್ತಿ ಕಾರ್ಯದಿಂದಾಗಿ ಅಣೆಕಟ್ಟಿನ ಆಯಸ್ಸು ಮುಂದಿನ 50 ವರ್ಷಗಳವರೆಗೆ ವೃದ್ಧಿಸಲಿದೆ ಎಂದು ತಿಳಿಸಿದರು.

ನವಲಿ ಸಮಾನಾಂತರ ಜಲಾಶಯ ಹಾಗೂ ಹೂಳು ತೆಗೆಯುವಿಕೆ ನವಲಿ ಜಲಾಶಯದ ಯೋಜನೆಗೆ ಸಂಬಂಧಿಸಿದಂತೆ ಆಂಧ್ರಪ್ರದೇಶದ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲು ಸರ್ಕಾರ ಸಿದ್ಧವಿದೆ. ಹೂಳು ತುಂಬಿರುವ ಕಾರಣ ಅಣೆಕಟ್ಟಿನ ಸಾಮರ್ಥ್ಯ 105 ಟಿಎಂಸಿಯಿಂದ 100 ಟಿಎಂಸಿಗೆ ಇಳಿಕೆಯಾಗಿದೆ. ಆದ್ದರಿಂದ ಹೂಳು ತೆಗೆಯಲು ಚೀನಾ ತಂತ್ರಜ್ಞಾನ ಬಳಕೆಯ ಬಗ್ಗೆ ಚರ್ಚೆಗಳು ನಡೆಯುತ್ತಿದ್ದು, ಈ ಕುರಿತು ಗ್ಲೋಬಲ್ ಟೆಂಡರ್ ಕರೆಯುವ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ. ಹೂಳು ತೆಗೆಯುವಾಗ ರೈತರ ಭೂಮಿ ಮತ್ತು ಪರಿಸರಕ್ಕೆ ಹಾನಿಯಾಗದಂತೆ ಜಾಗರೂಕತೆ ವಹಿಸಲಾಗುವುದು. ತುಂಗಭದ್ರಾ ಅಣೆಕಟ್ಟಿನ ಸುತ್ತಮುತ್ತಲ ಕೈಗಾರಿಕೆಗಳಿಂದ ರಾಸಾಯನಿಕಯುಕ್ತ ನೀರು ಅಣೆಕಟ್ಟನ್ನು ಸೇರುತ್ತಿರುವ ಬಗ್ಗೆ ವರದಿಗಳು ಬಂದಿದ್ದು, ಈ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಡಿ.ಕೆ. ಶಿವಕುಮಾರ್ ಅವರು ಎಚ್ಚರಿಸಿದರು. ಅಭಿವೃದ್ಧಿ ಮುಖ್ಯವಾದರೂ ಜನರ ಆರೋಗ್ಯ ಮತ್ತು ಬೆಳೆಗಳ ರಕ್ಷಣೆ ಸರ್ಕಾರದ ಆದ್ಯತೆಯಾಗಿದೆ ಎಂದರು.

ಕರ್ನಾಟಕ ಮತ್ತು ಆಂಧ್ರಪ್ರದೇಶ ರಾಜ್ಯಗಳು 64:34 ಅನುಪಾತದಲ್ಲಿ ಬಂಡವಾಳ ಹೂಡುತ್ತಿದ್ದು, ಡ್ಯಾಂ ಮಂಡಳಿಗೆ ಸಂಪೂರ್ಣ ನೀಡಲಾಗಿದೆ. ಈ ಇಡೀ ಕಾರ್ಯಾಚರಣೆಯು ದೇಶಕ್ಕೆ ಒಂದು ದೊಡ್ಡ ಸವಾಲು ಮತ್ತು ತಾಂತ್ರಿಕ ಮಾದರಿಯಾಗಿದೆ ಎಂದು ಡಿಸಿಎಂ ಹರ್ಷ ವ್ಯಕ್ತಪಡಿಸಿದ ಅವರು, ರಾಜಕೀಯ ಟೀಕೆಗಳಿಗೆ ಕಿವಿಗೊಡದೆ ರೈತರ ಹಿತರಕ್ಷಣೆ ಮತ್ತು ಜಲಾಶಯದ ಸುರಕ್ಷತೆಗೆ ಸರ್ಕಾರ ಬದ್ಧವಾಗಿದೆ. ಜಲಾಶಯದ 19ನೇ ಗೇಟ್ ಅನಾಹುತಕ್ಕೀಡಾದಾಗ ಸರ್ಕಾರವು ತಕ್ಷಣವೇ ಸ್ಪಂದಿಸಿತ್ತು. ಅಂದು ರಾತ್ರಿಯೇ ಅಧಿಕಾರಿಗಳು ಹಾಗೂ ಸಚಿವರು ಸ್ಥಳಕ್ಕೆ ಧಾವಿಸಿ ತುರ್ತು ಕ್ರಮಗಳನ್ನು ಕೈಗೊಂಡಿದ್ದರು. ಪ್ರಸ್ತುತ ಜಲಾಶಯದ ಎಲ್ಲಾ 33 ಗೇಟ್‌ಗಳ ಅಳವಡಿಕೆ ಕಾರ್ಯ ಮುಗಿದಿದ್ದು, ತಾಂತ್ರಿಕ ತಂಡದ ಸಲಹೆಯಂತೆ ಆಧುನೀಕರಣ ಪ್ರಕ್ರಿಯೆ ಮುಂದುವರಿದಿದೆ ಎಂದು ಮಾಹಿತಿ ನೀಡಿದರು.

ಜಲಾಶಯ ಕ್ರಸ್ಟ್ ಗೇಟ್ ಕಳಚಿದ್ದರಿಂದಾಗಿ ಮೂರು ಜಿಲ್ಲೆಯ ರೈತರು ಒಂದು ಬೆಳೆಯನ್ನು ತ್ಯಾಗ ಮಾಡಿ ಗೇಟ್ ಅಳವಡಿಕೆ ಕಾರ್ಯ-ಕ್ಕೆ ಸಹಕರಿಸಿದ್ದಾರೆ. ಆದ್ದರಿಂದ ಕಾಮಗಾರಿ ಪೂರ್ಣಗೊಂಡ ನಂತರ ರಾಯಚೂರು, ಬಳ್ಳಾರಿ ಸೇರಿದಂತೆ ನಾಲ್ಕು ಜಿಲ್ಲೆಗಳ ರೈತರನ್ನು ಆಹ್ವಾನಿಸಿ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಮತ್ತು ಅಣೆಕಟ್ಟಿಗೆ ವಿಶೇಷ ಪೂಜೆ ಸಲ್ಲಿಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.



ಶ್ರೀ ವೀರಭದ್ರೇಶ್ವರ ದೇವಸ್ಥಾನ ಹುಮನಾಬಾದ ಥೇರ್ ಮೈದಾನದಲ್ಲಿರುವ 10 ಅಂಗಡಿ ಮಳಿಗೆಗಳನ್ನು ಬಹಿರಂಗ ಹರಾಜು ಪ್ರಕ್ರಿಯೆ ಮೂಲಕ ಮಾನ್ಯ ಸಹಾಯಕ ಆಯುಕ್ತರು ಹಾಗೂ ದೇವಸ್ಥಾನ ಸಮಿತಿಯ ಅಧ್ಯಕ್ಷರು ಹಾಗೂ ಸರ್ವ ಸದಸ್ಯರ ಹಾಗೂ ಆಸಕ್ತ ಬಿಡದಾರರು ಸಮ್ಮುಖದಲ್ಲಿ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಯಶಸ್ವಿಯಾಗಿ ನಡೆಸಲಾಯಿತು.

## ಸಂದಲ್ ಮೆರವಣಿಗೆ: ಕಳೆ ಕಟ್ಟಿದ ಖಾಜಾ ಬಂದೇ ನವಾಜ್ ದರ್ಗಾ ಉರ್ಸ್



**ಕಲಬುರಗಿ:** ನಗರದಲ್ಲಿ ಸುಲ್ತಾನ್-ಎ-ದಕ್ಕನ್ ಹಜರತ್ ಖ್ವಾಜಾ ಬಂದಾ ನವಾಜ್ ಅವರ 622ನೇ ಉರ್ಸ್ ಶರೀಫ್ ಅಂಗವಾಗಿ ನಡೆದ ಜುಲೂಸ್-ಎ-ಸಂದಲ್ ಮುಬಾರಕ್ ಅತ್ಯಂತ ಭಕ್ತಿಭಾವ ಮತ್ತು ಗೌರವದೊಂದಿಗೆ ಭವ್ಯವಾಗಿ ಜರುಗಿತು. ಇದರಿಂದಾಗಿ ಉರ್ಸ್ ಶರೀಫ್ ಕಾರ್ಯಕ್ರಮಗಳು ಅಧಿಕೃತವಾಗಿ ಪ್ರಾರಂಭವಾದವು.

ಹಜರತ್ ಸಜ್ಜಾದಾ ನಶೀನ್ ಡಾ. ಹಾಫಿಜ್ ಸಯ್ಯದ್ ಮಹಮ್ಮದ್ ಅಲಿ ಅಲ್ ಹುಸೈನೀ ಸಾಹೇಬ್ ಅವರ ಮಾರ್ಗದರ್ಶನದಲ್ಲಿ ನಮಾಝ್-ಎ-ಅಸರ್ ಅನ್ನು ಮೌಲಾನಾ ಅಬ್ದುಲ್ ರಶೀದ್ ಸಾಹೇಬ್ ನೆರವೇರಿಸಿದರು. ನಂತರ ಮೆಹ್ಫಿಲ್-ಎ-ಸಮಾ ಕಾರ್ಯಕ್ರಮ ಆಯೋಜಿಸಲಾಯಿತು. ದೇಶದ ವಿವಿಧ ಭಾಗಗಳಿಂದ ಆಗಮಿಸಿದ ಕವ್ವಾಲರು ಭಾಗವಹಿಸಿ ಭಕ್ತಿಗೀತೆಗಳ ಮೂಲಕ ಮುಬಾರಕ್ಬಾದಿ ಸಲ್ಲಿಸಿದರು. ಮೆಹ್ಫಿಲ್-ಎ-ಸಮಾ ನಂತರ, ಸಂಜೆ 6:15ಕ್ಕೆ ಸಜ್ಜಾದಾ ನಶೀನ್ ಡಾ. ಸಯ್ಯದ್ ಮಹಮ್ಮದ್ ಅಲಿ ಅಲ್ ಹುಸೈನೀ ಸಾಹೇಬ್ ಅವರು ಸಂದಲ್ ಮುಬಾರಕ್ನ ಕಷ್ಟಿಗಳನ್ನು ತಮ್ಮ ತಲೆಯ ಮೇಲೆ ಹೊತ್ತು ಜುಲೂಸ್ ಅನ್ನು ಆರಂಭಿಸಿದರು. ಜುಲೂಸ್-ಎ-ಸಂದಲ್ ಮಹಬೂಬ್ ಗುಲ್ಶನ್ನಿಂದ ಪ್ರಾರಂಭವಾಗಿ ದರ್ಗಾಹ ಹಜರತ್ ಖ್ವಾಜಾ ಬಂದಾ ನವಾಜ್ ಕಡೆಗೆ ಹೊರಟಿತು. ಜುಲೂಸ್ ಮುಂಚೆ ರಿಫಾಈ ಫುಕ್ರಾಗಳ ದಂಡು ಸಾಗುತ್ತಿದ್ದು, ಅವರ ಭಾವಪೂರ್ಣ ಆಧ್ಯಾತ್ಮಿಕ ಪ್ರದರ್ಶನಗಳು ಜನರ ಗಮನ ಸೆಳೆದವು.

ಜುಲೂಸ್ ಸೂಪರ್ ಮಾರ್ಕೆಟ್, ಚೌಕ್, ಮಾರ್ಕೆಟ್ ಮಸೀದಿ ಮಾರ್ಗವಾಗಿ ಸಾಗಿತು, ಅಲ್ಲಿ ಮಘ್ರಿಬ್ ನಮಾಝ್ ನೆರವೇರಿಸಲಾಯಿತು. ನಂತರ ಸರಾಫ್ ಬಜಾರ್, ಚೌಕ್ ಮಸೀದಿ, ಬಹಮನಿ ಚೌಕ್, ನ್ಯಾಷನಲ್ ಚೌಕ್ ಮಾರ್ಗವಾಗಿ ಗ್ಯಾರಹ್ ಸೀಢಿ ಕಡೆಗೆ ಮುಂದುವರಿಯಿತು. ಕಾರ್ಯಕ್ರಮದ ಪ್ರಕಾರ, ಜುಲೂಸ್ ರಾತ್ರಿ 10:30ಕ್ಕೆ ಗ್ಯಾರಹ್ ಸೀಢಿ ತಲುಪಿತು. ಅಲ್ಲಿ ಸಂದಲ್ ಮುಬಾರಕ್‌ಗೆ ಸಜ್ಜಾದಾ ನಶೀನ್ ಸ್ವತಃ ಸ್ವಾಗತ ಕೋರಿದರು.

ಈ ಸಂದರ್ಭದಲ್ಲಿ ಡಾ. ಸಯ್ಯದ್ ಮುಸ್ತಫಾ ಅಲ್ ಹುಸೈನೀ ಸಾಹೇಬ್, ಸಯ್ಯದ್ ಮಹಮ್ಮದ್ ಸಯ್ಯದ್ ಹುಸೈನೀ ಸಾಹೇಬ್ (ಸಜ್ಜಾದಾ ನಶೀನ್ ಅವರ ಹಿರಿಯ ಪುತ್ರ), ಸಯ್ಯದ್ ಶಾ ಸಫಿಯುಲ್ಲಾ ಹುಸೈನೀ, ಸಯ್ಯದ್ ಶಾ ರಹೀಮುಲ್ಲಾ ಹುಸೈನೀ, ಸಯ್ಯದ್ ಶಾ ಹಸನ್ ಶಬ್ಬೀರ್ ಹುಸೈನೀ (ರೋಜಾ-ಎ-ಖುರ್ದ್ ಸಜ್ಜಾದಾ ನಶೀನ್), ಸಯ್ಯದ್ ಶಾ ತಕಿಉಲ್ಲಾ ಹುಸೈನೀ, ಸಯ್ಯದ್ ಅಹ್ಮದ್ ಹುಸೈನೀ, ಸಯ್ಯದ್ ಮುರ್ತಜಾ ಹುಸೈನೀ, ಸಯ್ಯದ್ ಅಕೀಬ್ ಹುಸೈನೀ ಸೇರಿದಂತೆ ಬಂದಾ ನವಾಜ್ ಖಾಂದಾನದ ಸದಸ್ಯರು ಉಪಸ್ಥಿತರಿದ್ದರು.


ಇದಲ್ಲದೆ ಸಜ್ಜಾದ್ಗಾನ್, ಮಶಾಯಿಖ್-ಎ-ಇಜಾಮ್, ಉಲಮಾ-ಎ-ಕಿರಾಮ್ ಹಾಗೂ ಸಾವಿರಾರು ಭಕ್ತರು ಮತ್ತು ಜಾಯರೀನ್ಗಳ ಭವ್ಯ ಉಪಸ್ಥಿತಿಯಿಂದ ನಗರದೆಲ್ಲೆಡೆ ಐತಿಹಾಸಿಕ ರಸ್ತೆಗಳ ಮೇಲೆ ಆತ್ಮೀಯ ಮತ್ತು ಆಧ್ಯಾತ್ಮಿಕ ವಾತಾವರಣ ಕಂಡುಬಂತು.

## ಹೇಮರೆಡ್ಡಿ ಮಲ್ಲಮ್ಮ ತಾಯಿಯ ಮಹಿಮೆ ಅಪಾರ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಶಿವಭಕ್ತಿ, ತ್ಯಾಗ ಮತ್ತು ಧರ್ಮನಿಷ್ಠೆಯ ಪ್ರತೀಕವಾಗಿರುವ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಾಯಿಯ ಮಹಿಮೆ ಅಪಾರವಾಗಿದೆ. ಶತಮಾನಗಳ ಹಿಂದೆಯೇ ಜನಸಾಮಾನ್ಯರಿಗೆ ಸತ್ಪಥವನ್ನು ತೋರಿಸಿದ ಮಹಾಸಾಧ್ವಿಯಾಗಿ ಅವರು ಪ್ರಸಿದ್ಧರಾಗಿದ್ದಾರೆ. ಇಂದಿಗೂ ಅವರ ಜೀವನ ಚರಿತ್ರೆ ಭಕ್ತರಲ್ಲಿ ಆಧ್ಯಾತ್ಮಿಕ ಸ್ಫೂರ್ತಿಯನ್ನು ಉಂಟುಮಾಡುತ್ತಿದೆ.

ಹೇಮರೆಡ್ಡಿ ಮಲ್ಲಮ್ಮ ಅವರು ಸುಮಾರು 500 ವರ್ಷಗಳ ಹಿಂದೆ ಶ್ರೀಶೈಲ ಪ್ರದೇಶದ ಸಮೀಪ ವಾಸವಾಗಿದ್ದು, ಶಿವನ ಭಕ್ತಿಯಲ್ಲಿ ತೊಡಗಿ ಸಾಧ್ವಿ ಜೀವನ ನಡೆಸಿದರು. ಅವರ ಜೀವನದಲ್ಲಿ ಸತೀತ್ವ, ಧರ್ಮಪಾಲನೆ ಮತ್ತು ಪರೋಪಕಾರ ಮುಖ್ಯ ಅಂಶಗಳಾಗಿದ್ದವು. ಸಮಾಜದಲ್ಲಿ ಮಹಿಳೆಯರು ಹೇಗೆ ಆದರ್ಶ ಜೀವನ ನಡೆಸಬೇಕು ಎಂಬುದಕ್ಕೆ ಅವರು ಜೀವಂತ ಉದಾಹರಣೆಯಾಗಿದ್ದಾರೆ.



ಮಲ್ಲಮ್ಮ ತಾಯಿಯ ಭಕ್ತಿ ಮತ್ತು ಶರಣತ್ವದ ಗುಣಗಳು ಅವರನ್ನು ಸಾಮಾನ್ಯ ಮಹಿಳೆಯಿಂದ ಮಹಾನ್ ಸಾಧ್ವಿಯಾಗಿ ರೂಪಿಸಿತು. ಕಷ್ಟಗಳ ನಡುವೆಯೂ ಅವರು ಶಿವನ ಮೇಲೆ ಅಚಲ ಭಕ್ತಿಯನ್ನು ಇಟ್ಟುಕೊಂಡು ಜೀವನ ನಡೆಸಿದ್ದು, ಭಕ್ತರಲ್ಲಿ ಆತ್ಮಸ್ಥೈರ್ಯವನ್ನು ಬೆಳೆಸುವಂತಾಗಿದೆ. ಅವರ ತ್ಯಾಗಮಯ ಜೀವನದಿಂದ ಮಹಿಳೆಯರಿಗೆ ಮಾತ್ರವಲ್ಲದೆ ಸಮಾಜದ ಎಲ್ಲ ವರ್ಗದವರಿಗೆ ಮಾರ್ಗದರ್ಶನ ಸಿಕ್ಕಿದೆ.

## ಕಾಯಕ ತತ್ವ ಸಾರಿದ ಬಸವಾದಿ ಶರಣರು

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಬಸವಕಲ್ಯಾಣದ ಅನುಭವ ಮಂಟಪದಲ್ಲಿ ನಿರ್ಮಾಣವಾಗುತ್ತಿರುವ ವಿಶ್ವದ ಅತೀ ಎತ್ತರದ ಇಷ್ಟಲಿಂಗ (55 ಮೀ.) ನಿರ್ಮಾಣಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಇಂದು ಪೂಜೆ ಸಲ್ಲಿಸಿ ಅನುಭವ ಮಂಟಪದ ಕಾಮಗಾರಿಯನ್ನು ಪರಿಶೀಲಿಸಿದರು.

ನಂತರ ಮಾತನಾಡಿದ ಅವರು ಬಸವಾದಿ ಶರಣರು ಈ ಜಗತ್ತಿನ ಸರ್ವಶ್ರೇಷ್ಠ ದಾರ್ಶನಿಕರು, ಮಹಾ ಮಾನವತಾವಾದಿಗಳು, ಕಾಯಕವೇ ಕೈಲಾಸವನ್ನು ಅಳವಡಿಸಿಕೊಂಡು ಜಗತ್ತಿಗೆ ಪ್ರಥಮ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ನೀಡಿದರು. 770 ಕಂಬಗಳ ಮೇಲೆ 770 ಶರಣರ ವಚನಗಳನ್ನು ಕೆತ್ತಲಾಗುತ್ತಿದೆ. ವೈಜ್ಞಾನಿಕವಾಗಿ ನೆಮ್ಮದಿ ನೀಡುವಂಥ ಇಷ್ಟಲಿಂಗ ತರಬೇತಿ ಕೇಂದ್ರವನ್ನು ನಿರ್ಮಿಸಲಾಗುತ್ತಿದೆ. ಬದುಕನ್ನು ಹಸನಗೊಳಿಸಿಕೊಳ್ಳಲು ವೈಚಾರಿಕ



ವಚನಗಳು ಸಹ ಆಧುನಿಕ ವಿಜ್ಞಾನ ತಂತ್ರಜ್ಞಾನ ಮೂಲಕ ಐಐಟಿ ವಿಜ್ಞಾನಿಗಳ ಮೂಲಕವಾಗಿ ಜನಸಾಮಾನ್ಯರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು. ಕಾಯಕವೇ ಕೈಲಾಸ ಎಂದು ಹೇಳಿರುವ ಶರಣರ ಜೀವನವನ್ನು ಬಿಂಭಿಸುವ ಶರಣ ಗ್ರಾಮ ನಿರ್ಮಾಣಗೊಳ್ಳುತ್ತಿದೆ. ಈಗಿನ ಯುವಕರಿಗೆ ಅಗತ್ಯವಾದ ಕೌಶಲ್ಯ ತರಬೇತಿ ನೀಡುವ ಕೇಂದ್ರ ಆರಂಭಿಸಲಾಗುವುದು. ವೃತ್ತಿಯಲ್ಲಿ ಯಾವುದು ಮೇಲಿಲ್ಲ ಕೀಳಿಲ್ಲ ಎಂದು ಸಚಿವರು ತಿಳಿಸಿದರು.

## ಪುರಸಭ ಅಧ್ಯಕ್ಷೆ ರೇಷ್ಮಾಸಿಖಂದರ್ ಅಧಿಕಾರ ಸ್ವೀಕಾರ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ಪುರಸಭಾ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ರೇಷ್ಮಾಸಿಖಂದರ್ ಇಂದು ಪುರಸಭಾ ಆಡಳಿತ ಕಚೇರಿಯಲ್ಲಿ ಪ್ರಭಾರಿ ಅಧ್ಯಕ್ಷರಿಂದ ಅಧಿಕಾರ ಸ್ವೀಕಾರ ಮಾಡಿದರು. ಈ ಕಾರ್ಯಕ್ರಮದಲ್ಲಿ ಅನೇಕ ಜನ ಅವರ ಅಭಿಮಾನಿಗಳು, ಆಡಳಿತ ವರ್ಗದವರು, ಸ್ನೇಹಿತರು, ಹಿತೈಷಿಗಳು, ಬಂಧು, ಮಿತ್ರರು, ಆಗಮಿಸಿ ಪುಷ್ಪ ಗುಚ್ಛ, ಶಾಲು ಹಾಗೂ ಹೂವಿನ ಹಾರ ಹಾಕುವುದರ ಮೂಲಕ ಅವರನ್ನು ಸ್ವಾಗತಿಸಿದರು. ಕಚೇರಿಯಲ್ಲಿ ಹಬ್ಬದ ಸಂಭ್ರಮ ಮನೆಮಾಡಿತ್ತು.

ಅಧಿಕಾರ ಸ್ವೀಕಾರ ಮಾಡಿ, ಮಾತನಾಡಿದ ರೇಷ್ಮಾಸಿಖಂದರ್, ಪುರಸಭಾ ಎಲ್ಲಾ ವಾರ್ಡ್ ಗಳ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ಕೊಡುವೆ. ಆಡಳಿತ ವ್ಯವಸ್ಥೆಯಲ್ಲಿ ನನಗೆ ಎಲ್ಲರ ಸಹಕಾರ ಬೇಕು. ಅಧ್ಯಕ್ಷರಾದ ಕೂಡಲೇ ಇದು ಏಕವ್ಯಕ್ತಿ ಆಡಳಿತವಲ್ಲ. ಇಲ್ಲಿನ ಪುರಸಭೆ ಸಿಬ್ಬಂದಿ ಹಾಗೂ



ಸದಸ್ಯರು ಸಹಕಾರ, ಬೆಂಬಲ ಕೊಟ್ಟಾಗ ಮಾತ್ರ ಯಾವುದೇ ಆಡಳಿತ ಯಶಸ್ವಿ ಹೊಂದಲು ಸಾಧ್ಯ ಎಂದರಲ್ಲದೇ, ಸಾರ್ವಜನಿಕರು ತಮ್ಮ ಯಾವುದೇ ಸಮಸ್ಯೆಗಳು ಇದ್ದರೆ, ಸದಸ್ಯರು ಅಥವಾ ನೀವೇ ಬನ್ನಿ. ಬೇರೆ ಯಾರೂ ಮಧ್ಯವರ್ತಿಗಳನ್ನು ಕ-ರೆದುಕೊಂಡು ಬರಬೇಡಿ ಎಂದರು.

ತಾವು ಅಧಿಕಾರಕ್ಕೆ ಬರಲು ಕಾರಣರಾದ ಮಾಜಿ ಶಾಸಕ ಭೀಮಾನಾಯ್ಕ, ಸಂಸದರಾದ ಈ.ತುಕಾರಾಂ, ಅಪಾರ ಬೆಂಬಲಿಗರು, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ.ಸಾಹಿರಾ ಬಾನು ಮೊದಲಾದವರನ್ನು ಹೃದಯ ಪೂರ್ವಕವಾಗಿ ನೆನೆದರು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ.ಸಾಹಿರಾಬಾನು ಮಾತನಾಡಿ, ಸಮಸ್ತ ಪುರಸಭಾ ನಮ್ಮ ಕುಟುಂಬವಿದ್ದಂತೆ. ನಾವು ಮನೆಯಲ್ಲಿ ಜಗಳವಾಡುತ್ತೇವೆ, ಮತ್ತೆ ಒಂದಾಗುತ್ತೇವೆ. ಹಾಗೆಯೇ ಇಲ್ಲಿ ಇರುವ ಎಲ್ಲರೂ ಬಂಧುಗಳ ಹಾಗೆ. ನಮಗೆ ಅಧಿಕಾರ ಬರಲು ಮೂಲಕಾರಣೀಭೂತರಾದ ಮಾಜಿ ಶಾಸಕರು ಹಾಗೂ ನಮ್ಮ ಸಹೋದರ ಸಮಾನವಾದ ಭೀಮಾನಾಯ್ಕ ಹಾಗೂ ಸಂಸದರಾದ ಈ.ತುಕಾರಾಂ ಅವರು ಮತ್ತು ಪುರಸಭಾ ಸಮಸ್ತ ಸದಸ್ಯರು, ಬೆಂಬಲಿಗರೆಲ್ಲರಿಗೂ ಧನ್ಯವಾದ ಗಳನ್ನು ಅರ್ಪಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೋರಿ ಗೋಣಿ ಬಸಪ್ಪ ಮಾತನಾಡಿ, ನಮ್ಮ ಪಕ್ಷ ಮಹಿಳೆಯರಿಗೆ ಆದ್ಯತೆ ಕೊಡುವುದರ ಮೂಲಕ ಪುರಸಭೆಯಲ್ಲಿ ಮಹಿಳಾ ಪರ್ವವನ್ನು ಆರಂಭಿಸಿದೆ. ನುಡಿದಂತೆ ನಡೆದು ತೋರಿಸಿದೆ ಎಂದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ನೇತ್ರಾವತಿ ಸೆರೆಗಾರ ಹುಚ್ಚಪ್ಪ, ಮಾಜಿ ಅಧ್ಯಕ್ಷರಾದ ಕವಿತಾ ಹಾಲ್ದಾಳ್, ನಿಕಟಪೂರ್ವ ಉಪಾಧ್ಯಕ್ಷರಾದ ಅಂಬಿಕಾ ದೇವೇಂದ್ರಪ್ಪ, ಮೂಸಾ, ತ್ಯಾವಣಗಿ ನಾಗವೇಣಿ, ಬಾರಿಕರ ಬಾಪೂಜಿ, ಕಾರ್ತೀಕ್, ಉಮಾಪತಿ, ಮಡಿವಾಳರ ಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.

# ನಡೆದಾಡುವ ದೇವರ ಕನಸು ನನಸು ಮಾಡಿದ ಸಚಿವ ಎಂಬಿ ಪಾಟೀಲ್



**ವರ್ತಮಾನ-ವಿಜಯ**
• ಮಧೂರ ತಿಳಗೂಳಕರ
ಜಿಲ್ಲಾ ವರದಿಗಾರರು

ನಡೆದಾಡುವ ದೇವರು ಶ್ರೀ ಸಿದ್ದೇಶ್ವರ ಸ್ವಾಮೀಜಿಗಳು ಈ ಭೂಮಿಗೆ ಬೊಗಸೆ ನೀರು ಕೊಡಿ ಈ ಭೂಮಿ ಕ್ಯಾಲಿಫೋರ್ನಿಯಾ ಆಗುತ್ತದೆ ಎಂದು ಸಚಿವ ಎಂ.ಬಿ ಪಾಟೀಲರಿಗೆ ಹೇಳಿದ್ದರು ಸಿದ್ದೇಶ್ವರ ಸ್ವಾಮೀಜಿ ಮಾತಿಗೆ ಬದ್ಧರಾಗಿ ಅಂದಿನ ನೀರಾವರಿ ಸಚಿವರಾಗಿ ಎಂ.ಬಿ.ಪಾಟೀಲ್ ವಿಜಯಪುರ ಜಿಲ್ಲೆಯ ಕೆರೆ ತುಂಬುವ ಯೋಜನೆಯಿಂದ ಹಿಡಿದು ನೀರಾವರಿಗಾಗಿ ಅನೇಕ ಕಾರ್ಯಗಳನ್ನು ಮಾಡುವ ಮೂಲಕ ನಡೆದಾಡುವ ದೇವರ ಮನಸ್ಸು ಗೆದ್ದವರು.

ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಆಶಯ ಈಡೇರಿದ್ದು, ಇದೀಗ ಕ್ಯಾಲಿಫೋರ್ನಿಯಾದ ಔರಾ ತಳಿಯನ್ನು ತಿಕೋಟಾದಲ್ಲಿ 100 ಎಕರೆ ಪ್ರದೇಶದಲ್ಲಿ ಯಶಸ್ವಿಯಾಗಿ ಬೆಳೆಯಲಾಗಿದ್ದು, ಮುಂದೆ 1 ಸಾವಿರ ಎಕರೆ ಪ್ರದೇಶದಲ್ಲಿ ಈ ತಳಿ ಬೆಳೆಯುವ ಸಂಕಲ್ಪ ಮಾಡಿದ್ದು ದ್ರಾಕ್ಷಿ ಬೆಳೆಗಾರರ ಆದಾಯ ಮೂರು ಪಟ್ಟು ಹೆಚ್ಚಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಆಶಯ ವ್ಯಕ್ತಪಡಿಸಿದರು.

ಔರಾ ತಳಿಯನ್ನು ಯಶಸ್ವಿಯಾಗಿ ಬೆಳೆದ ರೈತರ ಸಮ್ಮುಖದಲ್ಲಿ ಔರಾ ತಳಿಯ ದ್ರಾಕ್ಷಿಯಯನ್ನು ಪ್ರದರ್ಶಿಸಿ ಈ ವಿಷಯವನ್ನು ಮಾಧ್ಯಮ ಪ್ರತಿನಿಧಿಗಳೊಂದಿಗೆ ಹಂಚಿಕೊಂಡರು, ಈ ಸಾಧನೆಯನ್ನು ನಡೆದಾಡುವ





ದೇವರು ಶ್ರೀ ಸಿದ್ದೇಶ್ವರ ಸ್ವಾಮೀಜಿಗಳಿಗೆ ಅರ್ಪಿಸಲಾಗುವುದು ಎಂದು ತಿಳಿಸಿದರು.

ಕೃಷ್ಣವೇಣಿ ಎಫ್‌ಪಿಓ, ಮಹಾರಾಷ್ಟ್ರದ ನಾಸಿಕ್‌ನ ಸಹ್ಯಾದ್ರಿ ಫಾರ್ಮ್ ಸಹಯೋಗದಲ್ಲಿ ಕ್ಯಾಲಿಫೋರ್ನಿಯಾ ಔರಾ-36 ತಳಿಯನ್ನು ತಿಕೋಟಾದಲ್ಲಿ ಬೆಳೆಯಲಾಗಿದ್ದು, ಮುಂಬರುವ ದಿನಗಳಲ್ಲಿ 1 ಸಾವಿರ ಎಕರೆ ಪ್ರದೇಶದಲ್ಲಿ ಈ ತಳಿ ಬೆಳೆಯುವ ಸಂಕಲ್ಪ ಮಾಡಿದೆ, ಇದೊಂದು ಉತ್ಕೃಷ್ಟ ತಳಿಯ ದ್ರಾಕ್ಷಿಯಾಗಿದ್ದು, ಈ ತಳಿ ಬೆಳೆಯುವದರಿಂದ ದ್ರಾಕ್ಷಿ ಬೆಳೆಗಾರರ ಆದಾಯ ಮೂರು ಪಟ್ಟು ಅಧಿಕಗೊಳ್ಳಲಿದೆ ಎಂದರು.

ವಿಜಯಪುರ ಅತೀ ಕಡಿಮೆ ಮಳೆ ಬೀಳುವ ಪ್ರದೇಶವಾಗಿತ್ತು, ಜೈಸಲ್ಮೇರ್ ಹಾಗೂ ವಿಜಯಪುರ ದೇಶದಲ್ಲಿಯೇ ಅತ್ಯಂತ ಬರಪೀಡಿತ ಪ್ರದೇಶ ಎಂದು ಗುರುತಿಸಿದ್ದರು, ಈ ಕಾರಣಕ್ಕಾಗಿಯೇ ಬರಗಾಲ ನಿವಾರಣಾ ಕೇಂದ್ರ ಅರಂಭಿಸಿದ್ದರು. ಪಂಚ ನದಿಗಳು ಹರಿದರೂ ತುತ್ತೀನ ಚೀಲ ತುಂಬಿಕೊಳ್ಳಲು ಗುಳೇ ಹೋಗುವುದು ತಪ್ಪಿರಲಿಲ್ಲ, 2 ಲಕ್ಷ ಎಕರೆ ಭೂಮಿ ಕಳೆದುಕೊಂಡರೂ ಸಹ ಅದಕ್ಕೆ ತಕ್ಕನಾಗಿ ಜಮೀನು ನೀರಾವರಿಯಾಗಿರಲಿಲ್ಲ, ಆದರೆ ಈಗ ಪರಿಸ್ಥಿತಿ ಬದಲಾಗುತ್ತಿದೆ ಎಂದು ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು. ಕೃಷ್ಣಾ ಮೇಲ್ದಂಡೆ ಯೋಜನೆ 3 ನೇ ಹಂತ ಯೋಜನೆಗೆ ಇನ್ನೂ ಅಂತಿಮ ಅಧಿಸೂಚನೆ ಹೊರಡಿಸಿಲ್ಲ, ಆದರೆ ಅಲ್ಲಿಯವರೆಗೆ ನಾವು ಸುಮ್ಮನೆ ಕೂರಲಿಲ್ಲ, 1 ಸಾವಿರ ಕಿ.ಮೀ. ಮುಖ್ಯ ಕಾಲುವೆ ಜಾಲ, ಡಿಸ್ಟ್ರಿಬ್ಯೂಟರ್ ಕಾಲುವೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ, 14 ಸಾವಿರ ಕೋಟಿ ರೂ.ಗಳಷ್ಟು ಭೌತಿಕ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ, ಮುಳವಾಡ, ಚಿಮ್ಮಲಗಿ ಸೇರಿದಂತೆ ಅನೇಕ ನೀರಾವರಿ ಯೋಜನೆಗಳು ಇದರಲ್ಲಿ ಸೇರಿವೆ ಎಂದರು.

**ಬರ ಮರೆತು ಹೋಗಿದೆ – ತಾಪಮಾನ ಕುಗ್ಗಿದೆ...**

ಕಳೆದ ಮರ್ನ್ನಾಲ್ಕು ವರ್ಷಗಳಲ್ಲಿ ಬರ ಇದೆ ಎಂಬುದು ರೀತಿ ಮರೆತು ಹೋಗಿದೆ, ವಿಜಯಪುರ ತಾಪಮಾನವೂ ತಗ್ಗುತ್ತಿದೆ, ಈ ಹಿಂದಿನಂತೆ ಇದ್ದ ಬಿಸಿಲಿನ ತೀವ್ರತೆ ಇಲ್ಲ, ಕುಡಿಯುವ ನೀರಿಗಾಗಿ ಬೇಸಿಗೆ ಸಂದರ್ಭದಲ್ಲಿ ಸಾವಿರಾರು ರೂ. ಕೋಟಿ ರೂ. ವ್ಯಯಿಸಿ ಟ್ಯಾಂಕರ್ ನೀರು ಪೂರೈಸಬೇಕಿತ್ತು, ಬಿಜ್ಜರಗಿ ಒಂದೇ ಊರಿನಲ್ಲಿಯೇ 10 ಕೋಟಿ ರೂ. ಟ್ಯಾಂಕರ್ ನೀರು ಬಳಕೆಯಾಗುತ್ತಿತ್ತು, ಆದರೆ ಈಗ ಆ ಪರಿಸ್ಥಿತಿ ಇಲ್ಲ ಎಂದರು. ನೀರು, ನೀರಾವರಿ, ಕೋಟಿ ವೃಕ್ಷ ಅಭಿಯಾನ, ಕೆರೆ ತುಂಬುವ ಯೋಜನೆ ಫಲವಾಗಿ ಮೂರು ತಿಂಗಳ ಪ್ರಖರ ಬೇಸಿಗೆ ಕಾಲದ ಪ್ರಮಾಣ ವ್ಯಾಪಕ ಪ್ರಮಾಣದಲ್ಲಿ ತಗ್ಗಿದೆ ಎಂದರು.

ಈ ವೇಳೆ ದ್ರಾಕ್ಷಿ ತಳಿ ಬೆಳೆದ ಬೆಳೆಗಾರರು ವಿವರಣೆ ನೀಡಿ, ಔರಾ-36 ವಿಜಯಪುರ ತಾಪಮಾನಕ್ಕೆ ಹೊಂದುವಂತಹ ದ್ರಾಕ್ಷಿ ಬೆಳೆಯಾಗಿದ್ದು, ಸಹ್ಯಾದ್ರಿ ಸಂಸ್ಥೆ ಈ ತಳಿ ಪ್ರೋತ್ಸಾಹಕ್ಕೆ 10 ಕೋಟಿ ರೂ.ಗಳನ್ನು ವೆಚ್ಚ ಮಾಡಿದೆ, ಈ ತಳಿಯಲ್ಲಿ ಒಣ ದ್ರಾಕ್ಷಿಯನ್ನು ಸಿದ್ಧಪಡಿಸಲಾಗಿದ್ದು ಬ್ರ್ಯಾಂಡ್ ಮೂಲಕ ಮಾರುಕಟ್ಟೆ ಪ್ರವೇಶಕ್ಕೆ ಸಕಲ ಸಿದ್ಧತೆ ನಡೆಸಲಾಗುತ್ತಿದೆ, ಈ ತಳಿ 6 ತಿಂಗಳುಗಳ ಕಾಲ ಶ್ವೇತಗೃಹದಲ್ಲಿ ಇರಿಸಬಹುದಾಗಿದೆ ಎಂದರು.

ಕೆಲವೇ ದಿನಗಳ ಹಿಂದೆ ನೀರಿನ ಕೊರತೆ ಇತ್ತು, ತೊಟ್ಟು ನೀರು ಸಹ ಸಿಗುತ್ತಿರಲಿಲ್ಲ, ಕೇವಲ ಕೃಷ್ಣಾ ಶರದ್ ಮೊದಲಾದ ತಳಿಗಳಷ್ಟೇ ಬೆಳೆಯುವ ಈ ಪ್ರದೇಶದಲ್ಲಿ ಔರಾ ತಳಿ ಬೆಳೆಯುತ್ತಿರುವುದಕ್ಕೆ ಸಚಿವ ಡಾ.ಎಂ.ಬಿ. ಪಾಟೀಲರ ಪ್ರಯತ್ನದ ಫಲವಾಗಿ ಇದು ಸಾಧ್ಯವಾಗಿದೆ, ಕೃಷಿ ಪದವೀಧರರು ಉದ್ಯೋಗ ಅರಸಿ ಹೋಗುತ್ತಿದ್ದರು, ಆದರೆ ಈಗ ತೋಟಕ್ಕೆ ಮರಳಿ ತರುತ್ತಿದ್ದಾರೆ ಎಂದು ಸಚಿವ ಎಂ.ಬಿ.ಪಾಟೀಲ್ ಅವರ ನೀರಾವರಿ ಕಾರ್ಯಗಳನ್ನು ಶ್ಲಾಘಿಸಿ ಅಭಿನಂದನೆ ಸಲ್ಲಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)